ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ    Postal Reg. No. BDR/054/2026-2027 Email: mallammanudi@gmail.com  E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ    ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 51 ಸಂಚಿಕೆ- 51 | PAGE- 8 ಪುಟ-8 | ಭಾನುವಾರ 30.03.2025 | RS.2/- ಬೆಲೆ 2/-

# ಡಿಕೆಶಿ, ವಿಜಯೇಂದ್ರ

## ಸಿಡಿ ರೂವಾರಿಗಳು : ಯತ್ನಾಳ್



ಬೆಂಗಳೂರು,ಮಾ.29: ಹಿಂದಿನ ಬಿಜೆಪಿ ಸರ್ಕಾರದ ಅವಧಿಯಲ್ಲಿ ಅಲ್ಲೋಲ ಕಲ್ಲೋಲ ಸೃಷ್ಟಿಸಿದ್ದ ಅಂದಿನ ಬೃಹತ್ ನೀರಾವರಿ ಸಚಿವ ರಮೇಶ್ ಜಾರಕಿಹೊಳಿ ಮೇಲೆ ಕೇಳಿ ಬಂದಿದ್ದ ಸಿ.ಡಿ ಪ್ರಕರಣದ ಹಿಂದೆ ಹಾಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರುಗಳೇ ಪ್ರಮುಖ ರೂವಾರಿಗಳೆಂದು ಬಿಜೆಪಿಯಿಂದ ಉಚ್ಚಾಟಿತಗೊಂಡಿರುವ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಆರೋಪ ಮಾಡಿದ್ದಾರೆ.

ಬಿಜೆಪಿಯ ಪ್ರಾಥಮಿಕ ಸದಸ್ಯತ್ವದಿಂದ ಆರು ವರ್ಷಗಳ ಕಾಲ ಉಚ್ಚಾಟನೆಗೊಂಡ ಬಳಿಕ ಮೊದಲ ಬಾರಿಗೆ ಸುದ್ದಿಗಾರರ ಜೊತೆ ಮಾತನಾಡಿದ ಅವರು, ರಮೇಶ್ ಜಾರಕಿಹೊಳಿ ಸಿಡಿ ಹಗರಣ ಮಾಡಿದ್ದೇ ವಿಜಯೇಂದ್ರ ಮತ್ತು ಡಿ.ಕೆ.ಶಿವಕುಮಾರ್ ಅವರು. ಡಿಕೆಶಿ ಜತೆ ಸೇರಿ ವಿಜಯೇಂದ್ರ ಅವರು ರಮೇಶ್ ಜಾರಕಿಹೊಳಿ ಸಿಡಿ ಮಾಡಿಸಿದ್ದರು ಎಂದು ಆರೋಪಿಸಿದ್ದಾರೆ.

ಈಗ ಎದ್ದಿರುವ ಹನಿಟ್ರ್ಯಾಪ್ ಹಗರಣದಲ್ಲೂ ಇದೇ ತಂಡ ಇದೆ. ಸರ್ಕಾರ ಇದನ್ನು ಗಂಭೀರವಾಗಿ ಪರಿಗಣಿಸಿ ತನಿಖೆ ನಡೆಸಿದರೆ ಸತ್ಯಾಂಶ ಹೊರಬರಲಿದೆ ಎಂದರು.

ಅಪ್ಪ–ಮಕ್ಕಳ ಕುಟುಂಬವನ್ನು ರಾಜಕೀಯದಿಂದ ದೂರ ಮಾಡುತ್ತೇನೆ. ದೆಹಲಿಯಲ್ಲಿ ಇರುವ ನಮ್ಮ ಸಂಸದರು ಎಲ್ಲರೂ ವಿಜಯೇಂದ್ರ ವಿರುದ್ಧ ಇದ್ದಾರೆ. ಮೊದಲು ಅವರನ್ನು ಪಕ್ಷದಿಂದ ತೆಗೆದು ಹಾಕಬೇಕು ಎಂದು ಒತ್ತಾಯಿಸಿದ್ದಾರೆ ಎಂದರು. ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಮತ್ತು ವಿಜಯೇಂದ್ರ ಕೂಡ ಉಚ್ಚಾಟನೆಗೆ ಹೈಕಮಾಂಡ್ ಮೇಲೆ ಒತ್ತಡ ಹಾಕಿದ್ದಾರೆ. ಉಚ್ಚಾಟನೆ ಮಾಡಿದರೆ, ಬಿಜೆಪಿಯಿಂದ ಹೊರ ಹೋಗಬಹುದು ಎಂದು ಈ ಕುತಂತ್ರ ಅನುಸರಿಸಿದ್ದಾರೆ. ವೀರಶೈವ ಲಿಂಗಾಯತ ಸಮುದಾಯ ಯಡಿಯೂರಪ್ಪ,ವಿಜಯೇಂದ್ರ ಜತೆ ಇಲ್ಲ. ಮಹಾಭಾರತ,ರಾಮಾಯಣ ಕಾಲದಿಂದಲೂ ಈ ತರಹದ ಅನ್ಯಾಯ ನಡೆದುಕೊಂಡು ಬರುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಉಚ್ಚಾಟನೆ ಮರುಪರಿಶೀಲನೆಗೆ ನಾನು ಮನವಿ ಮಾಡಲ್ಲ, ನಮ್ಮ ತಂಡದವರು ಮನವಿ ಮಾಡಿದ್ದಾರೆ. ಒಬ್ಬ ಹಿಂದೂ ನಾಯಕನನ್ನು ಬಿಜೆಪಿ ಇಂದು ನಡೆಸಿಕೊಂಡ ರೀತಿಯನ್ನು ಇಡೀ ರಾಜ್ಯ ನೋಡುತ್ತಿದೆ. ಹಿಂದೂ ನಾಯಕನನ್ನು ಮುಗಿಸಬೇಕು ಎಂಬ ಕುತಂತ್ರ ನಡೆಯುತ್ತಿದೆ. ನಾನು ದೆಹಲಿಗೆ ಹೋಗಲ್ಲ, ಅಲ್ಲಿ ನನಗೆ ಏನೂ ಕೆಲಸ ಇಲ್ಲ. ಉಚ್ಚಾಟನೆ ಮರುಪರಿಶೀಲನೆಗೆ ನಾನು ಮನವಿ ಮಾಡಿಕೊಳ್ಳುವುದಿಲ್ಲ ಎಂದು ಯತ್ನಾಳ್ ಸ್ಪಷ್ಟಪಡಿಸಿದರು.

ಅಲ್ಲದೇ ಜನರೇ ಹೊಸ ಪಕ್ಷ ಕಟ್ಟಲು ಸಲಹೆ ಕೊಡುತ್ತಿದ್ದಾರೆ. ಯಾವ ವೀರಶೈವ ಲಿಂಗಾಯತರು ಯಡಿಯೂರಪ್ಪ ಜೊತೆಗಿಲ್ಲ. ಭ್ರಮೆಯಿಂದ ಕೇಂದ್ರದವರು ಹೊರಗೆ ಬರಬೇಕು. ರಾಮಾಯಣ, ಮಹಾಭಾರತದಲ್ಲೂ ಅಪಮಾನ ಮಾಡಿರೋದಿದೆ. ಹಾಗಾಗಿ ನನಗೆ ಯಾವ ಮುಜುಗರವೂ ಇಲ್ಲ. ಬಿಎಸ್‌ವೈ ಕುಟುಂಬವನ್ನು ನಾನು ಹೊರಗೆ ಇಡುವವರೆಗೂ ಬಿಡುವುದಿಲ್ಲ ಎಂದು ಶಪಥ ಮಾಡಿದರು.

ಮೂರು ನನಗೆ ಲಕ್ಕಿ, 3ನೇ ಬಾರಿ ಉಚ್ಚಾಟನೆ ಮಾಡಿರುವುದು ಮುಂದೆ ಏನಾಗುತ್ತದೆಯೋ ಕಾದುನೋಡಿ, ಇದಕ್ಕೆ ಕಾರಣಕರ್ತರಾದವರು

(2ನೇ ಪುಟ ನೋಡಿ)

# 168.5 ಕೋಟಿ ವೆಚ್ಚದ ಕಾಮಗಾರಿಗಳಿಗೆ

## ಸಚಿವ ಈಶ್ವರ ಖಂಡ್ರೆ ಚಾಲನೆ



ಮಲ್ಲಮ್ಮ ನುಡಿ ವಾರ್ತೆ ಬೀದರ :ಮಾ.29: ನೀರು ಜೀವ ಜಲ, ಆಹಾರ ಬೇಕಾದರೆ ಆಮದು ಮಾಡಿಕೊಳ್ಳಬಹುದು,ರಸ್ತೆ ವಿದ್ಯುತ್ ಇಲ್ಲದೆ ಇದ್ದರೆ ನಡೆಯುತ್ತದೆ ಆದರೆ ನೀರು ಇಲ್ಲದೆ ಇದ್ದರೆ ಬದುಕಲಿಕ್ಕೆ ಸಾಧ್ಯವಿಲ್ಲ. ಮನುಷ್ಯನಿಗೆ ಗಾಳಿ ಎಷ್ಟು ಮುಖ್ಯವೋ ನೀರು ಸಹ ಅಷ್ಟೆ ಮುಖ್ಯ ಎಂದು ಅರಣ್ಯ ಪರಿಸರ ಹಾಗೂ ಜೀವಿಶಾಸ್ತ್ರ ಮತ್ತು ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ. ಖಂಡ್ರೆ ಹೇಳಿದರು.

ಅವರು ಹುಮನಾಬಾದ್ ನಗರದ ಥೇರ್ ಮೈದಾನದಲ್ಲಿ ಶನಿವಾರ ನಗರಾಭಿವೃದ್ಧಿ ಇಲಾಖೆ,ಜಿಲ್ಲಾಡಳಿತ, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಹಾಗೂ ಪುರಸಭೆ, ಕೇಂದ್ರ ಪುರಸ್ಕೃತ ಯೋಜನೆಯಡಿ ಹುಮನಾಬಾದ್, ಚಿಟಗುಪ್ಪ ಹಾಗೂ ಹಳ್ಳಿಖೇಡ (ಬಿ) ಇವರ ಸಂಯುಕ್ತಾಶ್ರದಲ್ಲಿ ಕೇಂದ್ರ ಪುರಸ್ಕೃತ ಅಮೃತ 2.0 ಯೋಜನೆಯಡಿ ಹುಮನಾಬಾದ,

(2ನೇ ಪುಟ ನೋಡಿ)

# ಸಹೋದರಿಯ ಪ್ರೀತಿಸಿದ

## ಯುವಕನ ಕೊಂದ ಅಣ್ಣಂದಿರು

ಮಲ್ಲಮ್ಮ ನುಡಿ ವಾರ್ತೆ ಬೀದರ. ಮಾ. 29 : ತಂಗಿಯ ಪ್ರೀತಿಸಿದ ಎಂಬ ಕಾರಣಕ್ಕೆ ಯುವಕನನ್ನೇ ಹತ್ಯೆಗೈದ ಘಟನೆ ನಡೆದಿದೆ. ಬೀದರ್ ಜಿಲ್ಲೆಯ ಬಸವಕಲ್ಯಾಣ ತಾಲೂಕಿನ ನಿರಗುಡಿ ಗ್ರಾಮದಲ್ಲಿ ನಡೆದಿದೆ.

25 ವರ್ಷದ ಪ್ರಶಾಂತ್ ಬಿರಾದರ್ ಬರ್ಬರವಾಗಿ ಕೊಲೆಯಾಗಿದ್ದಾನೆ. ಮೃತ ಯುವಕ ಮತ್ತು ಆರೋಪಿಗಳ ಸಹೋದರಿ ಪ್ರೀತಿ ನಡುವೆ ಕೆಲ ವರ್ಷಗಳಿಂದ ಪ್ರೇಮಾಂಕುರವಾಗಿತ್ತು.

ಇದೇ ವಿಚಾರಕ್ಕೆ ಶುಕ್ರವಾರ ರಾತ್ರಿ



ನಿರಗುಡಿ ಗ್ರಾಮದಲ್ಲಿ ಮೃತ ಪ್ರಶಾಂತ ಹಾಗೂ ಯುವತಿ ಸಹೋದರರ ನಡುವೆ ಗಲಾಟೆಯಾಗಿದೆ. ಗಲಾಟೆ ವೇಳೆ ಪ್ರಶಾಂತ್ ತಲೆ ಮೇಲೆ ಕಲ್ಲು ಹಾಕಿ ಸಹೋದರರು ಬರ್ಬರವಾಗಿ ಹತ್ಯೆಗೈದಿದ್ದಾರೆ.


ಘಟನಾ ಸ್ಥಳಕ್ಕೆ ಡಿವೈಎಸ್‌ಪಿ ನ್ಯಾಮೇಗೌಡ, ಸಿಪಿಐ ಅಲಿಸಾಬ್ ಭೇಟಿನೀಡಿ ಪರಿಶೀಲನೆ ಮಾಡಿದ್ದಾರೆ. ಘಟನೆ ಸಂಬಂಧ ಬಸವಕಲ್ಯಾಣ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಕೊಲೆ ಮಾಡಿದ ಯಲ್ಲಾಲಿಂಗ ಮೇತ್ರೆ, ಪ್ರಶಾಂತ್ ಮೇತ್ರೆ ಎಂಬ ಇಬ್ಬರು ಸಹೋದರರ ವಿರುದ್ಧ ಪ್ರಕರಣ ದಾಖಲಾಗಿದ್ದು, ಆರೋಪಿಗಳಿಗಾಗಿ ಪೊಲೀಸರು ಬಲೆ ಬೀಸಿದ್ದಾರೆ.

# ಈದ್ ಸಂಭ್ರಮ, ಖರೀದಿ ಭರಾಟೆ

ಮಲ್ಲಮ್ಮ ನುಡಿ ವಾರ್ತೆ ಬೀದರ. ಮಾ. 29 : ರಂಜಾನ್ ಮಾಸದ ಉಪವಾಸ ವ್ರತಾಚರಣೆ ಕೊನೆಗೊಳ್ಳಲು ಇನ್ನೇರಡು ದಿನಗಳು ಬಾಕಿ ಉಳಿದಿದ್ದು, ಈದ್–ಉಲ್–ಫಿತ್ರ ಸಂಭ್ರಮ ಎಲ್ಲೆಡೆ ಈಗಲೇ ಮನೆ ಮಾಡಿದೆ.

ಅದರಲ್ಲೂ ನಗರದ ಓಲ್ಡ್ ಸಿಟಿಯಲ್ಲಿ ಈಗ ನಿತ್ಯವೂ ಖರೀದಿ ಭರಾಟೆ, ಜಾತ್ರೆಯ ವಾತಾವರಣ ಎಲ್ಲೆಡೆ ಕಂಡು ಬರುತ್ತಿದೆ.

ನಗರದ ನಯಾ ಕಮಾನ್, ಶಹಾಗಂಜ, ದರ್ಜಿ ಗಲ್ಲಿ, ಹಳೆ



ತರಕಾರಿ ಮಾರುಕಟ್ಟೆ, ಮಹಮೂದ್ ಗಾವಾನ್ ವೃತ್ತದ ಪ್ರಮುಖ ರಸ್ತೆಗಳಲ್ಲಿ ಜನದಟ್ಟಣೆ ಅಧಿಕವಾಗಿದೆ.

(2ನೇ ಪುಟ ನೋಡಿ)

# ಮುಧೋಳ ಬಳಿ ರಸ್ತೆ

## ಅಪಘಾತ:ಇಬ್ಬರ ಸಾವು




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.29– ಜಿಲ್ಲೆಯ ಮುಧೋಳ ತಾಲೂಕಿನ ಮುಗಳಖೋಡ ಕ್ರಾಸ್ ಬಳಿ ಶನಿವಾರ ಸಂಭವಿಸಿದ ರಸ್ತೆ ಅಪಘಾತದಲ್ಲಿ ಇಬ್ಬರು ಸಾವನ್ನಪ್ಪಿದ್ದು, ಕೆಲವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಬೈಕ್ ಮೇಲೆ ಹೊರಟಿದ್ದ ದಂಪತಿ ಮುಗಳಖೋಡದ ಶಂಕರ ಸಿದ್ದಪ್ಪ ಲಕ್ಷ್ಮೇಶ್ವರ(55)ಹಾಗೂ ಶ್ರೀದೇವಿ ಶಂಕರ ಲಕ್ಷ್ಮೇಶ್ವರ(50)ಅಪಘಾತದಲ್ಲಿ ಸ್ಥಳದಲ್ಲಿಯೇ ಮೃತಪಟ್ಟಿದ್ದಾರೆ. ಚಿಕ್ಕೋಡಿಯಿಂದ ಕೆ.ಎಸ್.ಆರ್.ಟಿ.ಸಿ ಬಸ್ಸು ಶ್ರೀಶೈಲಕ್ಕೆ ತೆರಳುತ್ತಿದ್ದು, ಮೃತ ಬೈಕ್ ಸವಾರರು ಮುಧೋಳ ಕಡೆಗೆ ಹೊರಟಿದ್ದಾಗ ಮುಗಳಖೋಡ ಕ್ರಾಸ್ ಬಳಿ ಈ ಅಪಘಾತ ಸಂಭವಿಸಿದೆ. ಬೈಕ್ ಗೆ ಢಿಕ್ಕಿ ಹೊಡೆದ ನಂತರ ಬಸ್ಸು ಸ್ವಾಗತ ಕಮಾನ ಕಂಬಕ್ಕೆ ಡಿಕ್ಕಿ ಹೊಡೆದು ಫಲ್ಟಿಯಾಗಿದೆ. ಬಸ್ ಪ್ರಯಾಣಿಕರಲ್ಲಿ ಕೆಲವರಿಗೆ ಗಂಭೀರ ಸ್ವರೂಪದ ಗಾಯಗಳಾಗಿದ್ದು, ಗಾಯಾಳುಗಳನ್ನು ಮುಧೋಳ ಹಾಗೂ ಬಾಗಲಕೋಟೆ ಆಸ್ಪತ್ರೆಗಳಲ್ಲಿ ಚಿಕಿತ್ಸೆಗೆ ದಾಖಲಿಸಲಾಗಿದೆ. ಮುಧೋಳ ಪೋಲಿಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಬ್ಯಾಂಕ್‌ಗಳನ್ನು 'ಲೂಟಿ ಏಜೆಂಟ್'ಗಳಾಗಿ

## ಮಾಡಿದ ಮೋದಿ ಸರ್ಕಾರ: ಖರ್ಗೆ



ಮಲ್ಲಮ್ಮನುಡಿವಾರ್ತೆ ನವದೆಹಲಿ:ಮಾ.29: ಎಟಿಎಂ ನಗದು ಹಿಂಪಡೆಯುವಿಕೆಯ ಮೇಲಿನ ಶುಲ್ಕವನ್ನು ಹೆಚ್ಚಿಸಲು ಬ್ಯಾಂಕುಗಳಿಗೆ ಅವಕಾಶ ನೀಡುವ ಆರ್‌ಬಿಐ ನಿರ್ಧಾರದ ಕುರಿತು ಶನಿವಾರ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಮೋದಿ ನೇತೃತ್ವದ ಸರ್ಕಾರವನ್ನು ತರಾಟೆಗೆ ತೆಗೆದುಕೊಂಡಿದ್ದಾರೆ.

ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್‌ನಲ್ಲಿ ಪೋಸ್ಟ್ ಮಾಡಿರುವ ಅವರು, ಪ್ರಧಾನಿ ನರೇಂದ್ರ ಮೋದಿಯವರು ಬ್ಯಾಂಕುಗಳನ್ನು ನಾಗರಿಕರನ್ನು 'ಲೂಟಿ' ಮಾಡಲು 'ಕಲೆಕ್ಷನ್ ಏಜೆಂಟ್'ಗಳನ್ನಾಗಿ ಮಾಡಿದೆ. ಬೆಲೆ ಏರಿಕೆ ಮತ್ತು 'ಲೂಟಿ' ಬಿಜೆಪಿಯ ಮಂತ್ರವಾಗಿದೆ ಎಂದಿದ್ದಾರೆ.

'ದುರದೃಷ್ಟವಶಾತ್, ನಮ್ಮ ಬ್ಯಾಂಕುಗಳನ್ನು ಮೋದಿ ಸರ್ಕಾರ 'ಕಲೆಕ್ಷನ್ ಏಜೆಂಟ್'ಗಳನ್ನಾಗಿ ಮಾಡಿದೆ! ಎಟಿಎಂ ವಿತ್‌ಡ್ರಾ ಶುಲ್ಕಗಳು ದುಬಾರಿಯಾಗಿವೆ. 2018 ಮತ್ತು 2024ರ ನಡುವೆ ಕನಿಷ್ಠ ಬ್ಯಾಲೆನ್ಸ್ ಕಾಯ್ದುಕೊಳ್ಳದ ಕಾರಣ ಉಳಿತಾಯ ಖಾತೆಗಳು ಮತ್ತು ಜನ ಧನ್ ಖಾತೆಗಳಿಂದ ನರೇಂದ್ರ ಮೋದಿ ಸರ್ಕಾರ ಕನಿಷ್ಠ 43,500 ಕೋಟಿ ರೂ. ಸಂಗ್ರಹಿಸಿದೆ' ಎಂದು ಹೇಳಿದರು.'ಪ್ರತಿ ವರ್ಷ 100 ರಿಂದ 200 ರೂ. ನಿಷ್ಕ್ರಿಯತೆಯ ಶುಲ್ಕ, ಬ್ಯಾಂಕ್ ಸ್ಟೇಟ್‌ಮೆಂಟ್ ನೀಡಲು 50 ರಿಂದ 100 ರೂ. ಶುಲ್ಕ, ಎಸ್‌ಎಂಎಸ್ ಅಲರ್ಟ್‌ಗಳಿಗೆ ಪ್ರತಿ ತ್ರೈಮಾಸಿಕಕ್ಕೆ 20 ರಿಂದ 25 ರೂ. ವಿಧಿಸಲಾಗುತ್ತಿದೆ. ಸಾಲ ಸಂಸ್ಕರಣಾ ಶುಲ್ಕವಾಗಿ ಶೇ 1–3 ರಷ್ಟು ಶುಲ್ಕ ವಿಧಿಸುತ್ತವೆ. ಬ್ಯಾಂಕುಗಳು

(2ನೇ ಪುಟ ನೋಡಿ)






## ಒಂದನೇ ಪುಟದಿಂದ

# ಸಚಿವ ಈಶ್ವರ ಖಂಡ್ರೆ ಚಾಲನೆ

ಚಿಟಗುಪ್ಪಾ, ಮತ್ತು ಹಳ್ಳಿಖೇಡ (ಬಿ) ಪಟ್ಟಣಗಳಿಗೆ ಕಾರಂಜಾ ಜಲಾಶಯದಿಂದ ನೀರು ಸರಬರಾಜು ಅಭಿವೃದ್ಧಿ ಯೋಜನೆಯ 1.60 ಕೋಟಿ ಅನುದಾನದ ಕಾಮಗಾರಿಗೆ ಶಂಕು ಸ್ಥಾಪನೆ ಹಾಗೂ ಜೆಸ್ಕಾಂ ವತಿಯಿಂದ ನಿಂಬೂರ ಗ್ರಾಮದಲ್ಲಿ 8.5 ಕೋಟಿ ವೆಚ್ಚದ 33/11 ಕೆ.ವಿ. ವಿದ್ಯುತ್ ಉಪಕೇಂದ್ರ ನಿರ್ಮಾಣ ಕಾಮಗಾರಿಗಳಿಗೆ ಶಂಕು ಸ್ಥಾಪನೆ ನೇರವೇರಿಸಿ ಮಾತನಾಡಿದರು.

ನಗರಗಳು ನವೀಕರಣಗೊಳ್ಳುತ್ತಿವೆ ಜನರು ಅನೇಕ ಕಾರಣಗಳಿಂದ ಹಳ್ಳಿ ಕಡೆಯಿಂದ ನಗರದ ಕಡೆಗೆ ವಲಸೆ ಬರುತ್ತಿದ್ದಾರೆ. ಉದ್ಯೋಗ, ಮಕ್ಕಳ ಶಿಕ್ಷಣಕ್ಕಾಗಿ ಆರೋಗ್ಯದ ಸಮಸ್ಯಗಳಿಗೆ ಬರುತ್ತಾರೆ. ಇದರಿಂದ ನಗರ ಪ್ರದೇಶದಲ್ಲಿ ಒತ್ತಡ ಹೆಚ್ಚಾಗುತ್ತಿದೆ. ಅಧಿಕೃತವಾಗಿ ಅನಧಿಕೃತವಾಗಿ ಬಡವಾಣೆಗಳು ನಿರ್ಮಾಣವಾಗುತ್ತಿವೆ. ಆ ಬಡಾವಣೆಗೆ ಕುಡಿಯುವ ನೀರು, ವಿದ್ಯುತ್ ದೀಪ , ಚರಂಡಿ ವ್ಯವಸ್ಥೆ ಬೇಕು. ಬೇಸಿಗೆಯಲ್ಲಿ ಭಾವಿಗಳು ಹಾಗೂ ಬೋರವೇಲ್‌ಗಳು ಬತ್ತಿ ಹೋಗಿ ನೀರಿಗೆ ಹಾಹಾಕಾರ ಉಂಟಾಗುವ ನಿಟ್ಟಿನಲ್ಲಿ ಬೀದರ ಜಿಲ್ಲೆಯ ಭಾಲ್ಕಿ, ಹುಮನಾಬಾದ, ಚಿಟಗುಪ್ಪಾ, ಹಳ್ಳಿಖೇಡ ಪಟ್ಟಣಗಳಿಗೆ ಕುಡಿಯುವ ನೀರು ಕಾರಂಜಾ ಜಲಾಶಯದಿಂದ ನೀರು ಸರಬರಾಜು ಆಗುತ್ತಿದೆ. ಹಾಗೂ 28 ಸಾವಿರ ಹೆಕ್ಟರ್ ಭೂಮಿಗೆ ನೀರುಣಿಸಲು ಸಹಕಾರಿಯಾಗಿದೆ. 1500 ಸಾವಿರ ಕೋಟಿ ಅನುದಾನದಲ್ಲಿ ಜಲ ಜೀವನ ಮಿಷನ್ ಅಡಿಯಲ್ಲಿ ಕುಡಿಯುವ ನೀರಿನ ಯೋಜನೆ ರೂಪಿಸಿ 800 ಜನ ವಸತಿ ಪ್ರದೇಶಗಳಿಗೆ ಶಾಶ್ವತ ಕುಡಿಯುವ ನೀರು ಒದಗಿಸುವ ಕೆಲಸ ಮಾಡುತ್ತಿದ್ದೇವೆ. ಇದಕ್ಕೆ ಮೂಲ ಕಾರಂಜಾ ಜಲಾಶಯ ಎಂದರು.

ಹುಮನಾಬಾದ ಜನಸಂಖ್ಯೆ 55 ಸಾವಿರ ಇದೆ. ಚಿಟಗುಪ್ಪಾ , ಹಳ್ಳಿಖೇಡ ಸೇರಿದರೆ 1 ರಿಂದ 1.2 ಲಕ್ಷ ಜನಸಂಖ್ಯೆ ಕುಡಿಯುವ ನೀರು ಶಾಶ್ವತವಾಗಿ ಕೊಡಬೇಕು ಎಂದು ಮುಂದಾಲೋಚನೆ ಮಾಡಿ. 33ಎಂಎಲ್‌ಡಿ ವರೆಗೆ ಈ ಯೋಜನೆ ತಯ್ಯಾರಿಸಲಾಗಿದೆ ಎಂದರು. ಇದರಿಂದ ಪ್ರತಿಯೊಬ್ಬರಿಗೆ 100 ಲೀಟರ್ ನೀರು ಪ್ರತಿದಿನ ಸಿಗುತ್ತದೆ. ನೀರು ಸೋರಿಕೆಯಾಗದಂತೆ ಸರಬರಾಜು ಮಾಡಬೇಕು. ಬೀದರ್ ಜಿಲ್ಲೆಯ ಸರ್ವತೋಮು ಅಭಿವೃದ್ಧಿಗೆ ಪೂರಕವಾಗಿ ನಮ್ಮ ಸರ್ಕಾರ ಸಾಕಷ್ಟು ಅನುದಾನ ನೀಡುತ್ತಿದೆ. ಅಧಿಕಾರಿಗಳು ಹೆಚ್ಚಿನ ಶ್ರಮ ವಹಿಸಿ ಕಾರ್ಯ ನಿರ್ವಹಿಸಬೇಕು. ಗುಣಮಟ್ಟದ ಕಾಮಗಾರಿಗೆ ಅಧಿಕಾರಿಗಳು ಒತ್ತು ನೀಡಬೇಕು ಎಂದು ಅಧಿಕಾರಿಗಳಿಗೆ ಸೂಚನೆ ನೀಡಿದರು. ನಿಂಬುರ ಗ್ರಾಮದಲ್ಲಿ 8.5 ಕೋಟಿ ವೆಚ್ಚದಲ್ಲಿ 33/11ಕೆವಿ ವಿದ್ಯುತ್ ಕೇಂದ್ರ ಸ್ಥಾಪಿಸಿ ಎಲ್ಲಾ ರೈತರಿಗೆ ಗುಣಮಟ್ಟದ ವಿದ್ಯುತ್ ಸಿಗುವಂತೆ ಮಾಡಲಾಗಿದೆ ಎಂದು ಹೇಳಿದರು.

ಪೌರಾಡಳಿ ಹಾಗೂ ಹಜ್ ಖಾತೆ ಸಚಿವರಾದ ರಹೀಮ್ ಖಾನ್ ಮಾತನಾಡಿ, ಬೀದರ್ ಜಿಲ್ಲೆಯಲ್ಲಿ ಹುಮನಾಬಾದ್ ಹಾಗೂ ಭಾಲ್ಕಿ ಐತಿಹಾಸಿಕ ಪ್ರಸಿದ್ಧಿ ಪಡೆದ ತಾಲೂಕ ಕೇಂದ್ರಗಳಾಗಿವೆ. ಹೀಗಾಗಿ ಶಾಸಕ ಸಿದ್ದು ಪಾಟೀಲ್, ವಿಧಾನ ಪರಿಷತ್ ಸದಸ್ಯರುಗಳಾದ ಚಂದ್ರಶೇಖರ ಪಾಟೀಲ್, ಭೀಮರಾವ ಪಾಟೀಲ್ ಅವರ ಮನವಿಯಂತೆ ಹುಮನಾಬಾದ್, ಭಾಲ್ಕಿ ನಗರಸಭೆ ಹಾಗೂ ಮನ್ನಾಖೇಳಿ, ಕಮಠಾಣ, ರಾಜೇಶ್ವರ ಗ್ರಾಮಗಳು ಪಟ್ಟಣ ಪಂಚಾಯಿತಿಯಾಗಿ ಮೇಲ್ದರ್ಜೆಗೆ ಏರಿಸಲು ಪ್ರಾಮಾಣಿಕ ಪ್ರಯತ್ನ ಮಾಡಲಾಗುವುದು ಎಂದು ಭರವಸೆ ನೀಡಿದರು.

ಹುಮನಾಬಾದ ಶಾಕಸಕರಾದ ಡಾ. ಸಿದ್ದಲಿಂಗ ಪಾಟೀಲ್ ಮಾತನಾಡಿ, ಈ ಹಿಂದೆ ಮಿರಾಜೋದ್ದಿನ್ ಪಟೇಲ್ ಶಾಸಕರಾಗಿದ್ದ ಸಂದರ್ಭದಲ್ಲಿ ಕಾರಂಜಾ ಜಲಾಶಯದಿಂದ ನೀರು ಸರಬರಾಜು ಕಾರ್ಯಕ್ಕೆ ಚಾಲನೆ ನೀಡಲಾಗಿತ್ತು. ನಾನು ಶಾಸಕನಾದ ಮೇಲೆ ಜನರ ನಿರೀಕ್ಷೆಗೆ ತಕ್ಕಂತೆ ಬಹುದೊಡ್ಡ ಯೋಜನೆಗೆ ಚಾಲನೆ ನೀಡುತ್ತಿರುವುದು ಇದು ನನ್ನ ಪಾಲಿನ ಸೌಭಾಗ್ಯವಾಗಿದೆ. ಹಳ್ಳಿಖೇಡ (ಬಿ) ವ್ಯಾಪ್ತಿಯ ಗ್ರಾಮೀಣ ಭಾಗದ ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಹಳ್ಳಿಖೇಡ (ಬಿ) ಪಟ್ಟಣದಲ್ಲಿ ಪದವಿ ಪೂರ್ವ ಹಾಗೂ ಪದವಿ ಕಾಲೇಜು ಮಂಜೂರು ಮಾಡಿಕೊಡಬೇಕು. ಚಿಟಗುಪ್ಪ ತಾಲ್ಲೂಕ ಕೇಂದ್ರದಲ್ಲಿ ಸರಕಾರದ ಎಲ್ಲ ಇಲಾಖೆ ಕಾರ್ಯ ನಿರ್ವಹಿಸುವಂತೆ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ವಿಧಾನ ಪರಿಷತ ಸದಸ್ಯ ಡಾ. ಚಂದ್ರಶೇಖರ ಪಾಟೀಲ್ ಮಾತನಾಡಿ, ಹುಮನಾಬಾದ್ ಮತ್ತು ಚಿಟಗುಪ್ಪ ವ್ಯಾಪ್ತಿಯ ಒಟ್ಟು 3 ಪುರಸಭೆ ಪಟ್ಟಣಗಳ ಜನರ ಅನುಕೂಲಕ್ಕಾಗಿ ಮಾಜಿ ಸಚಿವ ರಾಜಶೇಖರ ಪಾಟೀಲ್ ಅವರ ಅವಧಿಯಲ್ಲಿ ನೀರು ಸರಬರಾಜು ಕುರಿತು ಸರಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಅದು ವಿಳಂಬವಾಗಿ ಪ್ರಸ್ತುತ ಸಾಲಿನಲ್ಲಿ ಶಂಕು ಸ್ಥಾಪನೆ ಮಾಡಲಾಗುತ್ತಿದೆ. ಜನರ ಕಲ್ಯಾಣಕ್ಕಾಗಿ ರಾಜೇಶ್ವರ, ಕಮಠಾಣ ಹಾಗೂ ಮನ್ನಾಖೇಳಿ ಪಟ್ಟಣ ಪಂಚಾಯಿತಿ ಜತೆಗೆ ಹುಮನಾಬಾದ್ ಭಾಲ್ಕಿ ನಗರ ಸಭೆಗಳಾಗಿ ಮೇಲ್ದೇರ್ಜೆಗೆರಿಸಬೇಕು ಎಂದರು.

ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯರಾದ ಭೀಮರಾವ ಪಾಟೀಲ್, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿವಾಹಕ ಅಧಿಕಾರಿ ಡಾ. ಗಿರೀಶ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ,ಕರ್ನಾಟಕ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಸಹಯಕ ಕಾರ್ಯಪಾಲಕ ಅಭಿಯಂತರ ರವೀಂದ್ರ ಗಣಗೊಂಡ, ಹುಮನಾಬಾದ, ಚಿಟಗುಪ್ಪಾ, ಹಳ್ಳಿಖೇಡ್ ಪುರಸಭೆ ಮುಖ್ಯ ಅಧಿಕಾರಿಗಳು, ತಹಸೀಲ್ದಾರ್ ಅಂಜುಮ್ ತಬಸುಮ್, ತಾಲ್ಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ದೀಪಿಕಾ ನಾಯರ್ ಸೇರಿದಂತೆ ಪುರಸಭೆಗಳ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಸಂಭ್ರಮ, ಖರೀದಿ ಭರಾಟೆ

ಈ ಭಾಗದಲ್ಲಿರುವ ಬಟ್ಟೆ, ದಿನಸಿ, ಖರ್ಜೂರ, ಅಲಂಕಾರಿಕ ವಸ್ತುಗಳು, ಸಿದ್ಧಉಡುಪು, ಸೀರೆ, ಬಳೆ ಹಾಗೂ ವೃತ್ತಗಳು ವಿದ್ಯುತ್ ದೀಪಗಳಿಂದ ಕಂಗೊಳಿಸುತ್ತಿವೆ.

ಪಡುವಣ ದಿಕ್ಕಿನಲ್ಲಿ ಸೂರ್ಯ ಮರೆಯಾಗುತ್ತಿದ್ದಂತೆ ಮಾರುಕಟ್ಟೆಯಲ್ಲಿ ಜನಸಂದಣಿ ಹೆಚ್ಚಾಗುತ್ತಿದೆ. ತಡರಾತ್ರಿ ವರೆಗೆ ಮುಸ್ಲಿಮರು ಹಬ್ಬಕ್ಕೆ ಬೇಕಿರುವ ಅಗತ್ಯ ವಸ್ತುಗಳನ್ನು ಖರೀದಿಸುತ್ತಿದ್ದಾರೆ. ಉಪವಾಸ ವ್ರತಾಚರಣೆ, ಬಿಸಿಲು ಹೆಚ್ಚಿನ ಪ್ರಮಾಣದಲ್ಲಿ ಇರುವುದರಿಂದ ಹಗಲಿನಲ್ಲಿ ಖರೀದಿಗೆ ಹೆಚ್ಚಿನವರು ಹೊರಗೆ ಹೋಗುತ್ತಿಲ್ಲ. ಮುಸ್ಲಿಮರ ಮನವಿ ಮೇರೆಗೆ ಜಿಲ್ಲಾ ಪೊಲೀಸ್ ಇಲಾಖೆಯು ತಡರಾತ್ರಿ ತನಕ ಮಾರಾಟ ಹಾಗೂ ಖರೀದಿಗೆ ಅವಕಾಶ ಕಲ್ಪಿಸಿಕೊಟ್ಟಿದೆ. ಇದರಿಂದಾಗಿ ಸಂಜೆ ತಂಪಾದ ವಾತಾವರಣದಲ್ಲಿ ಜನ ಕುಟುಂಬ ಸದಸ್ಯರೊಡನೆ ಹೊರಗಡೆ ಬಂದು ಅವರಿಗೆ ಅಗತ್ಯವಿರುವ ವಸ್ತುಗಳನ್ನು ತಡರಾತ್ರಿ ವರೆಗೆ ಓಡಾಡಿ ಖರೀದಿಸುತ್ತಿದ್ದಾರೆ.

ರಸ್ತೆಯುದ್ದಕ್ಕೂ ದ್ರಾಕ್ಷಿ, ಕಲ್ಲಂಗಡಿ, ದಾಳಿಂಬೆ, ಸೀಬೆಹಣ್ಣು, ಕಿತ್ತಳೆ, ಖರ್ಜೂರ, ಶಾವಿಗೆ, ಮದರಂಗಿ, ಗೋಡಂಬಿ, ಬಾದಾಮಿ, ಸುಗಂಧ ದ್ರವ್ಯ, ಸಿದ್ಧ ಉಡುಪುಗಳು, ಚಪ್ಪಲಿ, ಶೂ, ಅಲಂಕಾರಿಕ ವಸ್ತುಗಳನ್ನು ಮಾರಾಟಕ್ಕೆ ಇಡಲಾಗಿದೆ. ಸ್ಥಳೀಯರು ಸೇರಿದಂತೆ ಹೊರಗಿನ ವ್ಯಾಪಾರಿಗಳು ಸಹ ರಸ್ತೆಯ ಬದಿಯಲ್ಲಿ ವಸ್ತುಗಳನ್ನು ಮಾರಾಟ ಮಾಡುತ್ತಿದ್ದಾರೆ. ಸಂಜೆಯಾದ ನಂತರ ಎಲ್ಲರಿಗೂ ಬಿಡುವಿಲ್ಲದ ಕೆಲಸ. ಕೈತುಂಬ ಹಣ ಗಳಿಸಲು ಇದೇ ಅವಕಾಶ ಎಂದು ಕೆಲವರು ಈ ಹಿಂದೆಯೇ ದಾಸ್ತಾನು ತರಿಸಿಕೊಂಡು, ಈಗ ಮಾರಾಟಕ್ಕೆ ಮುಂದಾಗಿದ್ದಾರೆ. ಈದ್–ಉಲ್–ಫಿತ್ರ ಹಬ್ಬಕ್ಕೆ ಬಗೆಬಗೆಯ ಬಟ್ಟೆ, ಅಲಂಕಾರಿಕ ವಸ್ತುಗಳು ಬಂದಿರುವುದರಿಂದ ಮುಸ್ಲಿಂ ಸಮುದಾಯದವರಷ್ಟೇ ಅಲ್ಲ, ಹಿಂದೂ, ಕ್ರೈಸ್ತರು, ಬೌದ್ಧರು ಸೇರಿದಂತೆ ಇತರೆ ಧರ್ಮೀಯರು ಮಾರುಕಟ್ಟೆಗೆ ಹೋಗಿ ವಸ್ತುಗಳನ್ನು ಖರೀದಿಸುತ್ತಿದ್ದಾರೆ. ಇದರಿಂದ ಸಹಜವಾಗಿಯೇ ಜನದಟ್ಟಣೆ ಹೆಚ್ಚಾಗಿದೆ. ಹಬ್ಬಕ್ಕೆ ತೆರೆದುಕೊಂಡಿರುವ ಮಾರುಕಟ್ಟೆ ಸೌಹಾರ್ದವೂ ಮೂಡಿಸುತ್ತಿದೆ. ಖರೀದಿಗಷ್ಟೇ ಸೀಮಿತವಾಗಿಲ್ಲ. ರಂಜಾನ್ ಮಾಸಕ್ಕೆಂದೆ ವಿಶೇಷವಾಗಿ ತಯಾರಿಸಲಾಗುವ ಹರೀಸ್, ದಹಿ ವಡೆ, ಸಮೋಸಾ ಕೂಡ ಜನ ಸವಿಯುತ್ತಿದ್ದಾರೆ. ಮಿರ್ಚಿ, ಮಿಸಳ್, ಚೂಡಾ, ಚಿಕನ್ ಬಿರಿಯಾನಿ, ಮಟನ್ ಬಿರಿಯಾನಿ, ಕಬಾಬ್ ಸೇರಿದಂತೆ ಅನೇಕ ಖಾದ್ಯಗಳನ್ನು ಮಾರಾಟ ಮಾಡಲಾಗುತ್ತಿದೆ. ಲಸ್ಸಿ, ಇರಾನಿ ಚಹಾಕ್ಕೂ ಹೆಚ್ಚಿನ ಬೇಡಿಕೆ ಇದೆ. ವರ್ಷದಿಂದ ವರ್ಷಕ್ಕೆ ಇರಾನಿ ಚಹಾ ಕುಡಿಯುವವರ ಸಂಖ್ಯೆ ಹೆಚ್ಚಾಗುತ್ತಿದೆ. 'ಯಾವುದೇ ಹಬ್ಬವಿರಲಿ ಆ ನಿರ್ದಿಷ್ಟ ಸಮುದಾಯದವರು ಹೆಚ್ಚಿನ ಪ್ರಮಾಣದಲ್ಲಿ ಖರೀದಿಸುತ್ತಾರೆ. ಆದರೆ, ಇತರೆ ಧರ್ಮೀಯರು ಮಾರುಕಟ್ಟೆಗೆ ಬಂದು ಅವರಿಗಿಷ್ಟವಾದ ವಸ್ತುಗಳನ್ನು ಖರೀದಿಸುತ್ತಾರೆ. ಪ್ರತಿ ವರ್ಷ ನಾನು ಶಹಾಗಂಜ್ ಮುಖ್ಯರಸ್ತೆಯಲ್ಲಿ ಸಿದ್ಧಉಡುಪು ಮಾರಾಟ ಮಾಡುತ್ತೇನೆ. ಈ ವರ್ಷ ಕಳೆದ ಎರಡ್ಮೂರು ದಿನಗಳಿಂದ ಖರೀದಿಗೆ ಬರುವವರ ಸಂಖ್ಯೆ ಹೆಚ್ಚಾಗಿದೆ. ಇನ್ನೆನು ಹಬ್ಬಕ್ಕೆ ಎರಡು ದಿನಗಳು ಉಳಿದಿವೆ. ಅಷ್ಟರೊಳಗೆ ಎಲ್ಲ ದಾಸ್ತಾನು ಮುಗಿಯುವ ವಿಶ್ವಾಸ ಇದೆ. ಪ್ರತಿ ವರ್ಷದಂತೆ ಈ ವರ್ಷವೂ ಕೈತುಂಬ ಹಣ ಗಳಿಸಿದ್ದೇನೆ. ಇಂತಹ ಹಬ್ಬಗಳಿಂದ ನಮ್ಮಂತಹ ಬಡವರಿಗೆ ಸ್ವಲ್ಪ ಹಣ ಗಳಿಸಲು ಅವಕಾಶ ಇದ್ದಂತೆ' ಎಂದು ವ್ಯಾಪಾರಿ ಶೇಕ್ ಮುಸ್ತಫಾ ಪ್ರತಿಕ್ರಿಯಿಸಿದರು.

# ಸಿಡಿ ರೂವಾರಿಗಳು : ಯತ್ನಾಳ್

ನಾಶವಾಗಲಿದ್ದಾರೆ. ಯಾರಿಗೂ ಮನವರಿಕೆ ನಾನು ಮಾಡುವುದಿಲ್ಲ. ಜನಮೆಚ್ಚಿದ ನಾಯಕ ಯಾರೂ ಇಲ್ಲ. ವಿಜಯೇಂದ್ರ ಸೇರಿ ಯಾರಿಗೂ 3 ಜನ ಸೇರಿಸುವ ಯೋಗ್ಯತೆ ಇಲ್ಲ. ಆದರೆ ನಾನು ಬಾಡಿಗೆ ಜನ ತಂದಿಲ್ಲ. ವಿಜಯಪುರದಲ್ಲಿ ಬಾಡಿಗೆ ಕೊಟ್ಟು ಕರೆಸಿಲ್ಲ. ಕಳೆದ ಚುನಾವಣೆಯಲ್ಲಿ ವಿಧಾನಪರಿಷತ್ ಸದಸ್ಯ ಸಿ.ಟಿ.ರವಿಯನ್ನು ತನ್ನ ಚೇಲಾ ನಿಲ್ಲಿಸಿ ಯಡಿಯೂರಪ್ಪ ಸೋಲಿಸಿದ ಎಂದು ಯತ್ನಾಳ್ ಮಾರ್ಮಿಕವಾಗಿ ನುಡಿದರು.

ನಾನು ಹಿಂದೂ ಪರವಾಗಿ ಹೋರಾಟ ಮಾಡುತ್ತೇನೆ. ಇಡೀ ರಾಜ್ಯ ಸುತ್ತುತ್ತೇನೆ. ಜನರೇ ಹೊಸ ಪಕ್ಷ ಕಟ್ಟಲು ಸಲಹೆ ಕೊಡುತ್ತಿದ್ದಾರೆ. ಹಿಂದೂಗಳ ರಕ್ಷಣೆ ಮಾಡುವವರು ಯಾರೂ ಇಲ್ಲ. ಉತ್ತರ ಕರ್ನಾಟಕದ ಬಗ್ಗೆ ಮಾತನಾಡುವವರು ಯಾರೂ ಇಲ್ಲ. ನಮ್ಮ ಹಿಂದೆ ಬಹಳ ದೊಡ್ಡ ಶಕ್ತಿ ಇದೆ. ರಾಘವೇಂದ್ರ ಹೊರತು ಪಡಿಸಿ ಎಲ್ಲಾ ಸಂಸದರೂ ನಮ ಪರ ಇದ್ದಾರೆ ಎಂದರು. ನಾನು ಯಾವತ್ತೂ ಬಿಜೆಪಿಯನ್ನು ತೊರೆಯುವುದಿಲ್ಲ, ರಾಜ್ಯದಾದ್ಯಂತ ಸುತ್ತಿ ಬಿಜೆಪಿಯನ್ನು ರಿಪೇರಿ ಮಾಡುತ್ತೇನೆ, ಸನಾತನ ಹಿಂದೂ ಧರ್ಮದಿಂದ ಹಳಿ ತಪ್ಪಿರುವ ಪಕ್ಷವನ್ನು ಪುನಃ ಟ್ರ್ಯಾಕ್ ಮೇಲೆ ತರುವ ಕೆಲಸ ಮಾಡುತ್ತೇನೆ ಹೊರತು ಹೊಸ ಪಕ್ಷ ಕಟ್ಟುವ ಕೆಲಸಕ್ಕೆ ಕೈ ಹಾಕುವುದಿಲ್ಲ ಎಂದು ಯತ್ನಾಳ್ ಸ್ಪಷ್ಟಪಡಿಸಿದರು.

## ಲೂಟಿ ಏಜೆಂಟ್'ಗಳಾಗಿ ಮಾಡಿದ ಮೋದಿ ಸರ್ಕಾರ: ಖರ್ಗೆ

ಸಾಲವನ್ನು ಸಮಯಕ್ಕೆ ಸರಿಯಾಗಿ ಪಾವತಿಸಿದರೆ, ಲೋನ್ ಪ್ರೀ–ಕ್ಲೋಸರ್ ಶುಲ್ಕವನ್ನು ವಿಧಿಸುತ್ತವೆ. ನೆಫ್ಟ್ ಮತ್ತು ಡಿಮ್ಯಾಂಡ್ ಡ್ರಾಫ್ಟ್ ಶುಲ್ಕಗಳು ಕೂಡ ಹೆಚ್ಚುವರಿ ಹೊರೆಯಾಗಿದೆ. ಸಹಿ ಬದಲಾವಣೆಗಳಂತಹ ಕೆವೈಸಿ ನವೀಕರಣಗಳಿಗೂ ಸಹ ಶುಲ್ಕವನ್ನು ವಿಧಿಸುತ್ತವೆ' ಎಂದು ಹೇಳಿದರು.

'ಈ ಹಿಂದೆ, ಕೇಂದ್ರ ಸರ್ಕಾರವು ಬ್ಯಾಂಕ್ ಶುಲ್ಕಗಳಿಂದ ಸಂಗ್ರಹಿಸಲಾದ ಮೊತ್ತದ ಅಂಕಿ ಅಂಶಗಳನ್ನು ಸಂಸತ್ತಿನಲ್ಲಿ ನೀಡುತ್ತಿತ್ತು. ಆದರೆ, ಈಗ ಆರ್‌ಬಿಐ ಅಂತಹ ಮಾಹಿತಿಯನ್ನು ನಿರ್ವಹಿಸುವುದಿಲ್ಲ' ಎಂದು ಹೇಳುವ ಮೂಲಕ ಈ ಅಭ್ಯಾಸವನ್ನು ನಿಲ್ಲಿಸಿದೆ. 'ನೋವಿನ ಬೆಲೆ ಏರಿಕೆ + ಅನಿಯಂತ್ರಿತ ಲೂಟಿ = ಸುಲಿಗೆಗೆ ಬಿಜೆಪಿಯ ಮಂತ್ರ!' ಎಂದು ಖರ್ಗೆ ಪೋಸ್ಟ್ ಮಾಡಿದ್ದಾರೆ'.

ಗ್ರಾಹಕರು ಎಟಿಎಂನಿಂದ ಹಣ ಪಡೆಯುವುದಕ್ಕೆ ನಿಗದಿಪಡಿಸಿರುವ ಶುಲ್ಕ ಹೆಚ್ಚಿಸಲು ಬ್ಯಾಂಕುಗಳಿಗೆ ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ) ಶುಕ್ರವಾರ ಅನುಮತಿ ನೀಡಿದೆ. ಉಚಿತ ಮಾಸಿಕ ಬಳಕೆಯನ್ನು ಮೀರಿ ಎಟಿಎಂನಿಂದ ನಗದು ಹಿಂಪಡೆಯುವಿಕೆಯ ಮೇಲಿನ ಶುಲ್ಕವನ್ನು ಮೇ 1 ರಿಂದ ಪ್ರತಿ ವಹಿವಾಟಿಗೆ 2 ರಿಂದ 23 ರೂ.ನಷ್ಟು ಹೆಚ್ಚಿಸಲು ಅನುಮತಿ ನೀಡಿದೆ.

# ದತ್ತು ಪ್ರಕ್ರಿಯೆ,ಅವಧಿ ಮೀರಿದ ಔಷಧಿ ಬಳಕೆ ಹಾಗೂ ಗುರುಮಠಕಲ್ ಶಿಶುಗಳ ಮರಣ :ಸ್ವಯಂ ಪ್ರೇರಿತ ಪ್ರಕರಣ ದಾಖಲಾತಿಗೆ ಕ್ರಮ : ಶಶಿಧರ್ ಕೋಸಂಬೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಮಾ: 29; ಅಕ್ರಮ ಮಕ್ಕಳ ದತ್ತು ಪ್ರಕ್ರಿಯೆ, ಅವಧಿ ಮೀರಿದ ವ್ಯಾಕ್ಸಿನ್ ವಿತರಣೆ ಹಾಗೂ ಗುರುಮಠಕಲ್ ಆಸ್ಪತ್ರೆಯಲ್ಲಿ ಶಿಶುಗಳುಮರಣಕ್ಕೆಸಂಬಂಧಿಸಿದ ಈ ಮೂರು ಪ್ರಕರಣಗಳಲ್ಲಿ ಕ್ರಮ ಜರುಗಿಸುವಲ್ಲಿ ಆಡಳಿತ ವರ್ಗದಿಂದ ಆಗಿರುವ ಲೋಪ, ನಿಯಮ ಉಲ್ಲಂಘನೆ ಹಾಗೂ ವಿಳಂಬ ನೀತಿ ಅನುಸರಣೆ ಹಿನ್ನೆಲೆಯಲ್ಲಿ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗವು ಗಂಭೀರವಾಗಿ ಪರಿಗಣಿಸಿದ್ದು, ಆಯೋಗದಲ್ಲಿ ಸ್ವಯಂ ಪ್ರೇರಿತ ಪಕರಣ ದಾಖಲಿಸಲಾಗುವುದು ಎಂದು ಆಯೋಗದ ಸದಸ್ಯರಾದ ಶ್ರೀ ಶಶಿಧರ್ ಕೋಸಂಬೆ ಅವರು ಹೇಳಿದರು.



ನಗರದ ತಾಯಿ ಮಕ್ಕಳ ಆಸ್ಪತ್ರೆ (ಹಳೆಯ ಜಿಲ್ಲಾ ಆಸ್ಪತ್ರೆಯಲ್ಲಿಂದು ವಿವಿಧ ಇಲಾಖಾ ಅಧಿಕಾರಿಗಳೊಂದಿಗೆ ನಡೆಸಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಕ್ಕಳ ದತ್ತು ಪ್ರಕ್ರಿಯೆಯಲ್ಲಿ ನಿಯಮಬಾಹಿರ, ಅಕ್ರಮ ದತ್ತು ಪ್ರಕ್ರಿಯೆ ಪ್ರಕರಣದಲ್ಲಿ ಕಾನೂನಾತ್ಮವಾಗಿ ಕ್ರಮ ಜರುಗಿಸುವಲ್ಲಿ ಅಧಿಕಾರಿಗಳ ನಿರ್ಲಕ್ಷ್ಯ ಕಂಡುಬಂದಿದೆ. ಅದರಂತೆ ಅವಧಿ ಮೀರಿದ ಔಷಧಿ ಹಾಗೂ ಲಸಿಕೆ ವಿತರಣೆ ವಿಷಯದಲ್ಲಿಯೂ ನಿರ್ಲಕ್ಷ್ಯ ಹಾಗೂ ವಿಳಂಬ ಧೋರಣೆ ಅನುಸರಿಸಿರುವದು ಮತ್ತು ನಿಯಮಬಾಹಿರವಾಗಿ ವರ್ತಿಸಿರುವುದು ಕಂಡು ಬಂದಿದೆ.

ಗುರುಮಠಕಲ್ ಆಸ್ಪತ್ರೆಯಲ್ಲಿ ಮೂರಕ್ಕು ಹೆಚ್ಚು ಶಿಶುಗಳಿಗೆ ಸಕಾಲಕ್ಕೆ ಚಿಕಿತ್ಸೆಗೆ ಒಳಪಡಿಸದೆ ಇರುವುದರಿಂದ ಸಾವನಪ್ಪಿರುವ ಘಟನೆ ಸಹ ನಡೆದಿದ್ದು, ಆಶಾ ಕಾರ್ಯಕರ್ತೆಯ ನಿರ್ಲಕ್ಷ ಹಾಗೂ ವೈದ್ಯಾಧಿಕಾರಿಗಳ ನಡುವೆ ಸಮನ್ವಯತೆ ಕೊರತೆ ಹಾಗೂ ಪ್ರಕರಣ ದಾಖಲಾಗಿದ್ದರೂ ಯಾರ ವಿರುದ್ಧವೂ ಕ್ರಮ ಆಗಿಲ್ಲ. ಇದರಲ್ಲೂ ವಿಳಂಬ ಧೋರಣೆ ಅನುಸರಿಸಿರುವಂತಹ ಲೋಪ ಕಂಡು ಬಂದಿದೆ. ಈ ಎಲ್ಲ ಅಂಶಗಳನ್ನು ಗಂಭೀರವಾಗಿ ಪರಿಗಣಿಸಿದ್ದು, ಸ್ವಯಂ ಪ್ರೇರಿತವಾಗಿ ಈ ಮೂರು ವಿಷಯಗಳಲ್ಲಿ ಆಯೋಗವು ಪ್ರಕರಣ ದಾಖಲಿಸಿಕೊಂಡು, ತಪ್ಪಿತಸ್ಥರ ವಿರುದ್ಧ ತೀವ್ರ ವಿಚಾರಣೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳಲಿದೆ ಎಂದು ಹೇಳಿದರು.

ಮಕ್ಕಳ ಜೀವಹಾನಿ ವಿಷಯದಲ್ಲಿ ನಿರ್ಲಕ್ಷತೆಯನ್ನು ಗಂಭೀರವಾಗಿ ಪರಿಗಣಿಸಲಾಗಿದೆ. ಔಷಧಿ ಅವಧಿ ಮೀರಿದ ವಿಷಯದಲ್ಲಿ ಕೆಪಿಎ??? ಕಾಯ್ದೆ ಹಾಗೂ ಕಾಸ್ಮೆಟಿಕ್ಸ್ ಕಾನೂನು ಪ್ರಕಾರ ಸೂಕ್ತ ಕ್ರಮ ಆಗಬೇಕು. ನಿರ್ಲಕ್ಷ್ಯ ತೋರಿದ ಏಜೆನ್ಸಿ ಮತ್ತು ತಪ್ಪಿತಸ್ಥ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಆಗಬೇಕು. ಡಿವೈಎಸ್ಪಿ, ಡಿಹೆಚ್‌ಓ ಅವರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳೊಂದಿಗೆ ಚರ್ಚಿಸಿ ಅವಶ್ಯಕ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಅದರಂತೆ ಗುರುಮಠಕಲ್ ಸಾವು ಪ್ರಕರಣದಲ್ಲಿ ತ್ವರಿತವಾಗಿ ವರದಿ ಪಡೆದುಕೊಂಡು ಸೂಕ್ತ ಕ್ರಮ ಕೈಗೊಂಡು ವರದಿ ಸಲ್ಲಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಈವರೆಗೆ 84 ಅಪ್ರಾಪ್ತ ಬಾಲಕಿಯರು ಗರ್ಭಿಣಿಯಾದ ಬಗ್ಗೆ ವರದಿಯಾಗಿದೆ. ಆಯಾ ಪೊಲೀಸ್ ಠಾಣೆಗಳಿಗೆ ನೀಡಿದ ದೂರುಗಳ ಮೇಲಿನ ಕ್ರಮಗಳ ಬಗ್ಗೆ ತಕ್ಷಣ ವರದಿ ಸಲ್ಲಿಸಬೇಕು.

ಆರೋಗ್ಯ ಇಲಾಖೆ, ಮಕ್ಕಳ ರಕ್ಷಣಾ ಘಟಕ, ಆಸ್ಪತ್ರೆಗಳ ವೈದ್ಯಾಧಿಕಾರಿಗಳು ,ಸರ್ಜನ್, ಪೊಲೀಸ್ ಇಲಾಖೆ ಅಧಿಕಾರಿಗಳು, ಔಷಧೀಯ ನಿಯಂತ್ರಣಾಧಿಕಾರಿಗಳು ಸೇರಿದಂತೆ ಸಂಬಂಧಪಟ್ಟ ಅಧಿಕಾರಿಗಳು ಜವಾಬ್ದಾರಿಯುತವಾಗಿ ಕಾರ್ಯನಿರ್ವಹಿಸುವಂತೆ ಅವರು ಸೂಚನೆ ನೀಡಿದರು.

ಸಭೆಯಲ್ಲಿ ಡಿವೈಎಸ್ಪಿ ಅರುಣಕುಮಾರ್, ಜಿಲ್ಲಾ ಆಸ್ಪತ್ರೆ ಸರ್ಜನ್ ರಿಜ್ವಾನಾ ಆಫ್ರೀನ್, ಡಿಹೆಚ್‌ಓ ಮಹೇಶ್ ಬಿರಾದಾರ್, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ಹನುಮಂತರಾಯ ಕರಡಿ ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು. ಇದಕ್ಕೂ ಮುನ್ನ ಆಯೋಗದ ಸದಸ್ಯರು ವಿಶೇಷ ದತ್ತು ಕೇಂದ್ರ, ಆನಂದ ನರ್ಸಿಂಗ್ ಹೋಮ್, ಹಳೆಯ ಜಿಲ್ಲಾ ಆಸ್ಪತ್ರೆಯಲ್ಲಿ ವಿವಿಧ ವ್ಯವಸ್ಥೆಗಳ ಬಗ್ಗೆ ಪರಿಶೀಲನೆ ನಡೆಸಿದರು.

# ವಿಶ್ವ ರಂಗಭೂಮಿ ದಿನಾಚರಣೆ ಅಂಗವಾಗಿ ಮಾ. 31 ರಂದು ಏಕ ವ್ಯಕ್ತಿ ರಂಗ ಪ್ರದರ್ಶನ

ಕಲಬುರಗಿ,ಮಾ.29:ಕಲಬುರಗಿ ರಂಗಾಯಣದ ವತಿಯಿಂದ ವಿಶ್ವರಂಗಭೂಮಿ ದಿನಾಚರಣೆ ಅಂಗವಾಗಿ ಮಾರ್ಚ್ 31 ರಂದು ಸೋಮವಾರ ಸಂಜೆ 6 ಗಂಟೆಗೆ ವಿಶೇಷ ಉಪನ್ಯಾಸ, ರಂಗಸಂಗೀತ ಹಾಗೂ ಏಕ ವ್ಯಕ್ತಿ ರಂಗ ಪ್ರದರ್ಶನವನ್ನು ಹಮ್ಮಿಕೊಳ್ಳಲಾಗಿದೆ. ಕಲಬುರಗಿ ರಂಗಾಯಣ ಮಾಜಿ ನಿರ್ದೇಶಕ ಪ್ರೊ. ಆರ್.ಕೆ. ಹುಡಗಿ ಕಾರ್ಯಕ್ರಮವನ್ನು ಉದ್ಘಾಟಿಸುವರು. ನಾಟಕಕಾರರು ಮತ್ತು ಕತೆಗಾರ ಮಹಾಂತೇಶ ನವಲಕರ್ ಅವರು ಕನ್ನಡ ರಂಗಭೂಮಿ–ಹೊರಪ್ರಯೋಗಗಳು ಕುರಿತು ಮಾತನಾಡುವರು.

ಕಲಬುರಗಿ ಕರ್ನಾಟಕ ರಂಗಾಯಣ ನಿರ್ದೇಶಕಿ ಡಾ. ಸುಜಾತಾ ಜಂಗಮಶೆಟ್ಟಿ ಕಾರ್ಯಕ್ರಮದ ಅಧ್ಯಕ್ಷತೆವಹಿಸುವರು. ಗುಲಬರ್ಗಾ ವಿಶ್ವವಿದ್ಯಾಲಯದ ಸಿಂಡಿ–ಕೇಟ್ ಸದಸ್ಯ ಎಸ್.ಪಿ.ಸುಳ್ಳದ್ ಮತ್ತು ಕರ್ನಾಟಕ ಪುಸ್ತಕ ಪ್ರಾಧಿಕಾರದ ಸದಸ್ಯ ಬಿ.ಹೆಚ್. ನಿರಗುಡಿ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಶ್ರೀಧರ ಹೊಸಮನಿ ಹಾಗೂ ತಂಡದವರು ಹಾಗೂ ನಾಟಕ ಅಕಾಡೆಮಿಯ ಪ್ರಶಸ್ತಿ ಪುರಸ್ಕೃತರು ಹಾಗೂ ಆಕಾಶವಾಣಿ ಕಲಾವಿದರಾದ ಶಾಂತಾಕುಲಕರ್ಣಿ ರಾಯಚೂರು ಇವರಿಂದ ರಂಗಗೀತೆಗಳ ಗಾಯನ ನಡೆಯಲಿದೆ. ಜಲೀಲ ಪಟೇಲ್ ಅವರು ನಿರೂಪಣೆ ಮಾಡುವರು. ಶಿವು ಸಾಣೇಹಳ್ಳಿ ಇವರ ರಚನೆ ಹಾಗೂ ಮಧು ಎಂ. ಇವರ ನಿರ್ದೇಶನದ "ತೃಪ್ತ" "ಏಕವ್ಯಕ್ತ ರಂಗ ಪ್ರಯೋಗ" ನಾಟಕ ಪ್ರದರ್ಶನಗೊಳ್ಳಲಿದೆ.

## ಚಾಲ್ತಿ ವರ್ಷದ ಆಸ್ತಿ ತೆರಿಗೆಯನ್ನು ಏಪ್ರಿಲ್ ೩೦ರೊಳಗಾಗಿ ಪಾವತಿಸಿದ್ದಲ್ಲಿ ಶೇ. 5 ರಷ್ಟು ರಿಯಾಯಿತಿ

ಕಲಬುರಗಿ,ಮಾ.29:ಕಲಬುರಗಿ ಮಹಾನಗರಪಾಲಿಕೆವ್ಯಾಪ್ತಿಯಲ್ಲಿ ಬರುವ ಸ್ವತ್ತುಗಳ ಮಾಲೀಕರು/ಅನುಭೋಗದಾರರು ಚಾಲ್ತಿ ವರ್ಷದ ಆಸ್ತಿ ತೆರಿಗೆಯನ್ನು 2025ರ ಏಪ್ರಿಲ್ 30 ರೊಳಗಾಗಿ ಪಾವತಿಸಿ ಶೇ 5 ರಷ್ಟು ರಿಯಾಯಿತಿ ಸೌಲಭ್ಯ ಪಡೆದುಕೊಳ್ಳಬೇಕೆಂದು ಕಲಬುರಗಿ ಮಹಾನಗರ ಪಾಲಿಕೆಯ ಆಯುಕ್ತರು ತಿಳಿಸಿದ್ದಾರೆ.

ಕರ್ನಾಟಕ ಮಹಾನಗರಪಾಲಿಕೆಗಳ ಅಧಿನಿಯಮ 1976ರ ಕಲಂ 112(ಎ)(1) ರ ಪ್ರಕಾರ, ಪ್ರತಿ ಹಣಕಾಸು ವರ್ಷ ಪ್ರಾರಂಭವಾದ ಮೊದಲ ತಿಂಗಳಿನಲ್ಲಿ ಚಾಲ್ತಿ ವರ್ಷದ ಆಸ್ತಿ ತೆರಿಗೆ ಪಾವತಿಸಿದ್ದಲ್ಲಿ, ಆಸ್ತಿ ತೆರಿಗೆ ಮೇಲೆ ಶೇ 5 ರಷ್ಟು ರಿಯಾಯ್ತಿ ನೀಡುವ ಸೌಲಭ್ಯ ಕಲ್ಪಿಸಲಾಗಿದ್ದು, ಸಾರ್ವಜನಿಕರು ಇದರ ಸದುಪಯೋಗಪಡೆದುಕೊಳ್ಳಬೇಕೆಂದು ಅವರು ತಿಳಿಸಿದ್ದಾರೆ.

## ಕಲಬುರಗಿ ನಗರದ ಗ್ರಾಹಕರು ನೀರಿನ ಕರ ಪಾವತಿಸಲು ಸೂಚನೆ.

ಕಲಬುರಗಿ,ಮಾ.29:ಕಲಬುರಗಿ ನಗರದಲ್ಲಿ ಈಗಾಗಲೇ ಮೆ॥ ಎಲ್ ಆಂಡ್ ಟಿ ಕಂಪನಿಯಿಂದ ಪ್ರಾಯೋಗಿಕವಾಗಿ ಕಲಬುರಗಿ ನಗರದ ಐವಾನ ಶಾಹಿ ಏರಿಯಾ ಹಾಗೂ ಓಜಾ ಲೇಔಟ್‌ಗಳಲ್ಲಿ 24ಥ7 ನಿರಂತರ ನೀರು ಸರಬರಾಜು ಮಾಡಲಾಗುತ್ತಿದ್ದು, ಗ್ರಾಹಕರು ಬಾಕಿ ಉಳಿಸಿಕೊಂಡಿರುವ ನೀರಿನ ಕರವನ್ನು ಪಾವತಿಸಿ, ಯೋಜನೆಯ ಯಶಸ್ವಿ ಅನುಷ್ಠಾನಕ್ಕೆ ಸಹಕರಿಸಬೇಕೆಂದು ಕಲಬುರಗಿ ಕೆಯುಡಬ್ಲ್ಯೂಎಸ್‌ಎಂಪಿ–ಕೆಯುಐಡಿಎಫ್‌ಸಿ ಯೋಜನಾ ಅನುಷ್ಠಾನ ಘಟಕದ ಸಾರ್ವಜನಿಕ ಸಂಪರ್ಕ ಅಧಿಕಾರಿಗಳು ನಗರದ ಗ್ರಾಹಕರಲ್ಲಿ ಮನವಿ ಮಾಡಿದ್ದಾರೆ.

# ಬೀಳ್ಕೊಡುಗೆ ಸಮಾರಂಭ:



ಮಲ್ಲಮ್ಮ ನುಡಿ ವಾರ್ತೆ

ಕೆಂಭಾವಿ ಪಟ್ಟಣದ ಜೈಭೀಮ ನಗರದಲ್ಲಿ ಸ್ಥಳಿಯ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಐದನೇ ತರಗತಿ ಮಕ್ಕಳಿಗೆ ಬೀಳ್ಕೊಡುಗೆ ಸಮಾರಂಭವನ್ನು ಹಮ್ಮಿಕೊಳ್ಳಲಾಯಿತು. ಈ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಎಸ್ ಡಿಎಂಸಿ ಅಧ್ಯಕ್ಷರಾದ ಬಸವಣ್ಣಪ್ಪ ಆರ್ ಮಾಳಳ್ಳಿಕರ್ ಹಾಗೂ ವಾಡಿನ ಮೆಂಬರಗಳು ಆದ ರಮೇಶ್ ಕೊಡಗಾನೂರ ಮತ್ತು ಶಿವಪ್ಪ ಕಂಬಾರ, ನಾಮ ನಿರ್ದೇಶನ ಸದಸ್ಯರು ಆದ ದೇವೇಂದ್ರಪ್ಪ ವಠರ ಹಾಗೂ ದಾದಾಪೀರ್ ಇನಾಮ್ದಾರ್ ಮುಖ್ಯ ಶಿಕ್ಷಕರು, ಮಂದಗಿನಿ ಸಹಶಿಕ್ಷಕರು, ಅತಿಥಿ ಶಿಕ್ಷಕರುಗಳಾದ ಸಿದ್ದಣ್ಣ ಕಟ್ಟಿಮನಿ ರಾಘವೇಂದ್ರ ಸಾವಿತ್ರಿ ಹಾಗೂ ಅಡುಗೆ ಸಿಬ್ಬಂದಿಗಳು ಅವಳಮ್ಮ ಮಳಿಕೇರಿ, ಸುಜಾತ ಯತ್ನಾಳ ಭಾಗವಹಿಸಿದರು.

ಈ ಸಮಾರಂಭದಲ್ಲಿ, ಮುಂದಿನ ಭವಿಷ್ಯಕ್ಕಾಗಿ ಮಕ್ಕಳಿಗೆ ಪ್ರೇರಣಾದಾಯಕ ಸಂದೇಶಗಳನ್ನು ನೀಡಲಾಯಿತು.

ಮಕ್ಕಳು ತಮ್ಮ ಅಧ್ಯಯನದಲ್ಲಿ ನಿರಂತರಶ್ರಮಿಸಿ, ದೇಶದ ಭವಿಷ್ಯವನ್ನು ಗುರಿಯಾಗಿಸಿಕೊಂಡು ಸಾಧನೆ ಗಳಿಸಲು ಪ್ರೋತ್ಸಾಹಿಸಲ್ಪಟ್ಟರು.

ಸಮಾರಂಭದ ವೇಳೆ, ಮಕ್ಕಳು ತಮ್ಮ ಕಲಿಕೆಯಲ್ಲಿ ಸಾಧನೆಯನ್ನು ಸಾಧಿಸಲು ಶ್ರಮ ವಹಿಸಲು ಪ್ರೇರಿತರಾಗಿದ್ದು, ಈ ರೀತಿಯ ಸಮಾರಂಭಗಳು ಮಕ್ಕಳಲ್ಲಿ ಉತ್ಸಾಹವನ್ನು ಮೂಡಿಸಿಕೊಳ್ಳಲು ಸಹಕಾರಿ ಎಂಬುದು ಒಪ್ಪಿಗೆಯಾದ ವಿಚಾರವಾಯಿತು.

ಸಮಾರಂಭದ ನಂತರ, ಎಲ್ಲರ ಸಹಕಾರದಿಂದ ಕಾರ್ಯಕ್ರಮ ಸಮಾಪನಗೊಂಡಿತು.

# ಏ.10 ರಿಂದ ಶರಣರು ಕಂಡ ಬಸವಣ್ಣ ಪ್ರವಚನ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.29: ವಚನ ಜಾತ್ರೆ–2025 ಮತ್ತು ಶತಾಯಷಿ ಡಾ.ಚನ್ನಬಸವ ಪಟ್ಟದ್ದೇವರ 26ನೆಯ ಸ್ಮರಣೋತ್ಸವ ಅಂಗವಾಗಿ ಇಲ್ಲಿಯ ಚನ್ನಬಸವಾಶ್ರಮ ಪರಿಸರದಲ್ಲಿ ಶುಕ್ರವಾರ ಸಭೆ ನಡೆಯಿತು. ಸಾನ್ನಿಧ್ಯ ವಹಿಸಿದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ಮಾತನಾಡಿ, ವಚನ ಜಾತ್ರೆ–2025 ಮತ್ತು ಶತಾಯಷಿ ಡಾ.ಚನ್ನಬಸವ ಪಟ್ಟದ್ದೇವರ 26ನೆಯ ಸ್ಮರಣೋತ್ಸವ ಅಂಗವಾಗಿ ಏ.10 ರಿಂದ 21ರ ವರೆಗೆ ಪ್ರವಚನ ಹಮ್ಮಿಕೊಳ್ಳಲಾಗಿದೆ ಎಂದರು. ಶತಾಯಷಿ ಡಾ.ಚನ್ನಬಸವ ಪಟ್ಟದ್ದೇವರು ಈ ಭಾಗದ ನಡೆದಾಡುವ ದೇವರಾಗಿದ್ದರು. ಅವರ ಸ್ಮರಣೆ ನಮ್ಮೆಲ್ಲರಿಗೆ ಬಸವಮಾರ್ಗವನ್ನು ತೋರಿಸುತ್ತದೆ. ನಮ್ಮ ಜೀವನ ಸುಖಿ ಮತ್ತು ಸಮೃದ್ಧಿಗೊಳಿಸುತ್ತದೆ. ಅದಕ್ಕಾಗಿ ಪೂಜ್ಯರ ಸ್ಮರಣೋತ್ಸವದ ನಿಮಿತ್ತ ನಾಡಿನ ಶ್ರೇಷ್ಠ ಮಠಾಧೀಶರು, ಅನುಭಾವಿಗಳಾದ ಪೂಜ್ಯಶ್ರೀ ಸಿದ್ಧಬಸವ ಮಹಾಸ್ವಾಮೀಜಿ ಅವರಿಂದ ಪ್ರವಚನ ನಡೆಯಲಿದೆ. ಪೂಜ್ಯರು ಒಳ್ಳೆಯ ಅನುಭಾವಿಗಳು, ವಾಗ್ಮಿಗಳು, ಪ್ರವಚನ ಪಟುಗಳು ಆಗಿದ್ದಾರೆ. ಅವರು ಶರಣ–ರು ಕಂಡ ಬಸವಣ್ಣ ಎಂಬ ವಿಷಯದ ಕುರಿತು ಪ್ರವಚನ ನಡೆಸಿ ಕೊಡಲಿದ್ದಾರೆ. ಸದ್ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದು ಮನವಿ ಮಾಡಿದರು. ಪ್ರವಚನ ಸೇವಾ ಸಮಿತಿಗೆ ನೇಮಕ ಇದೇವೇಳೆ ಪ್ರವಚನ ಸೇವಾ ಸಮಿತಿ ಅಧ್ಯಕ್ಷರನ್ನಾಗಿ ಶಶಿಕಲಾ ಅಶೋಕ ವಾಲೆ ಅವರನ್ನು ನೇಮಕ ಮಾಡಲಾಯಿತು.



ಪೂಜ್ಯರು ನೂತನ ಅಧ್ಯಕ್ಷರಿಗೆ ಸನ್ಮಾನಿಸಿ ಆಶೀರ್ವದಿಸಿದರು. ಸನ್ಮಾನ ಸ್ವೀಕರಿಸಿದ ಅಧ್ಯಕ್ಷೆ ಶಶಿಕಲಾ ಅಶೋಕ ವಾಲೆ ಮಾತನಾಡಿ, ಪ್ರವಚನ ಸೇವಾ ಸಮಿತಿ ಅಧ್ಯಕ್ಷರನ್ನಾಗಿ ನೇಮಕ ಮಾಡಿರುವುದು ಸಂತಸ ತರಿಸಿದೆ. ತನು, ಮನ, ಧನದಿಂದ ಈ ಕಾರ್ಯಕ್ಕೆ ಸಮರ್ಪಣೆಯಿಂದ ದುಡಿಯುತ್ತೇನೆ. ಪೂಜ್ಯರ ಆಶೀರ್ವಾದ ಹಾಗೂ ತಮ್ಮೆಲ್ಲರ ಸಹಕಾರದಿಂದ ವಚನ ಜಾತ್ರೆ, ಪೂಜ್ಯರ ಸ್ಮರಣೋತ್ಸವ ಮತ್ತು ಪ್ರವಚನ ಯಶಸ್ವಿಯಾಗಿ ಮಾಡೋಣ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು ಅಧ್ಯಕ್ಷ ಪ್ರೊ.ಶಂಭುಲಿಂಗ ಕಾಮಣ್ಣ, ಪ್ರಮುಖರಾದ ಬಸವರಾಜ ಮರೆ, ವಿಶ್ವನಾಥಪ್ಪ ಬಿರಾದಾರ, ಶರಣಪ್ಪ ಬಿರಾದಾರ, ಸಂತೋಷ ಹಡಪದ, ಮಲ್ಲಮ್ಮ ನಾಗನಕೇರೆ, ಮಧು ವಾಲೆ, ಧನರಾಜ ಬಂಬುಳಗೆ, ಸುರೇಶ ಪುರಂತ ಸೇರಿದಂತೆ ಮುಂತಾದವರು ಇದ್ದರು.

160 ಕೋಟಿ ಮೊತ್ತದ ಅಮೃತ ಯೋಜನೆಯ ಶಂಕುಸ್ಥಾಪನೆ

# ಮಾನವನ ಜೀವನಕ್ಕೆ ನೀರು ಗಾಳಿ ಅತೀ ಅವಶ್ಯ :- ಸಚಿವ ಈಶ್ವರ ಖಂಡ್ರೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:- ಜಲವೇ ಜೀವ ನೀರು, ಗಾಳಿ, ಮಾನವನ ಜೀವನಕ್ಕೆ ಅತಿ ಅವಶ್ಯಕತೆಯಿದೆ ಎಂದು ಬೀದರ್ ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಪರಿಸರ ಮತ್ತು ಅರಣ್ಯ ಜೀವಶಾಸ್ತ್ರಸಚಿವರಾದ ಈಶ್ವರ ಖಂಡ್ರೆ ಪಟ್ಟಣದಲ್ಲಿ ನಗರಾಭಿವೃದ್ಧಿ ಇಲಾಖೆ, ಜಿಲ್ಲಾಡಳಿತ, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಹಾಗೂ ಪುರಸಭೆ ಹುಮನಾಬಾದ, ಚಿಟಗುಪ್ಪ ಮತ್ತು ಹಳ್ಳಿಖೇಡ(ಬಿ) ಇವರ ಸಂಯಕ್ತಾಶ್ರಯದಲ್ಲಿ ಕೇಂದ್ರಪುರಸ್ಕೃತ ಅಮೃತ್ 2.0 ಯೋಜನೆಯಡಿ ಹುಮನಾಬಾದ, ಚಿಟಗುಪ್ಪ ಮತ್ತು ಹಳ್ಳಿಖೇಡ (ಬಿ) ಪಟ್ಟಣಗಳಿಗೆ ಕಾರಂಜಾ ಜಲಾಶಯದಿಂದ ನೀರು ಸರಬರಾಜು ಅಭಿವೃದ್ಧಿ ಯೋಜನೆಯ ಹಾಗೂ ತಾಲೂಕಿನ ನಿಂಬುರಾ ಗ್ರಾಮದಲ್ಲಿ 33/11ಕೆ.ವಿ. ವಿದ್ಯುತ್ ಉಪ ಕೇಂದ್ರದ ಶಂಕುಸ್ಥಾಪನೆ ನೆರವೇರಿಸಿ ಮಾತನಾಡುತ್ತಾ ತಿಳಿಸಿದರು. ಜನ ಸಂಖ್ಯೆ ಹೆಚ್ಚಳದಿಂದ ಗ್ರಾಮ ಪಟ್ಟಣಗಳ ಕುಡಿಯುವ ನೀರಿನ ಸಮಸ್ಯೆ ಉದ್ಭವಿಸುತ್ತಿದೆ ಇದನ್ನು ಮನಗಂಡು ಸರ್ಕಾರ ಶಾಶ್ವತ ಕುಡಿಯುವ ನೀರಿನ ಯೋಜನೆ ಹಲವಾರು ಯೋಜನೆಗಳು ಜಾರಿಗೊಳಿಸಲಾಗಿದೆ, ಕೇಂದ್ರ ಸರ್ಕಾರ ಅಮೃತ ಯೋಜನೆ ಅಡಿಯಲ್ಲಿ ಹುಮನಾಬಾದ್, ಚಿಟಗುಪ್ಪ ಮತ್ತು ಹಳ್ಳಿಖೇಡ(ಬಿ) ಪಟ್ಟಣಗಳಿಗೆ ಕಾರಂಜಾ ಜಲಾಶಯದಿಂದ ನೀರು ಸರಬರಾಜು ಅಭಿವೃದ್ಧಿ ಯೋಜನೆ ಈ ಪಟ್ಟಣಗಳ ಶಾಶ್ವತ ಕುಡಿಯುವ ನೀರಿನ ಸಮಸ್ಯೆ ಹೋಗಲಾಡಿಸಲು ಸಹಾಯವಾಗುತ್ತದೆ. ಈ ಯೋಜನೆ ಅಡಿಯಲ್ಲಿ ಸಾರ್ವಜನಿಕರ ಮನೆ ಬಾಗಿಲಿಗೆ ನೀರು ಸರಬರಾಜು ಮಾಡಲು ಸಹಾಯವಾಗುತ್ತದೆ ಇದರ ಸದುಪಯೋಗ ಪಡೆದುಕೊಳ್ಳಲು ಕರೆ ನೀಡಿದರು. ಅಮೃತ ಯೋಜನೆ ಕೇಂದ್ರ ಮತ್ತು ರಾಜ್ಯ ಸರಕಾರಗಳ ಸಹ ಭಾಗಿತ್ವದಲ್ಲಿ ಈ ಯೋಜನೆ ಅನುಷ್ಠಾನ ಮಾಡಲಾಗುತ್ತಿದೆ, ಕೇಂದ್ರ ಸರ್ಕಾರದ ಅನುದಾನ ಶೇಕಡಾ%50, ರಾಜ್ಯ ಸರ್ಕಾರದ ಶೇಕಡಾ%40, ಸ್ಥಳೀಯ ಸಂಸ್ಥೆಯ ವಂತಿಗೆ ಶೇಕಡಾ%10 ಒಟ್ಟು 160.45 ಕೋಟಿ ಅಂದಾಜು ವೆಚ್ಚದ ಈ ಕಾಮಗಾರಿಗೆ ಶಂಕುಸ್ಥಾಪನೆ ಮಾಡಲಾಯಿತ್ತು. ಪೌರಾಡಳಿತ ಸಚಿವ ರಹೀಮ್ ಖಾನ ಮಾತನಾಡಿ, ಹುಮನಾಬಾದ ಕ್ಷೇತ್ರದ ರಾಜೇಶ್ವರ, ಚಿಟಗುಪ್ಪ ತಾಲೂಕಿನ ಮನ್ನಾಎಖೇಳ್ಳಿ ಹಾಗೂ ಬೀದರ್ ತಾಲೂಕಿನ ಕಮಠಾಣ ಗ್ರಾಮ ಪಂಚಾಯತಗಳನ್ನು ಪಟ್ಟಣ ಪಂಚಾಯತಗಳಾಗಿ ಮೇಲ್ದರ್ಜೆಗೆ ಏರಿಸುವುದಾಗಿ ತಿಳಿಸಿದರು. ಈ ಸಂಬಂಧ ಹಣಕಾಸು ಇಲಾಖೆಗೆ ಮೇಲ್ದರ್ಜೆಗೆ ಏರಿಸುವ ಬಗ್ಗೆ ಪ್ರಸ್ತಾವನೆ ಸಲ್ಲಿಸಲಾಗಿದೆ, ಮಾಜಿ ಸಚಿವ ರಾಜಶೇಖರ ಪಾಟೀಲ್, ಶಾಸಕ ಸಿದ್ದು ಪಾಟೀಲ್, ವಿಧಾನ ಪರಿಷತ್ ಸದಸ್ಯರುಗಳಾದ ಚಂದ್ರಶೇಖರ್ ಪಾಟೀಲ್, ಭೀಮರಾವ ಪಾಟೀಲ್ ಇವರುಗಳ ಒತ್ತಾಯದ ಮೇರೆಗೆ ರಾಜೇಶ್ವರ ಗ್ರಾಮ ಪಂಚಾಯತ್ ಮೇಲ್ದರ್ಜೆಗೆ ಏರಿಸಲಾಗುತ್ತಿದೆ ಎಂದರು. ಶಾಸಕ ಡಾ. ಸಿದ್ದು ಪಾಟೀಲ್ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅಮೃತ ಯೋಜನೆ ಕೇಂದ್ರ ಸರ್ಕಾರದ ಯೋಜನೆಯಾಗಿದ್ದು ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ಅಮೃತ ಯೋಜನೆ ಜಾರಿಗೊಳಿಸಿ, ಪಟ್ಟಣದ ಕುಡಿಯುವ ನೀರಿನ ಸಮಸ್ಯೆ ಹೋಗಲಾಡಿಸಲು ಈ ಯೋಜನೆ ಜಾರಿಗೊಳಿಸಿದ್ದಾರೆ, ಹುಮನಾಬಾದ, ಚಿಟಗುಪ್ಪ ಮತ್ತು ಹಳ್ಳಿಖೇಡ(ಬಿ) ಪಟ್ಟಣಗಳ ನೀರಿನ ಸಮಸ್ಯೆ ಹೋಗಲಾಡಿಸಲು ಅಮೃತ ಯೋಜನೆ 3 ಪಟ್ಟಣಗಳಿಗೆ ವರದಾನವಾಗಿದೆ ಎಂದರು. ಈ ಯೋಜನೆ ಅನುಷ್ಠಾನದಿಂದ ದಿನಾಲೂ ಶುದ್ಧ ನೀರು ಸರಬರಾಜು ಮಾಡಲು ಸಹಾಯವಾಗುತ್ತದೆ ಎಂದರು. ಜಿಲ್ಲಾ ಉಸ್ತುವಾರಿ ಸಚಿವರು ಯಾವುದೇ ತಾರತಮ್ಯ ಮಾಡದೆ ಅಭಿವೃದ್ಧಿಗೆ ಹೆಚ್ಚಿನ ಆದ್ಯತೆ ನೀಡುತ್ತಿದ್ದಾರೆ ಎಂದರು ಚಿಟಗುಪ್ಪ ಪಟ್ಟಣ ತಾಲೂಕ ಕೇಂದ್ರವಾಗಿ ಹಲವಾರು ವರ್ಷ ಕಳೆದಿವೆ. ಆದರೂ ಇನ್ನುವರೆಗೆ ಸರ್ಕಾರಿಗಳು ಆರಂಭಿಸಿಲ್ಲಾ ಶೀಘ್ರದಲ್ಲೇ ಕಚೇರಿಗಳು ಆರಂಭಿಸಬೇಕು, ಹಳ್ಳಿಖೇಡ (ಬಿ) ಪಟ್ಟಣದಲ್ಲಿ ಪದವಿ ಪೂರ್ವ ಕಾಲೇಜ ಮಂಜೂರು ಮಾಡಿಸಲು ಮನವಿ ಮಾಡಿದರು. ಹುಮನಾಬಾದ ಪುರಸಭೆ ನಗರಸಭೆಯನ್ನಾಗಿ ಮೇಲ್ದರ್ಜೆಗೆರಿಸಲು ಮನವಿ ಮಾಡಿದರು. ವಿಧಾನ ಪರಿಷತ್ ಸದಸ್ಯ ಡಾ. ಚಂದ್ರಶೇಖರ ಪಾಟೀಲ್ ಮಾತನಾಡಿ, ಮಾಜಿ ಸಚಿವ ರಾಜಶೇಖರ ಪಾಟೀಲ್ ಶಾಶ್ವತ ಕುಡಿಯುವ ನೀರಿನ ಯೋಜನೆ ಮಂಜೂರು ಮಾಡಿಸಲು ರಾಜಶೇಖರ್ ಪಾಟೀಲ್ ಅವರ ಶ್ರಮವು ಬಹಳಷ್ಟಿದೆ ಎಂದರು. ಗುತ್ತಿಗೆದಾರರು ಕಳಪೆ ಮಟ್ಟದ ಕಾಮಗಾರಿ ಕೈಗೊಳ್ಳದೇ ಗುಣಮಟ್ಟದ ಕಾಮಗಾರಿ ಕೈಗೊಳ್ಳಬೇಕೆಂದು ಗುತ್ತಿಗೆದಾರರಿಗೆ ತಿಳಿಸಿದ್ದರು. ಈ ಯೋಜನೆ ಸರ್ಕಾರ ನಿಗಧಿ ಪಡಿಸಿದ ಅವಧಿಯಲ್ಲಿ ಪೂರ್ಣಗೊಳಿಸಲು ಮನವಿ ಮಾಡಿದರು. ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸದಸ್ಯ ಭೀಮರಾವ ಪಾಟೀಲ್, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಡಾ. ಗಿರೀಶ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ, ಒಳಚರಂಡಿ ಮುಖ್ಯ ಅಭಿಯಂತರರು ಪ್ರವೀಣ ಲಿಂಗಯ್ಯಾ, ಕಾರ್ಯಪಾಲಕ ಅಭಿಯಂತರರು ನರಸಿಂಹರೆಡ್ಡಿ ಎನ್. ಸಹಾಯಕ ಕಾರ್ಯಪಾಲಕ ಅಭಿಯಂತರರು ರವೀಂದ್ರಗಣಗೊಂಡ, ತಹಶೀಲ್ದಾರ್ ಅಂಜುಮತಬಸುಮ್, ಹುಮನಾಬಾದ ಪುರಸಭೆ ಮುಖ್ಯಾಧಿಕಾರಿ ಫಿರೋಜ್ ಖಾನ, ಚಿಟಗುಪ್ಪ ಪುರಸಭೆ ಮುಖ್ಯಾಧಿಕಾರಿ ಹುಸಾಮುದ್ದಿನ ಬಾಬಾ, ಹಳ್ಳಿಖೇಡ್(ಬಿ) ಪುರಸಭೆ ಮುಖ್ಯಾಧಿಕಾರಿ ಸುನೀಲಕುಮಾರ್ ಸೇರಿದಂತೆ ಅಧಿಕಾರಿಗಳು, ಸಿಬ್ಬಂದಿ ವರ್ಗದವರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಸಾರ್ವಜನಿಕ ಸ್ಥಳಗಳಲ್ಲಿ ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡ ಜನರ ಪ್ರವೇಶಕ್ಕೆ ಅಡ್ಡಿಪಡಿಸುವಂತ್ತಿಲ್ಲ: ಶಿವಾನಂದ ಮೆತ್ರೆ.



ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :- ಮಾ 28 ಮಂದಿರಗಳಲ್ಲಿ ಹಾಗೂ ಸಾರ್ವಜನಿಕ ಬಾವಿಗಳ ನೀರು ಪಡೆಯಲು ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡದ ಜನರಿಗೆ ಅಡ್ಡಿಪಡೆಸುವುದು ಕಾನೂನು ಬಾಹಿರವಾಗಿರುತ್ತದೆ ಎಂದು ತಹಸೀಲ್ದಾರ್ ಶಿವಾನಂದ ಮೆತ್ರೆ ತಿಳಿಸಿದರು.

ಹುಲಸೂರ ತಾಲೂಕಿನ ಕಾದೆಪೂರ ಗ್ರಾಮದಲ್ಲಿ ಉಜ್ವಲ್ ಗ್ರಾಮೀಣ ಅಭಿವೃದ್ಧಿ ಸೇವಾ ಸಂಸ್ಥೆ ಹಾಗೂ ಸಮಾಜ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ನಡೆದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ದೌರ್ಜನ್ಯ ನಿಯಂತ್ರಣ ಅರಿವು ಮೂಡಿಸುವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿ ಯಾವುದೇ ಸಾರ್ವಜನಿಕ ಸ್ಥಳಗಳಲ್ಲಿ ಜಾತಿ ವರ್ಗದ ಆಧಾರದ ಮೇಲೆ ನಿರ್ಬಂಧ ಹೇರಿದರೆ ಅಂತವರ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು. ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರಾದ ದೀಲಿಪ ಕುಮಾರ್ ಉತ್ತಮ ಮಾತನಾಡಿ ಬಸವಣ್ಣನವರ ನಾಡಿನಲ್ಲಿ ಸಮಾನತೆಯಿಂದ ಬದುಕಬೇಕು. ಜಾತಿ ರಹಿತ ವರ್ಗ ರಹಿತ ಸಮಾಜ ನಿರ್ಮಾಣ ವಾಗಬೇಕು, 1989 ರ ಪ್ರೋಬೆಸ್ಸನ್ ಆಫ್ ಆಕ್ಟ್ ಅನುಗುಣವಾಗಿ ಸಮಾನತೆ ಸ್ವಾತಂತ್ರ್ಯ ಬದುಕು ಸಾಗಿಸುವ ಹಕ್ಕು ಎಲ್ಲರಿಗೂ ಇದೆ ಎಂದು ತಿಳಿಸಿದರು.

ಪಬ್ಲಿಕ್ ಪ್ರಾಸಿಕ್ಯೂಟರ್ ಬಸವಂತ ರೆಡ್ಡಿ ಅವರು ಮಾತನಾಡಿ

ಕಾನೂನು ತುಂಬಾ ಸುಕ್ಷ್ಮವಾಗಿದ್ದು ಅದನ್ನು ಅರಿತು ಕೊಳ್ಳಬೇಕು ಸಮಾನತೆ ಸ್ವಾತಂತ್ರ್ಯ ಬದುಕು ಸಾಗಿಸುವ ಹಕ್ಕು ನಮ್ಮ ಸಂವಿಧಾನ ನಮ್ಮಗೆ ನೀಡಿದೆ. ಇಂದು ಪಾಲಕರು ತಮ್ಮ ವಾಹನಗಳನ್ನು ಚಿಕ್ಕಮಕ್ಕಳಿಗೆ ಚಲಾಯಿಸಲು ನೀಡುತ್ತಿದ್ದಾರೆ ಆದರಿಂದ ರಸ್ತೆ ಅಪಘಾತಗಳು ಸಂಭವಿಸುತ್ತಿವೆ ಇದನ್ನು ಪಾಲಕರು ಗಂಭೀರವಾಗಿ ಪರಿಗಣಿಸಬೇಕು ಎಂದು ತಿಳಿಸಿದರು. ಗ್ರಾಮ ಪಂಚಾಯತ ಅಧ್ಯಕ್ಷೆ ಸೋನಿಯಾ ಸಿದ್ದರೋಡ ಅಧ್ಯಕ್ಷತೆ ವಹಿಸಿದ್ದರು.

ಹುಲಸೂರ ಪೊಲೀಸ್ ಠಾಣೆಯ ಪಿ. ಎಸ್. ಐ. ನಾಗೇಂದ್ರ ಅವರು ಮಾತನಾಡಿ ವಿಧ್ಯಾರ್ಥಿಗಳು ಶಿಕ್ಷಣದ ಕಡೆ ಹೆಚ್ಚಿನ ಆಸಕ್ತಿ ತೋರಬೇಕು ಕಠಿಣ ಪರಿಶ್ರಮದಿಂದ ಗ್ರಾಮೀಣ ಭಾಗದ ವಿದ್ಯಾರ್ಥಿಗಳಲ್ಲಿ ಸರ್ಕಾರಿ ಹುದ್ದೆಗಳಿಗೆ ನೇಮಕವಾದಲ್ಲಿ ತಮ್ಮ ಗ್ರಾಮಕ್ಕೆ ಹೆಮ್ಮೆ ತರುವಂತಹದ್ದು ಎಂದು ತಿಳಿಸಿದರು. ಉಜ್ವಲ್ ಗ್ರಾಮೀಣ ಅಭಿವೃದ್ಧಿ ಸೇವಾ ಸಂಸ್ಥೆಯ ಅಧ್ಯಕ್ಷರಾದ ಜ್ಞಾನೇಶ್ವರ್ ಸಿಂಗಾರೆ. ಸಂದೀಪ್. ರವಿ. ಪ್ರಶಾಂತ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಶ್ರೀ ಪಂಚಾಕ್ಷರಿ ಪರೀಕ್ಷಾ ಕೇಂದ್ರದಲ್ಲಿ ನೀರಿಗಾಗಿ ವಿದ್ಯಾರ್ಥಿಗಳ ಪರದಾಟ




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:-ಪಟ್ಟಣದಲ್ಲಿ ಮೆಟ್ರಿಕ್ ಪರೀಕ್ಷಾ 3 ಕೇಂದ್ರಗಳಿದ್ದು. ಶನಿವಾರದವರೆಗೆ ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಬಿಗಿ ಪೊಲೀಸ್ ಬಂದೋಬಸ್ತ್ ಮಧ್ಯದಲ್ಲಿ ಶಾಂತ ರೀತಿಯಿಂದ ಜರುಗುತ್ತಿವೆ. ಇಲ್ಲಿಯ ಶ್ರೀ ಪಂಚಾಕ್ಷರಿ ಪ್ರೌಢಶಾಲೆ 400 ವಿದ್ಯಾರ್ಥಿಗಳು ಪರೀಕ್ಷಾ ಕೇಂದ್ರದಲ್ಲಿದ್ದು ಶನಿವಾರದಂದು ನಡೆದ ಸಮಾಜ ವಿಷಯ ಪರೀಕ್ಷೆಯಲ್ಲಿ 382 ವಿದ್ಯಾರ್ಥಿಗಳು ಭಾಗವಹಿಸಿ ಪರೀಕ್ಷೆ ಬರೆಯುತ್ತಿದ್ದರು. ವಿದ್ಯಾರ್ಥಿಗಳು ಬಾಯಾರಿಕೆಯಿಂದ ಕುಡಿಯುವ ನೀರು ಸರಬರಾಜು ವ್ಯವಸ್ಥೆ ಇಲ್ಲದೆ ವಿದ್ಯಾರ್ಥಿಗಳು ಚಡ ಪಡಿಸುವ ಪರಿಸ್ಥಿತಿ ಬಂತು. ದಿನೇ ದಿನೇ ತಾಪಮಾನ ಹೆಚ್ಚಳವಾಗುತ್ತಿರುವುದರಿಂದ ಬಾಯಾರಿಕೆ ಹೆಚ್ಚಾಗುತ್ತಿದೆ. ಮೇಲಾಧಿಕಾರಿಗಳು ಪರೀಕ್ಷಾ ಕೇಂದ್ರಗಳ ಕಡೆಗೆ ಗಮನ ಹರಿಸಿ ಮೂಲ ಸೌಲಭ್ಯಗಳು ಒದಗಿಸಲು ಪಾಲಕರು ಆಗ್ರಹಿಸಿದ್ದಾರೆ.



ಬಸವಕಲ್ಯಾಣ :- ಪ್ರತಿವರ್ಷದಂತೆ ಈ ವರ್ಷವೂ ಕೂಡ ನಗರದ ಕ್ಲಿಫ್ ಟೇಲರ್ ಅಂಗಡಿಯಲ್ಲಿ ರಂಜಾನ್ ಹಬ್ಬದ ಪ್ರಯುಕ್ತ ಇಫತಾರ ಕೂಟ ಹಮ್ಮಿಕೊಳ್ಳಲಾಯಿತ್ತು. ಈ ಸಂದರ್ಭದಲ್ಲಿ ಖಾಜಾಮೈನೋದ್ದಿನ ಚಾಬುಕ ಸವಾರ. ಜಾಹಂಗೀರ್ ಭಲದಾರ್. ಅಬ್ದುಲ್ ರೆಹಮಾನ್. ಜಭಿ. ಖಾಲೆದ. ಮುಜಾಮೀಲ್. ಅಂಕಣಕಾರರಾದ ನಾಗಪ್ಪಾ ನಿಣ್ಣೆ. ಡಿ.ಕೆ.ಪ್ರಹ್ಲಾದ. ಸೇರಿದಂತೆ ಅನೇಕರು ಭಾಗವಹಿಸಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಸಮಾಜದ ಸ್ವಾಸ್ಥ್ಯ ಹೆಚ್ಚಿಸುವ ಸಾಹಿತ್ಯ ಕೃತಿಗಳು ಹೊರಬರಲಿ



ಕಲಬುರಗಿ: ಮಾ.29: ಇಂದಿನ ಸಮಾಜದಲ್ಲಿ ಎಲ್ಲ ರಂಗಗಳು ಹಾದಿ ತಪ್ಪುತ್ತಿವೆ. ಸಮಾಜವನ್ನು ಸರಿದಾರಿಗೆ ತರುವ ಕಾರ್ಯವನ್ನು ನಮ್ಮ ಸಾಹಿತ್ಯ ಮಾಡುತ್ತದೆ. ಇದರಲ್ಲಿ ಬರಹಗಾರರ ಪಾತ್ರ ಬಹು ಮುಖ್ಯವಾಗಿದೆ. ಈ ದಿಸೆಯಲ್ಲಿ ಸಮಾಜದ ಸ್ವಾಸ್ಥ್ಯ ಹೆಚ್ಚಿಸುವ ಸಾಹಿತ್ಯ ಕೃತಿಗಳು ಹೊರಬರಲಿ ಎಂದು ಹಿರಿಯ ಸಾಹಿತಿ ಡಾ. ಶ್ರೀಶೈಲ ನಾಗರಾಳ ಹೇಳಿದರು.

ತಾಲೂಕಾ ಕನ್ನಡ ಸಾಹಿತ್ಯ ಪರಿಷತ್ತು ನಗರದ ಕನ್ನಡ ಭವನದ ಸುವರ್ಣ ಸಭಾ ಭವನದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನ ಹಾಗೂ ಯುಗಾದಿ ಪ್ರಯುಕ್ತ ಏರ್ಪಡಿಸಿದ್ದ ಕಾವ್ಯಬೇವು ವಿಶೇಷ ಮಹಿಳಾ ಕವಿಗೋಷ್ಠಿಗೆ ಚಾಲನೆ ನೀಡಿ ಅವರು ಮಾತನಾಡಿದರು.

ಕಸಾಪ ಜಿಲ್ಲಾಧ್ಯಕ್ಷ ವಿಜಯಕುಮಾರ ಪಾಟೀಲ ತೇಗಲತಿಪ್ಪಿ ಮಾತನಾಡಿ, ರಾಜ್ಯದಲ್ಲಿ ಆಡಳಿತದಲ್ಲಿನ ಭ್ರಷ್ಟಾಚಾರಕ್ಕೆ ಲಗಾಮು ಇಲ್ಲವಾಗಿದೆ. ಭ್ರಷ್ಟಾಚಾರ ಮಿತಿ ಮೀರಿದರೆ ಶ್ರೀಸಾಮಾನ್ಯನಿಗೆ ಉಳಿಗಾಳವಿಲ್ಲ. ಈ ವ್ಯವಸ್ಥೆ ವಿರುದ್ಧ ನಾವೆಲ್ಲ ಒಟ್ಟಾಗಿ ಹೋರಾಡುವ ಅನಿವಾರ್ಯತೆ ಇದೆ ಎಂದು ಹೇಳಿದ ಅವರು, ಬೆಳಕಿಗೆ ಬಾರದ ಗ್ರಾಮೀಣ ಭಾಗದ ಮಹಿಳೆಯರು ಸಾಹಿತ್ಯಕ ಬರವಣಿಗೆ ಪ್ರೇರಣೆ ನೀಡುವ ನಿಟ್ಟಿನಲ್ಲಿ ಪರಿಷತ್ತು ಇಂಥ ಅನೇಕ ವೈವಿಧ್ಯಮಯ ಕಾರ್ಯಕ್ರಮಗಳನ್ನು ರೂಪಿಸಲಾಗುತ್ತಿದೆ ಎಂದರು.

ಹಿರಿಯ ಲೇಖಕಿ ಡಾ. ಕಾವ್ಯಶ್ರೀ ಮಹಾಗಾಂವಕರ್ ಅಧ್ಯಕ್ಷತೆ ವಹಿಸಿದ್ದರು. ಸರಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಬಸವರಾಜ ಬಳ್ಳುಂಡಗಿ, ಪಾಲಕೆ ಉಪ ಮೇಯರ್ ನಾಗವೇಣಿ ತಿಪ್ಪಣ್ಣಪ್ಪ ಕಮಕನೂರ, ಕಸಾಪ ತಾಲೂಕಾಧ್ಯಕ್ಷ ಶಿವಲೀಲಾ ಕಲಗುರ್ಕಿ ಪ್ರಾಸ್ತಾವಿಕ ಮಾತುಗಳನ್ನಾಡಿದರು. ಜಿಲ್ಲಾ ಕಸಾಪ ಗೌರವ ಕಾರ್ಯದರ್ಶಿ ಶಿವರಾಜ ಅಂಡಗಿ, ತಾಲೂಕಾ ಕಸಾಪ ದ ಕೋಶಾಧ್ಯಕ್ಷ ಕುಪೇಂದ್ರ ಬರಗಾಲಿ, ವಿಶಾಲಾಕ್ಷಿಮಾಯಣ್ಣವರ್, ಭಾಗ್ಯಶ್ರೀ ಮರಗೋಳ, ಶರಣು ಹಾಗರಗುಂಡಗಿ, ಕವಿತಾ ಕವಳೆ ವೇದಿಕೆ, ರಾಜೇಂದ್ರಮಾಡಬೂಳ ಮೇಲಿದ್ದರು. ಅನೇಕ ಕವಿಗಳು ವಾಚಿಸಿದ ಸ್ವರಚಿತ ಕವನಗಳು ಪ್ರೇಕ್ಷಕರ ಮನಗೆದ್ದವು. ವಿವಿಧ ಕ್ಷೇತ್ರದ ಸಾಧಕರಿಗೆ ಅನುಪಮ ಗೌರವ ಪುರಸ್ಕಾರವನ್ನು ನೀಡ ಸತ್ಕರಿಸಲಾಯಿತು.

ಜಾಹೀರಾತಿಗಾಗಿ ಇಂದೇ
ಸಂಪರ್ಕಿಸಿರಿ:9632899236

# ಪರಿಸರ ಸಮತೋಲನ ಕಾಪಾಡಲು ಮರ ಗಿಡ ಬೆಳೆಸಿ.: ಆನಂದರಾವ




ಮಲ್ಲಮ್ಮ ನುಡಿ ವಾರ್ತೆ

ಹುಮ್ನಾಬಾದ್: ಪರಿಸರ ಅಸಮತೋಲನ ಹೋಗಲಾಡಿಸಲು ಪ್ರತಿಯೊಬ್ಬರು ಕಡ್ಡಾಯವಾಗಿ ಮರಗಳ ಬೆಳೆಸಿ ಪರಿಸರ ಸಮತೋಲನ ಕಾಪಾಡಬೇಕೆಂದು ತಾಲೂಕಿನ ಓತಗಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ರಾಷ್ಟ್ರೀಯ ಹಸಿರು ಪಡೆಯೋಜನೆಯಲ್ಲಿ ಹಮ್ಮಿಕೊಂಡಿದ್ದ ಪರಿಸರ ಸಂರಕ್ಷಣೆ ಜನಜಾಗೃತಿ ಕಾರ್ಯಕ್ರಮವನ್ನು ಶಾಲಾ ಮುಖ್ಯ ಗುರುಗಳಾದ ಆನಂದ್‌ರಾವ್ ವರನಾಳ ಉದ್ಘಾಟಿಸಿ ಮಾತನಾಡುತ್ತಾ ಕರೆ ನೀಡಿದರು. ಪ್ರತಿ ಗ್ರಾಮಗಳಲ್ಲಿ ಕಡ್ಡಾಯವಾಗಿ ಬೃಹತ ಪ್ರಮಾಣದಲ್ಲಿ ಮರಗಿಡ ಬೆಳೆಸಿ ಪರಿಸರ ಸಂರಕ್ಷಣೆಗೆ ಸಹಾಯ ಮಾಡಬೇಕೆಂದು ಸಲಹೆ ನೀಡಿದರು. ಪರಿಸರ ಅಸಮತೋಲನದಿಂದ ವಾಯುಗುಣದಲ್ಲಿ ಬದಲಾವಣೆಯಾಗಿ ಹಲವಾರು ಪ್ರಕೃತಿ ವಿಕೋಪಗಳು ಸಂಭವಿಸಲಾರಂಭಿಸಿವೆ. ಪರಿಸರ ಸಮತೋಲ ಕಾಪಾಡಿದರೆ ನಮಗೆ ಉಳಿಗಾಲದ ಎಂದರು, ರಾಷ್ಟ್ರೀಯ ಹಸಿರುಪಡೆಯೋಜನೆ ವಿದ್ಯಾರ್ಥಿಗಳಲ್ಲಿ ಪರಿಸರ ಅರಿವು ಮೂಡಿಸಲು ಸಹಾಯವಾಗಿದೆ ಎಂದರು. ಪರಿಸರವಾದಿ ಶೈಲೇಂದ್ರ ಕಾವಡಿ ಮಾತನಾಡಿ ಪರಿಸರ ಸಮತೋ ಲನ ಕಾಪಾಡುವಲ್ಲಿ ಪ್ರಾಣಿ-ಪಕ್ಷಿಗಳ ಪಾತ್ರ ತುಂಬಾ ಮಹತ್ವದಾಗಿದೆ ಎಂದರು, ವನ್ಯ ಪ್ರಾಣಿ ಪಕ್ಷಿಗಳು ನಮ್ಮ ದೇಶ ಸಂಪತ್ತು ಸಂರಕ್ಷಿಸಿ ಕಾಪಾಡಲು ನಮ್ಮೆಲ್ಲರ ಆದ್ಯಕರ್ತವ್ಯವಾಗಿದೆ ಎಂದರು. ಮನೆಗೆ ಬರುವ ಗುಬ್ಬಚ್ಚಿಗಳನ್ನು ವಿದ್ಯಾರ್ಥಿಗಳು ಪ್ರೀತಿಯಿಂದ ಕಾಣಬೇಕೆಂದು ತಿಳಿಸಿದರು. ಸಾಂಕ್ರಾಮಿಕ ರೋಗಗಳನ್ನು ತಡೆಗಟ್ಟುವಂತೆ ತುಳಸಿ, ಅಮೃತಬಳ್ಳಿ, ಸಸಿಗಳು ಕಡ್ಡಾಯವಾಗಿ ನೇಡಲು ತಿಳಿಸಿದರು. ನದಿ ಹಳ್ಳಕೊಳ್ಳ ಮಾಲಿನ್ಯ ಮಾಡದೆ ಸ್ವಚ್ಛತೆ ಕಾಪಾಡಲು ವಿದ್ಯಾರ್ಥಿಗಳಿಗೆ ತಿಳಿಸಿದರು. ವಿದ್ಯಾರ್ಥಿಗಳಿಂದ ಪರಿಸರ ಸಂರಕ್ಷಣೆ ಜನಜಾಗೃತಿ ಅಂಗವಾಗಿ ಗ್ರಾಮದಲ್ಲಿ ಪರಿಸರ ಪರಭಾತಫೇರಿ ಜರುಗಿತು ಸಾರ್ವಜನಿಕರು ಗಮನ ಹರಿಸಬೇಕು ತಿಳಿಸಿದರು. ಸಹಶಿಕ್ಷಕರಾದ ಸುನಿತಾ ವಾಡೇಕರ್, ವೈಜಿನಾಥ್, ಬಸವರಾಜ್, ಲಕ್ಷ್ಮಣ್, ಸರಸ್ವತಿ, ರಾಣಿ, ಸಂಗೀತಾ, ಅತಿಥಿ ಶಿಕ್ಷಕರಾದ ಉಮಾಶ್ರೀ, ಜಯಲಕ್ಷ್ಮಿ, ಕುಮಾರಿ ಅರ್ಚನಾ, ಉಪಸಿತರಿದ್ದರು.

ಪರಿಸರ ಜಾಗೃತಿ ಅಂಗವಾಗಿ ಶಾಲಾ ಆವರಣದಲ್ಲಿ ಸಸಿ ನೆಡಸಲಾಯಿತು.

# ಇಫ್ತಾರ್ ಕೂಟ ಭಾವೈಕತೆ ಒಡಮೂಡಿಸಲು ಸಹಾಯ:- ರಾಜಶೇಖರ ಪಾಟೀಲ್



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:- ಪವಿತ್ರ ರಂಜಾನ್ ಉಪವಾಸವೃತ್ತ ಅಂಗವಾಗಿ ಕಾಂಗ್ರೆಸ್ ಮುಖಂಡ ಇಸ್ಮಾಯಿಲ್ ಖುರೇಶಿ ಇಫ್ತಾರ್ ಕೂಟ ಏರ್ಪಡಿಸಿದ್ದರು. ಈ ಇಫ್ತಾರ್ ಕೂಟ ಉದ್ದೇಶಿಸಿ ಮಾಜಿ ಸಚಿವ ರಾಜಶೇಖರ ಪಾಟೀಲ್ ಭಾಗವಹಿಸಿ ಮಾತನಾಡಿದ ಅವರು, ರಂಜಾನ್ ಹಬ್ಬ ಪವಿತ್ರ ಹಬ್ಬವಾಗಿದೆ ರಂಜಾನ್ ಇಫ್ತಾರ್ ಕೂಟ ಸಾಮರಸ್ಯ ಒಡಮುಡಿಸಲು ಸಹಾಯ ಹಿಂದೂ ಮುಸ್ಲಿಮರು ಸಹೋದರತ್ವದಿಂದ ಬಾಳಲು ತಿಳಿಸಿದರು. ಈ ಸಂದರ್ಭದಲ್ಲಿ ಗ್ಯಾರೆಂಟಿ ಯೋಜನೆಯ ಅನುಷ್ಠಾನ ಸಮಿತಿ ಅಧ್ಯಕ್ಷ ಅಪ್ಸರಮಿಯಾ, ಪುರಸಭೆ ಮಾಜಿ ಅಧ್ಯಕ್ಷ ಹಾಲಿ ಸದಸ್ಯ ದಿಲೀಪಕುಮಾರ್ ಬಗ್ದಲಕರ್, ಉಪಾಧ್ಯಕ್ಷ ಮುಜಾಫರ್ ಪಟೇಲ್, ಅಶೋಕ ಸ್ವಾಮಿ, ಅಣೆಪ್ಪ ವರನಾಳ, ಯುವ ಕಾಂಗ್ರೆಸ್ ಅಧ್ಯಕ್ಷ ಗುಂಡು-ರೆಡ್ಡಿ ರಂಗಾರೆಡ್ಡಿ, ಪುರಸಭೆ ಸದಸ್ಯರಾದ ಬಾಬಾ ಆರ್.ಸಿ.ಸಿ. ವಿಶಾಲ ಬೋರಳೆ, ಪುರಸಭೆ ಮುಖ್ಯಾಧಿಕಾರಿ ಹುಸಾಮುದ್ದೀನ್ ಬಾಬಾ, ವೀರೇಶ್ ತುಗಾಂವ, ರಮೇಶ ಪಾರಾ, ಷರೀಫ್, ಮೋಜಯಿಸ್ ಬಾರುದವಾಲೇ, ಅಮ್ಮ ಹಫೀಸ್, ಖಾದರ್ ಶಾಣುಲಾಕ್, ಶಕೀಲ್ ಶಾಣುಲಾಕ್, ದತ್ತು ಗೌಳಿ, ವಿಜಯಕುಮಾರ್ ಕಲ್ಲೂರ್ ಸೇರಿದಂತೆ ಇತರರು ಉಪಸ್ಥಿತರಿದ್ದರು.



ಬಸವಕಲ್ಯಾಣ :- ತಾಲೂಕಿನ ಸಸ್ತಾಪೂರ ಹತ್ತಿರ ಇರುವ ರಾಸೂರೆ ಫಾರ್ಮ್ ಹೌಸ್ ಪರಿಸರದಲ್ಲಿ ನಿರ್ಮಿಸಿದ ನರ್ಮದೇಶ್ವರ ಶಿವ ಮಂದಿರದಲ್ಲಿ ಪ್ರಾಣ ಪ್ರತಿಷ್ಠಾಪನೆ ಮಹೋತ್ಸವ ಹಾಗೂ ಕಳಸ ಸ್ಥಾಪನೆ ಕಾರ್ಯಕ್ರಮದಲ್ಲಿ ಶ್ರೀ ರುತ್ವಿಕ್ ಮಹಾರಾಜ ನೇತೃತ್ವದಲ್ಲಿ ಜರುಗಿತು. ಡಾ. ಪ್ರಭುಲಿಂಗ ರಾಸೂರೆ. ಶ್ವೇತಾ ರಾಸೂರೆ. ಸೇರಿದಂತೆ ಇನ್ನಿತರರು ಇದ್ದರು. (ಮಲ್ಲಮ್ಮ ನುಡಿ ಚಿತ್ರ)

# 52,500 ರೂ.ಮೌಲ್ಯದ ತೋಟದ ಸಾಮಗ್ರಿ ಕಳವು

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.29-ಹಾಗರಗಾ ಸೀಮಾಂತರದಲ್ಲಿರುವ ತೋಟದಲ್ಲಿ ತೋಟದ ನೀರಾವರಿಗೆ ಉಪಯೋಗಿಸುವ 52, 500 ರೂ.ಮೌಲ್ಯದ ತೆ-ೂಟದ ಸಾಮಗ್ರಿಗಳನ್ನು ಕಳವು ಮಾಡಲಾಗಿದೆ. ಬಸವರಾಜ ಬಪ್ಪನ ಅವರ ತೋಟದಲ್ಲಿ ತೋಟದ ನೀರಾವರಿಗೆ ಉಪಯೋಗಿಸುವ 5 ಸಾವಿರ ರೂ.ಮೌಲ್ಯದ 60 ಫೀಟ್ ಬೋರವೆಲ್ ಕೇಬಲ್, 8 ಸಾವಿರ ರೂ.ಮೌಲ್ಯದ ಟ್ರ್ಯಾಕ್ಟರ್ ಬ್ಯಾಟರಿ, 8 ಸಾವಿರ ರೂ.ಮೌಲ್ಯದ ಸೋಲಾರ್ ಬ್ಯಾಟರಿ, 3 ಸಾವಿರ ರೂ.ಮೌಲ್ಯದ ಸ್ಪ್ಯಾನರ್ ಸೆಟ್, 18 ಸಾವಿರ ರೂ.ಮೌಲ್ಯದ ಸಲಾಕೆ, ಟಿಕಾವು, ಇತರೆ ಕೃಷಿಗೆ ಉಪಯೋಗಿಸುವ ಸಾಮಗ್ರಿ ಮತ್ತು 15 ಸ್ಪಿಂಕಲರ್ ಟ್ಯಾಪ್, 4 ಸಾವಿರ ರೂ.ಮೌಲ್ಯದ 600 ಫೀಟ್ ಸರ್ವಿಸ್ ವಾಯರ್ ಬಂಡಲ್, 6,500 ರೂ.ಮೌಲ್ಯದ ಕ್ರಿಮಿನಾಶಕ ಔಷಧ ಹೊಡೆಯಲು ಉಪಯೋಗಿಸುವ ಯಂತ್ರದ ಬ್ಯಾಟರಿ ಸೇರಿ 52,500 ರೂ.ಮೌಲ್ಯದ ಸಾಮಗ್ರಿ ಕಳವು ಮಾಡಲಾಗಿದೆ. ಈ ಸಂಬಂಧ ವಿಶ್ವವಿದ್ಯಾಲಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

# 210 ಬೆಡ್‌ಗಳ ಸಾಮರ್ಥ್ಯವಿರುವ ಕ್ವಿದಾಯಿ ಕ್ಯಾನ್ಸರ್ ಆಸ್ಪತ್ರೆ

## ನಿರ್ಮಾಣ ಮಾಡಲು ಸ್ಥಳ ವೀಕ್ಷಣೆ: ವೈದ್ಯಕೀಯ ಸಚಿವ ಡಾ. ಶರಣಪ್ರಕಾಶ ಪಾಟೀಲ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಮಾ.29: ಕ್ವಿದಾಯಿ ಕ್ಯಾನ್ಸರ್ ಆಸ್ಪತ್ರೆ ನಿರ್ಮಾಣ ಮಾಡಲು ಒಂದೂವರೆ ಎಕರೆ ಜಾಗದಲ್ಲಿ 210 ಬೆಡ್‌ಗಳ ಸಾಮರ್ಥ್ಯವಿರುವ ಕಟ್ಟಡದ ಸ್ಥಾಪಿಸಲು ರಾಜ್ಯದ ವೈದ್ಯಕೀಯ ಶಿಕ್ಷಣ, ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಖಾತೆ ಸಚಿವ ಡಾ.ಶರಣಪ್ರಕಾಶ ಪಾಟೀಲ ಸ್ಥಳ ಪರಿಶೀಲನೆ ನಡೆಸಿದರು.

ಶನಿವಾರದಂದು ಹಳೆ ಕಿದ್ವಾಯಿ ಕ್ಯಾನ್ಸರ್ ಆಸ್ಪತ್ರೆಯಲ್ಲಿ ಈಗಾಗಲೇ 80 ಬೆಡ್‌ಗಳ ಒಟ್ಟು 300 ಬೆಡಗಳನ್ನು ಸ್ಥಾಪಿಸಿದ್ದರೆ ರೀಜನಲ್ ಕ್ಯಾನ್ಸರ್ ಸೆಂಟರ್ ಆದರೆ ಈ ಭಾಗದ ರೋಗಿಗಳಿಗೆ ಚಿಕಿತ್ಸೆ ಕಡಿಮೆ ವೆಚ್ಚದಲ್ಲಿ ಪಡೆಯಲು ಅನುಕೂಲವಾಗುತ್ತದೆ ಎಂದು ಸಚಿವರು ತಿಳಿಸಿದರು.

76 ಕೋಟಿ ರೂ. ವೆಚ್ಚದಲ್ಲಿ ಏಪ್ರಿಲ್ 16 ರಂದು ಒಂದುವರೆ ಎಕರೆ ಜಾಗದಲ್ಲಿ ಕ್ಯಾನ್ಸರ್ ಆಸ್ಪತ್ರೆಯ ಅಡಿಗಲ್ಲು ಕಾರ್ಯಕ್ರಮ ಮಾಡುವ ಉದ್ದೇಶವಿದ್ದು, ಈ ಕಾರ್ಯಕ್ರಮಕ್ಕೆ ಮುಖ್ಯಮಂತ್ರಿ ಸಿದ್ಧರಾಮಯ್ಯ, ಎ.ಐ.ಸಿ.ಸಿ. ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಹಾಗೂ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಆಗಮಿಸುವರು.

ಈಗಾಗಲೇ ಆಸ್ಪತ್ರೆ ನಿರ್ಮಾಣದ ಕಾಮಗಾರಿಯ ಅನುದಾನಕ್ಕೆ ಕ್ಯಾಬಿನೇಟ್ ಅನುಮೋದನೆ ನೀಡಿದ್ದು, ಕರ್ನಾಟಕ ಎಕ್ಸಾಮಿನೇಷನ್ ಅಥಾರಿಟಿಯಿಂದ 25 ಕೋಟಿ, ಕೆ.ಕೆ.ಆರ್.ಡಿ.ಬಿ ಯಿಂದ 25 ಕೋಟಿ ಕಿದ್ವಾಯಿ ಮುಖ್ಯ ಆಸ್ಪತ್ರೆಯಿಂದ 16 ಕೋಟಿ, ಸರ್ಕಾರದಿಂದ 10 ಕೋಟಿ, ಅನುದಾನ ನೀಡಲು ಕ್ಯಾಬಿನೇಟ್ ಅನುಮೋದನೆ ನೀಡಿದೆ ಎಂದರು.



ಕಳೆದ ಬಾರಿ ಸಚಿವನಾಗಿದ್ದಾಗ ಕಿದ್ವಾಯಿ ಕ್ಯಾನ್ಸರ್ ಆಸ್ಪತ್ರೆಯನ್ನು ಪ್ರಾರಂಭಿಸಿದೆ ಕಾರಣಾಂತರಗಳಿಂದ ಅದು ಬಂದ್ ಅಗಿ–ತ್ತು 2017 ರಲ್ಲಿ ಪುನ: ಆರಂಭಿಸಿದ್ದು, ಈಗ ಸಾಕಷ್ಟ ಪ್ರಗತಿಯಾಗಿದೆ ಎಂದರು.

ಸುಮಾರು 2020 ರಿಂದ 9867 ಓ.ಪಿ.ಡಿ.ಯಾಗಿದೆ 7831 ಹೆಚ್ಚುವರಿ ಕೇಸಗಳು, 7831 ಕನ್‌ಫಾರ್ಮ ಕೇಸ್, 1521 ಸರ್ಜರಿ, 12808 ಕಿಮೋಥೇರಪಿ, 1648 ರೇಡಿಯೇಷನ್ ಆರ್ಟಿಪ್ಲಾನ್, ಪಿ.ಆರ್.ಸಿ. ಕೇಸ್ 1330, ಪಲೋಅಪ್ ಕೇಸ್‌ಗಳು 77508 ಈ ರೀತಿಯಾಗಿ ಕಿದ್ವಾಯಿ ಆಸ್ಪತ್ರೆ ಕಾರ್ಯನಿರ್ವಹಿಸಿದೆ ಎಂದರು. ಕಲಬುರಗಿ ಜಿಲ್ಲೆಯಲ್ಲಿ ಬಹಳ ಹಿಂದಿನ ದಿನಗಳಿನಿಂದಲೂ ಬ್ರಾಕಿ ಥರಫಿ ಪ್ರಾರಂಭ ಮಾಡುವ ಯೋಚನೆ ಇತ್ತು ಕಾರಣಂತರಗಳಿಂದ ವಿಳಂಭವಾಯಿತು. ಕಲಬುರಗಿ ಜಿಲ್ಲೆಯಲ್ಲಿ ಕ್ಯಾನ್ಸರ್ ರೋಗಿಗಳಿಗೆ ಬೇಕಾದ ಚಿಕಿತ್ಸೆ ನೀಡಲು ಕಿದ್ವಾಯಿ ಕ್ಯಾನ್ಸರ್ ಆಸ್ಪತ್ರೆಯನ್ನು ಪ್ರಾರಂಭಿಸಲಾಗಿತ್ತು. ಕಲ್ಯಾಣ ಕರ್ನಾಟಕ ಭಾಗದಲ್ಲಿನ ಆರ್ಥಿಕವಾಗಿ ಬಡವರು ನಗರದ ಸ್ಥಳೀಯ ಮತ್ತು ಗ್ರಾಮೀಣ ಪ್ರದೇಶ ಜನರಿಗೆ ಚಿಕಿತ್ಸೆ ಪಡೆಯಲು ಬಹಳಷ್ಟು ಅನುಕೂಲವಾಗುತ್ತದೆ ಅದರಲ್ಲಿ ಆರ್ಥಿಕವಾಗಿ ಬಡವರು ಬಿಪಿಎಲ್ ಕಾರ್ಡ ಹೊಂದಿರುವ ಬಡ ರೋಗಿಗಳಿಗೆ ಕಿದ್ವಾಯಿ ಆಸ್ಪತ್ರೆ ಉಚಿತ ಚಿಕಿತ್ಸೆ ನೀಡಲಾಗುತ್ತದೆ ಎಂದರು.

ಕಿದ್ವಾಯಿ ಆಸ್ಪತ್ರೆಯಲ್ಲಿ ವಿಶೇಷವಾಗಿ ಗರ್ಭಕಂಠ, ಸ್ತನ ಪ್ರಾಸ್ಟೇಟ್ ಇತರೆ ಕ್ಯಾನ್ಸರ್ ಬ್ರಾಕಿ ಥರಪಿ ಹೆಚ್ಚು ಪರಿಣಾಮಕಾರಿಯಗಿದೆ ಕ್ಯಾನ್ಸರ್ ರೋಗದ ಗುಣಮುಖರನ್ನಾಗಿ ಮಾಡುವ ಉದ್ದೇಶದಿಂದ ಕಿದ್ವಾಯಿ ಆಸ್ಪತ್ರೆಯಲ್ಲಿ ಬ್ರಾಕಿ ಥರಪಿ ಪ್ರಾರಂಭಿಸಿದ್ದೇವೆ ಕ್ಯಾನ್ಸರ್ ಚಿಕಿತ್ಸೆ ಬೇಕಾದ ಉಪಕರಣವನ್ನು ಜರ್ಮನಿಯಿಂದ 6.2 ಕೋಟಿ ವೆಚ್ಚ ಮಾಡಿ ಜರ್ಮನಿಯಿಂದ ತರಿಸಿದ್ದು, ಈಗಾಗಲೆ ಚಿಕಿತ್ಸೆ ಕಾರ್ಯ ಆರಂಭವಾಗಿದೆ.

ಕಲಬುರಗಿ ಜಿಲ್ಲೆಯಲ್ಲಿ ಉದ್ಯೋಗ ಏಪ್ರಿಲ್ 16 ರಂದು ಮೇಳವನ್ನು ಹಮ್ಮಿಕೊಳ್ಳುತ್ತಿದ್ದು, ನಿರುದ್ಯೋಗಿ ಯುವಕರು ಉದ್ಯೋಗ ಮೇಳದಲ್ಲಿ ಪಾಲ್ಗೊಂಡು ಎಸ್.ಎಸ್.ಎಲ್.ಸಿ ಪಿಯುಸಿ ಮತ್ತು ಪದವಿಯನ್ನು ಮುಗಿಸಿದ ಯುವಕರು ನೀರುದ್ಯೋಗಿಗಳಾಗದೆ ಈ ಬೃಹತ್ ಉದ್ಯೋಗ ಮೇಳದಲ್ಲಿ ಪಾಲ್ಗೊಂಡು ಉದ್ಯೋಗವನ್ನು ಪಡೆದುಕೊಂಡು ಆರ್ಥಿಕವಾಗಿ ಸಬಲರಾಗಬೇಕೆಂದು ತಿಳಿಸಿದರು. ಈ ಭಾಗದಲ್ಲಿ ನಿರುದ್ಯೋಗಿ ಸಮಸ್ಯೆಗಳು ಹೆಚ್ಚಿನ ಪ್ರಮಾಣದಲ್ಲಿ ಇದ್ದು ಈ ಉದ್ಯೋಗ ಮೇಳದಲ್ಲಿ ಸುಮಾರು 250 ಕ್ಕೂ ಹೆಚ್ಚು ಕಂಪನಿಗಳು ಭಾಗವಹಿಸುತ್ತಿವೆ ಇಂತಹ ಅವಕಾಶಗಳನ್ನು ಸದುಪಯೋಗ ಪಡಸಿಕೊಂಡು ಈ ಭಾಗದ ಪ್ರತಿಯೊಬ್ಬರೂ ಉದ್ಯೋಗವನ್ನು ಪಡೆದುಕೊಳ್ಳಬೇಕೆಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಕಿದ್ವಾಯಿ ಪ್ರಭಾರಿ ಅಧಿಕಾರಿ ಡಾ.ಗುರುರಾಜ ದೇಶಪಾಂಡೆ, ಅಸೋಸಿಯೆಟ್ ಪ್ರೋಫೆಸರ್‌ಗಳಾದ ಡಾ. ಶೃತಿ ವಿ, ಡಾ. ನವೀನ್ ಬಿ, ಡಾ. ಉಮೇಶ, ರೇಡಿಯೇಷನ್ ಅಂಕಲಾಜಿಸ್ಟ್ ಡಾ. ರಾಹುಲ್ ಲೋನ್, ಟ್ರಾಮಾ ಕೇರಿ ಸೆಂಟರ್ ಪ್ರಭಾರಿ ಡಾ. ಶಿವಕುಮಾರ, ಓರಲ್ ಅಂಕಲಾಜಿಸ್ಟ್ ವಿರಭದ್ರ ಕಲ್ಯಾಣ ಉಪಸ್ಥಿತರಿದ್ದರು.

## ಆತ್ಮಹತ್ಯೆ ಮಾಡಿಕೊಂಡ ವಿದ್ಯಾರ್ಥಿನಿ ಮನೆಗೆ ಕೋಸಂಬೆ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಮಾ.29: ಇತ್ತೀಚಿಗೆ ತಾಲೂಕಿನ ಡಿಗ್ಗಿ ಗ್ರಾಮದಲ್ಲಿ ನೇಣು ಬಿಗಿದು ಆತ್ಮ ಹತ್ಯೆ ಮಾಡಿಕೊಂಡ ವಿದ್ಯಾರ್ಥಿನಿ ಸೋನಿ ತಂದೆ ಸಂತೋಷ ಬನವಾಸೆ ಅವರ ಮನೆಗೆ ಶನಿವಾರ ರಾಜ್ಯ ಮಕ್ಕಳ ರಕ್ಷಣೆ ಆಯೋಗದ ಸದಸ್ಯರಾದ ಶಶಿಧರ ಕೋಸಂಬೆ ದಿಡೀರ ಭೇಟಿ ನೀಡಿ ಕುಟುಂಬಸ್ಥರಿಗೆ ಸಾತ್ವನ ಹೇಳಿದರು. ವಿದ್ಯಾರ್ಥಿ ತಂದೆ ಸಂತೋಷ ಬನವಾಸೆ ಮಾತನಾಡಿ, ಮಗಳ ಓದಿನಲ್ಲಿ ಟಾಪರ್ ಆಗಿದ್ದಳು, ಪ್ರತಿ ದಿನ 11 ಗಂಟೆ ವರೆಗೂ ವಿದ್ಯಾಭ್ಯಾಸ ಮಾಡುತ್ತಿದಳು, ಮುಂದೆ ಓದಿ ದೊಡ್ಡ ಪದವಿ ಪಡೆಯುತ್ತೇನೆ ಎಂದು ಹೇಳುತ್ತಿದ್ದಳು ಎಂದು ಹೇಳಿ ಮಗಳ ನೋಟ ಬುಕ್ಕು ತೋರಿಸಿ ತಮ್ಮ ದುಃಖವನ್ನು ತೋಡಿಕೊಂಡರು. ಈ ಸಂದರ್ಭದಲ್ಲಿ ಶಶಿಧರ ಕೋಸಂಬೆ ಅವರು ಮಾತನಾಡಿ, ನಿಮ್ಮ ಪ್ರತಿಭಾಶಾಲಿ ಮಗಳನ್ನು ಕಳೆದುಕೊಂಡಿರುವ ನೋವು ನನಗು ಇದೆ, ಅವಳ ಕನಸು ಅವಳ ಸಹೋದರಿ ಸ್ವರ ಬನವಾಸೆ ಮೂಲಕ ನೆರವೇರಲಿ, ಸರಕಾರ ಸಿಗುವ ಸೌಲಭ್ಯವನ್ನು ಕೊಡಿಸುವ ಪ್ರಯತ್ನ ಮಾಡುತ್ತೇನೆ ಎಂದು ಹೇಳಿದರು. ಶಿಕ್ಷಣ ಇಲಾಖೆಯಿಂದ ವಿದ್ಯಾರ್ಥಿ ಕ್ಷೇಮ ಅಭಿವೃದ್ಧಿ ನಿಧಿಯಿಂದ 2.5 ಲಕ್ಷ ರೂ. ಪರಿಹಾರ ಕೊಡಿಸುವಂತೆ ಔರಾದ ಕ್ಷೇತ್ರ ಶಿಕ್ಷಣಾಧಿಕಾರಿ ಅವರಿಗೆ ತಿಳಿಸಿದರು. ಅದೇ ತರಹ ಶಿಶು ಅಭಿವೃದ್ಧಿ ಯೋಜನೆ –ನಿರ್ದಶನಾಲಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆವತಿಯಿಂದ ಮಕ್ಕಳ ಪ್ರಯೋಜಿತ ಯೋಜನೆ ಅದಿನದಲ್ಲಿ ಮಾಸಿಕ 4 ಸಾವಿರ ರೂ ವನ್ನು ಮೂರು ವರ್ಷದವರಿಗೆ ನೀಡುವಂತೆ ಸಿ.ಡಿ.ಪಿ.ಓ ಅವರಿಗೆ ತಿಳಿಸಿದರು. ಪಿ.ಎಸ್.ಐ ಅವರಿಗೆ ಕೇಸಗೆ ಸಂಭಂದ ಪಟ್ಟ ದಾಖಲೆಗಳು ನೀಡಿ ಸಹಕರಿಸುವಂತೆ ಹೇಳಿದರು.

"ಮಕ್ಕಳು ತಂದೆ–ತಾಯಿ ಬುದ್ದಿ ಮಾತು ಹೇಳಿದ್ದಕ್ಕೆ ಇಂತಹ ಹುಚ್ಚು ಸಾಹಸಕ್ಕೆ ಕೈ ಹಾಕ ಬಾರದು, ಇದರಿಂದ ನಿಮ್ಮ ಅಮೂಲ್ಯ ಜೀವನ ನೀವೇ ಹಾಳು ಮಾಡಿ ಕೊಂಡಂತೆ ಆಗುತ್ತೆದೆ. ತಾಳ್ಮೆಯಿಂದ ಯೋಚನೆ ಮಾಡಿ ನಿರ್ಧಾರ ಮಾಡಿ ಕೊಳಬೇಕು."



**–ಶಶಿಧರ ಕೋಸಂಬೆ,**
**ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣೆ ಆಯೋಗದ ಸದ್ಯಸ್ಯರು, ಬೆಂಗಳೂರು**

ಈ ಸಂದರ್ಭದಲ್ಲಿ ಔರಾದ ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಜೆ. ರಂಗೇಶ,, ಶಿಶು ಅಭಿವೃದ್ಧಿ ಯೋಜನೆ ಅಧಿಕಾರಿ ಇಮಲ್ಲಪ್ಪ, ಕಮಲನಗರ ಪೊಲೀಸ್ ಠಾಣಾ ಪಿ.ಎಸ್.ಐ. ಚಂದ್ರಶೇಖರ ನಿರ್ಣೆ ಹಾಗೂ ಕುಟುಂಬಸ್ಥರು ಇದ್ದರು.

## ಅಂಗನವಾಡಿ ಕಾರ್ಯಕರ್ತೆಯರ ನೇಮಕದಲ್ಲಿ ವ್ಯಾಪಕ ಭ್ರಷ್ಟಾಚಾರ: ತಪ್ಪಿತಸ್ತರ ವಿರುದ್ಧ ಕ್ರಮಕ್ಕೆ ಭೂರೆ ಆಗ್ರಹ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಮಾ. 29 : ಜಿಲ್ಲೆಯಲ್ಲಿ ಅಂಗನವಾಡಿ ಕಾರ್ಯಕರ್ತೆಯರು ಹಾಗೂ ಸಹಾಯಕರ ನೇಮಕದಲ್ಲಿ ವ್ಯಾಪಕ ಭ್ರಷ್ಟಾಚಾರ ಜರುಗಿದ್ದು ತಪ್ಪಿತಸ್ತ ಅಧಿಕಾರಿಗಳ ವಿರೂದ್ಧ ಕ್ರಮ ಜರುಗಿಸಬೇಕೆಂದು ಯುವ ಕ್ರಾಂತಿ ಸಂಘಟನೆಯ ಜಿಲ್ಲಾ ಅಧ್ಯಕ್ಷ ಸಂಗಮೇಶ ಭೂರೆ ಆಗ್ರಹಿಸಿದರು.



ಶನಿವಾರ ಜಿಲ್ಲಾ ಪತ್ರಿಕಾ ಭವನದಲ್ಲಿ ಪತ್ರಿಕಾ ಗೋಷ್ಟಿ ಉದ್ದೇಶಿಸಿ ಮಾತನಾಡಿರುವ ಅವರು, ಕಮಲನಗರ ತಾಲೂಕಿನ ಅಂಗನವಾಡಿಯ ಕಾರ್ಯಕತೆ–ೞಯ ನೇಮಕಾತಿಯಲ್ಲಿ ಸಂಪೂರ್ಣವಾಗಿ ಅವ್ಯವಹಾರ ಆಗಿದೆ. ಕಡಿಮೆ ಅಂಕಗಳು ಪಡೆದವರನ್ನು ಸಹ ಹಣ ಪಡೆದು ಮರು ತಾತ್ಕಲಿಕ ಪಟ್ಟಿಯಲ್ಲಿ ಸೇರಿಸಿದ್ದಾರೆ ಇಂತಹ ಹಲವು ಉದಾಹರಣೆಗಳು ಇವೆ. ಇದು ಬಹಳಷ್ಟು ಗೊಂದಲಗಳಿಂದ ಕೂಡಿದೆ ಎಂದರು.

ಬೀದರ ಜಿಲ್ಲೆಯಲ್ಲಿ ಅರ್ಹರಿಗೆ ಕೆಲಸ ಸಿಗದೆ ಅನ್ಯಾಯವಾಗಿದೆ.

ಇಲ್ಲಿ ದುಡ್ಡು ಕೊ–ಟ್ಟೊರಿಗೆ ಮಾತ್ರ ನೇಮಕಾತಿ ಮಾಡಿಕೊಳ್ಳಲಾಗಿದೆ. ಜಿಲ್ಲೆಯ ಸೋನಾಳವಾಡಿ ಗ್ರಾಮದ ಅಂಗನವಾಡಿ ಕೇಂದ್ರದ ಕಾರ್ಯಕರ್ತೆ ಹುದ್ದೆಗೆ ಕಡಿಮೆ ಅಂಕ ಪಡೆದವರನ್ನು ಹಣ ಪಡೆದು ಆಯ್ಕೆ ಮಾಡಿದ್ದಾರೆ. ಅವರ ಇಬ್ಬರು ದಾಖಲೆಗಳನ್ನು ಈ ಪತ್ರಕ್ಕೆ ಲಗತ್ತಿಸಲಾಗಿದೆ. ಇದೆ ರೀತಿ ಹಲವಾರು ವಾಸಸ್ಥಳ ಪ್ರಮಾಣ ಪತ್ರದ ಅವಧಿ ಮುಗಿದರು ಹಾಗೆ ಒಂದು ಎರಡು ವರ್ಷದ ವಾಸಸ್ಥಳ ಪ್ರಮಾಣ ಪತ್ರ ಇದ್ದರು ಸಹ ಆಯ್ಕೆ ಮಾಡಿದ್ದಾರೆ. ಸರಕಾರದ ಯಾವುದೇ ನಿಯಮಗಳನ್ನು ಪಾಲಿಸಿಲ್ಲ ಎಲ್ಲಾ ಗಾಳಿಗೆ ತೂರಿ ತನ್ನ ಮನಸ್ಸಿಗೆ ಬಂದಂತೆ ಆಯ್ಕೆ ಮಾಡಿದ್ದಾರೆ ಇಲ್ಲಿ ಸಂಪೂರ್ಣವಾಗಿ ಅಕ್ರಮವಾಗಿದೆ. ಇಲ್ಲಿ ಇದಕ್ಕೆ ಸಂಬಂಧಪಟ್ಟ ಎಲ್ಲಾ ಅಧಿಲಾರಿಗಳು ಶಾಮಿಲಾಗಿದ್ದಾರೆ. ಹಾಗಾಗಿ ಇದರ ಬಗ್ಗೆ ಕೂಡಲೆ ತನಿಖೆ ನಡೆಸಿ ಅರ್ಹ ಅಭ್ಯರ್ಥಿಗಳಿಗೆ ನ್ಯಾಯ ಒದಗಿಸಬೇಕು ಎಂದು ಒತ್ತಾಯಿಸುವುದಾಗಿ ಹೇಳಿದರು. ಜಿಲ್ಲಾಧಿಕಾರಿಗಳು ಕುಲಕುಂಷವಾಗಿ ಪರಿಶಿಲಿಸಿ ತಪ್ಪು ಮಾಡಿದ ಎಲ್ಲಾ ಅಧಿಕಾರಿಗಳ ಮೇಲೆ ಒಂದೆರಡು ದಿನದಲ್ಲಿ ಕಾನೂನಿನ ಪ್ರಕಾರ ಶಿಸ್ತು ಕ್ರಮ ಜರುಗಿಸಬೇಕು ಕೂಡಲೆ ಅಮಾನತು ಮಾಡಬೇಕು ಇಲ್ಲದಿದ್ದಲಿ ಜಿಲ್ಲಾಧಿಕಾರಿಗಳ ಕಛೇರಿ ಎದುರುಗಡೆ ಅಹೋರಾತ್ರಿ ಉಪವಾಸ ಸತ್ಯಾಗ್ರಹ ಮಾಡಲಾಗುವುದು ಎಂದು ಎಚ್ಚರಿಸಿದರು. ರಾಜ್ಯ ಉಪಾಧ್ಯಕ್ಷ ಮಲ್ಲಿಕನಾಥ ಮಡಗೆ, ರಾಜ್ಯ ಉಪಾಧ್ಯಕ್ಷ ರಾಜಕುಮಾರ ಹಳ್ಳಿಖೆಡೆ, ಶರಣು ರಾಗಾ ಪತ್ರಿಕಾಗೋಷ್ಠಿಯಲ್ಲಿ ಉಪಸ್ಥಿತರಿದ್ದರು.

## ಒತ್ತಡದ ಜೀವನದಲ್ಲಿ ಸುಖವಾಗಿರಲು ಪೂಜೆ, ಧ್ಯಾನ ಅತ್ಯವಶ್ಯಕ : ಸಾಗರ ಖಂಡ್ರೆ

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಮಾ.29: ಇಂದಿನ ಒತ್ತಡದ ಜೀವನದಲ್ಲಿ ನಾವೆಲ್ಲರೂ ಸುಖವಾಗಿರಲು ಪೂಜೆ, ಧ್ಯಾನ, ಧರ್ಮಗುರುಗಳ ಪ್ರವಚನ ಅತ್ಯವಶ್ಯಕವಾಗಿದೆ ಎಂದು ಸಂಸದ ಸಾಗರ ಈಶ್ವರ ಖಂಡ್ರೆ ಹೇಳಿದರು.




ವೀರಶೈವ ಲಿಂಗಾಯತ ಮಠಗಳು, ಧಾರ್ಮಿಕ ಜಾಗೃತಿ ಜೊತೆಯಲ್ಲಿಯೇ, ಸಾಮಾಜಿಕ ಸಾಮರಸ್ಯ ಮೂಡಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುತ್ತಿವೆ. ಸಮಾಜದ ಕೆಳಮಟ್ಟದವರಿಗೆ ಅನ್ನ, ಶಿಕ್ಷಣ ನೀಡುವುದರೊಂದಿಗೆ ಅವರನ್ನು ಮೇಲುತ್ತುವ ಕೆಲಸ ಮಾಡುತ್ತಿವೆ. ಹೀಗಾಗಿ ರೇಣುಕಾಚಾರ್ಯ ದೇವಾಲಯ ನಿರ್ಮಾಣಕ್ಕೆ ಸ್ಥಳಾವಕಾಶ ಒದಗಿಸಿಕೊಡಲಾಗುವುದು.

– ಈಶ್ವರ ಖಂಡ್ರೆ, ಜಿಲ್ಲಾ ಉಸ್ತುವಾರಿ ಸಚಿವರು ಬೀದರ.

ಪಟ್ಟಣದ ಪುರಭವನದಲ್ಲಿ ಶನಿವಾರ ನಡೆದ ಜಗದ್ಗುರು ಶ್ರೀ ರೇಣುಕಾಚಾರ್ಯರ ಜಯಂತ್ಯೋತ್ಸವ ಹಾಗು ಯುಗಮಾನೋತ್ಸವ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಭಕ್ತಿಯಿಂದ ಪ್ರತಿನಿತ್ಯ ಲಿಂಗಪೂಜೆ ಮಾಡಿದರೆ ಶಾಂತಿ, ನೆಮ್ಮದಿ ಸಿಗುವುದು. ಆದರೆ ನಾವು ಬರೀ ಶಿವರಾತ್ರಿ ಲಿಂಗಪೂಜಿಕರಾಗುತ್ತಿದ್ದೇವೆ. ನಮಗೆ ಹಲವಾರು ಗುರುಗಳು ಸಿಗುತ್ತಾರೆ. ಆದರೆ ಜ್ಞಾನ ನೀಡುವ ಗುರುಗಳನ್ನು ನಾವು ಆಯ್ಕೆ ಮಾಡಿಕೊಳ್ಳಬೇಕು. ಹಣ, ಸಂಪತ್ತು ಒಂದುದಿನ ಇಲ್ಲವಾಗುತ್ತದೆ. ಆದರೆ ಗುರುಗಳು ನೀಡಿದ ಜ್ಞಾನ ಮಾತ್ರ ಕೊನೆಯವರೆಗೆ ಇರುತ್ತದೆ ಎಂದರು. ಬರುವ ದಿನಗಳಲ್ಲಿ ಸಚಿವರು ಹಾಗು ಸಂಸದರ ವತಿಯಿಂದ ಭಾಲ್ಕಿ ಪಟ್ಟಣದಲ್ಲಿ ಪಂಚಾಚಾರ್ಯ ಭವನ ಅಥವಾ ರೇಣುಕಾಚಾರ್ಯ ದೇವಾಲಯ ನಿರ್ಮಿಸಲು ಸ್ಥಳಾವಕಾಶ ಮಾಡಿಕೊಡಲಾಗುವುದು ಎಂದು ಹೇಳಿದರು. ಸಾನಿಧ್ಯವಹಿಸಿ ಮಾತನಾಡಿದ ಮೆಹಕರ ಮಠದ ಪೀಠಾಧಿಪತಿ ಶ್ರೀ ರಾಜೇಶ್ವರ ಶಿವಾಚಾರ್ಯರು, ಮುಂದಿನ ವರ್ಷದಲ್ಲಿ ರೇಣುಕಾಚಾರ್ಯರ ಜಯಂತಿ ಮಹೋತ್ಸವ ಅವರ ನೂತನ ಮಂದಿರದಲ್ಲಿಯೇ ಆಚರಿಸಲಾಗುವುದು ಎಂದು ತಮ್ಮ ಶ್ರೀಮಠದಿಂದ ದೇವಸ್ಥಾನ ನಿರ್ಮಿಸಲು 1 ಲಕ್ಷ ರೂ. ನೀಡಲಾಗುವುದು ಎಂದು ತಿಳಿಸಿದರು. ಇದಕ್ಕೆ ಪಕ್ಕದಲ್ಲಿದ್ದ ಮಹಾರಾಷ್ಟ್ರದ ಕಪೀಲಾಧಾರ ಮಠದ ಡಾ. ವೀರುಪಾಕ್ಷ ಶಿವಾಚಾರ್ಯರು ಮತ್ತು ಹುಡುಗಿಯ ಶ್ರೀ ಕರಿಬಸವೇಶ್ವರ ಮಠದ ಶ್ರೀ ವಿರುಪಾಕ್ಷ ಶಿವಾಚಾರ್ಯರು ತಾವು ಕೂಡ ತಮ್ಮ ಮಠಗಳಿಂದ ಮಂದಿರ ನಿರ್ಮಾಣಕ್ಕೆ ಒಂದೊಂದು ಲಕ್ಷ ರೂ. ನೀಡುವುದಾಗಿ ವಾಗ್ದಾನ ಮಾಡಿದರು. ಮಹಾರಾಷ್ಟ್ರದ ಕಪಿಲಾಧಾರ ಪೀಠದ ಡಾ. ವೀರುಪಾಕ್ಷ ಶಿವಾಚಾರ್ಯರು ಸನ್ನಿಧಾನ ವಹಿಸಿ ಮಾತನಾಡಿದರು.

ಶಿವಣಿ, ಹಲಬರ್ಗಾ ಮಠದ ಶ್ರೀ ಹಾವಗಿಲಿಂಗೇಶ್ವರ ಶಿವಾಚಾರ್ಯರು ಮಾತನಾಡಿ, ವೀರಶೈವ ಲಿಂಗಾಯತ ಧರ್ಮಸ್ಥಾಪಕ ಜಗದ್ಗುರು ರೇಣುಕಾಚಾರ್ಯರೇ ಆಗಿದ್ದಾ–ರೆ. ಪ್ರತಿಯೊಬ್ಬ ವೀರಶೈವ ಲಿಂಗಾಯತರು ತಮ್ಮ ತಮ್ಮ ಮನೆಯಲ್ಲಿ ಜಗದ್ಗುರು ಶ್ರೀ ರೇಣುಕಾಚಾರ್ಯರ ಭಾವಚಿತ್ರ ಸ್ಥಾಪಿಸಿ ಪೂಜಿಸಬೇಕು ಎಂದು ಹೇಳಿದರು. ಶ್ರೀ ಶಿವಾನಂದ ಸ್ವಾಮಿಗಳು ಸಾಯಿಗಾವ, ಶ್ರೀ ಬಸವಲಿಂಗ ಸ್ವಾಮೀಜಿ ಖಟಕಚಿಂಚೋಳಿ ಸನ್ನಿಧಾನ ವಹಿಸಿದ್ದರು. ಪಂಚಯ್ಯಾ ಸ್ವಾಮಿಜಿ ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಪುರಸಭೆ ಅಧ್ಯಕ್ಷೆ ಶಶಿಕಲಾ ಸಿಂದನಕೇರೆ, ಉಪಾದ್ಯಕ್ಷ ವಿಜಯಕುಮಾರ ರಾಜಭವನ, ಪುರಸಭೆ ಮಾಜಿ ಅಧ್ಯಕ್ಷ ಬಸವರಾಜ ವಂಕೆ, ಡಾ. ಪ್ರಭುಲಿಂಗ ಸ್ವಾಮಿ, ಗುರಯ್ಯಾ ಸ್ವಾಮಿ, ಅಖಿಲ ಭಾರತ ವೀರಶೈವ ಮಹಾಸಭಾದ ತಾಲೂಕು ಅಧ್ಯಕ್ಷ ಮಲ್ಲಿಕಾರ್ಜುನ ಹಲಮಂಡಗೆ, ಮಹಾದೇವ ಸ್ವಾಮಿ, ಭದ್ರೇಶ ಸ್ವಾಮಿ, ಸಂತೋಷ ಬಿಜಿಪಾಟೀಲ ಉಪಸ್ಥಿತರಿದ್ದರು.

## ಇಂದು ಖೇಡ-ಸಂಗಮ ಆಶ್ರಮದಲ್ಲಿ ಅಲ್ಲಮಪ್ರಭು ಜಯಂತಿ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಮಾ.29: ತಾಲೂಕಿನ ಖೇಡ–ಸಂಗಮದ ನೀಲಾಂಬಿಕಾಶ್ರಮದಲ್ಲಿ ಮಹಾಯೋಗಿ ಅಲ್ಲಮ ಪ್ರಭುಗಳ ಜಯಂತ್ಯುತ್ಸವ ಇಂದು ಸಂಜೆ 5ಕ್ಕೆ ಹಿರೇಮಠ ಸಂಸ್ಥಾನದ ಆಶ್ರಯದಲ್ಲಿ ನಡೆಯಲಿದೆ. ನಾಡೋಜ ಡಾ ಬಸವಲಿಂಗ ಪಟ್ಟದೇವರ ಸಾನಿಧ್ಯ, ಗುರುಬಸವ ಪಟ್ಟದೇವರ ನೇತೃತ್ವ, ಮಾತೆ ಡಾ ಮಹಾದೇವಮ್ಮಾ ತಾಯಿ ಅಧ್ಯಕ್ಷತೆ ವಹಿಸುವರು. ಕಪಲಾಪೂರದ ನೀಲಾಂಬಿಕಾ



ತಾಯಿ, ಡೋಣಗಾಪೂರದ ದೇವಮ್ಮತಾಯಿ, ಅತಿವಾಳದ ಶರಣಾಂಬಿಕಾ ತಾಯಿ ಭಾಗವಹಿಸುವರು. ಭಾಲ್ಕಿ ಡಿವೈಎಸ್‌ಪಿ ಶಿವಾನಂದ ಪವಾಡಶೆಟ್ಟಿ ಉದ್ಘಾಟಿಸಿದರು. ಯಾದಗಿರಿ ಜಿಲ್ಲಾ ಆರೋಗ್ಯ ಅಧಿಕಾರಿ ಡಾ ಮಹೇಶ ಬಿರಾದಾರ, ಬಿ.ಎಮ್ ಅಮರವಾಡಿ ಅವರಿಗೆ ಗೌರವ ಸನ್ಮಾನಿಸಲಾಗುತ್ತದೆ. ನಿವೃತ್ತ ಪ್ರಾಧ್ಯಾಪಕ ಶಿವರುದ್ರಯ್ಯ ಸ್ವಾಮಿ ಅನುಭಾವ ನೀಡುವರು. ವಿಶ್ವನಾಥ ಬಿರಾದಾರ, ಮಲ್ಲಿಕಾರ್ಜುನ ದಾನಾ, ವೈಜಿನಾಥ ರಾಜ–ಗೀರೆ, ಸಿದ್ದಯ್ಯ ಕಾವಡಿಮಠ ಅತಿಥಿಗಳು ಭಾಗವಹಿಸುವರು

## ವಿದ್ಯಾರ್ಥಿಗಳಿಗೆ ಶಿಕ್ಷಣದೊಂದಿಗೆ ಉತ್ತಮ ಸಂಸ್ಕಾರ ನೀಡಲು ಕರೆ

ಔರಾದ:ಮಾ.29: ಬಾಲ್ಯದಲ್ಲಿ ವಿದ್ಯಾರ್ಥಿಗಳಿಗೆ ಶಿಕ್ಷಣದೊಂದಿಗೆ ಉತ್ತಮ ಸಂಸ್ಕಾರವನ್ನು ನೀಡಲು ಶಿಕ್ಷಣ ಸಂಸ್ಥೆಗಳು ಹಾಗೂ ಪಾಲಕರು ಮುಂದಾಗಬೇಕೆಂದು ಸಿಪಿಐ ರಘುವೀರಸಿಂಗ್ ಠಾಕೂರ್ ಸಲಹೆ ನೀಡಿದರು.



ಪಟ್ಟಣದ ಗುರುಜಿ ಪಬ್ಲಿಕ್ ಶಾಲೆಯ 12ನೇ ವಾರ್ಷಿಕೋತ್ಸವ ಹಾಗೂ ಬೆಸಿಗೆ ಶಿಬಿರವನ್ನು ಜ್ಯೋತಿ ಬೆಳಗುವ ಮೂಲಕ ಉದ್ಘಾಟಿಸಿ ಮಾತಾಡಿದರು. ಗಡಿ ತಾಲೂಕಿನಲ್ಲಿ ಗುರುಜಿ ಶಾಲೆಯ ಆಡಳಿತ ಮಂಡಳಿ ಸದಸ್ಯರು ಕಡಿಮೆ ದರದಲ್ಲಿ ಮಕ್ಕಳಿಗೆ ಗುಣಮಟ್ಟದ ಶಿಕ್ಷಣವನ್ನು ನೀಡುತ್ತಿರುವುದು ಸಂತಸದ ವಿಷಯವಾಗಿದೆ. ಶಿಕ್ಷಣದೊಂದಿಗೆ ವಿದ್ಯಾರ್ಥಿಗಳಿಗೆ ಉತ್ತಮ ಸಂಸ್ಕಾರಗಳನ್ನು ಇಂದಿನ ದಿನಗಳಲ್ಲಿ ಅತ್ಯವಶ್ಯಕವಾಗಿದೆ ಎಂದರು. ಪಪಂ ಅಧ್ಯಕ್ಷೆ ಸರುಬಾಯಿ ಘೂಳೆ ಮಾತನಾಡಿ, ಔರಾದ ತಾಲೂಕು ಕೇಂದ್ರಸ್ಥಾನದಲ್ಲಿ ಉತ್ತಮವಾದ ಶಿಕ್ಷಣದೊಂದಿಗೆ ಮಕ್ಕಳಿಗೆ ಒಳ್ಳೆಯ ಸಂಸ್ಕಾರ ನೀಡುವ ಮೂಲಕ ಮಕ್ಕಳಲ್ಲಿ ಮಾನವೀಯ ಮೌಲ್ಯಗಳನ್ನು ಗುರುಜಿ ಶಾಲೆಯ ಶಿಕ್ಷಕರು ಬೆಳೆಸುತ್ತಿರುವುದು ಹೆಮ್ಮೆಯ ವಿಷಯವಾಗಿದೆ. ಬೆಸಿಗೆ ಶಿಬಿರದ ಉದ್ಘಾಟನೆ ಮಾಡಿರುವುದು ನಿಜಕ್ಕೂ ಹೆಮ್ಮೆಯ ವಿಷಯವಾಗಿದೆ ಔರಾದ ತಾಲೂಕಿನಲ್ಲಿ ಬೆಸಿಗೆಯಲ್ಲಿ ಮಕ್ಕಳಿಗೆ ಉತ್ತಮವಾದ ಶಿಬಿರಗಳನ್ನು ಇಲ್ಲದೆ ಇರುವುದರಿಂದ ಇಲ್ಲಿನ ಮಕ್ಕಳು ಹೆಚ್ಚಿನ ಜ್ಞಾನವನ್ನು ಪಡೆದುಕೊಳ್ಳುವುದರಿಂದ ವಂಚಿತರಾಗುತ್ತಿದ್ದರೂ ಆದರೆ ಶಾಲೆಯ ಆಡಳಿತ ಮಂಡಳಿ ಸದಸ್ಯರು ಸೇರಿಕೊಂಡು ಶಿಬಿರವನ್ನು ಆಯೋಜನೆ ಮಾಡುವ ಮೂಲಕ ಮಕ್ಕಳಲ್ಲಿ ಶಿಕ್ಷಣದ ಅಭಿರೂಚಿಯನ್ನು ಹೆಚ್ಚಿಸುವುದರ ಜೋತೆಗೆ ಗಡಿಯಲ್ಲಿ ಶಿಕ್ಷಣದ ಕ್ರಾಂತಿಯನ್ನು ಮೂಡಿಸಲು ಮುಂದಾಗಬೇಕೆಂದರು. ಶಿಕ್ಷಣಾಧಿಕಾರಿ ಬಿಜೆ ರಂಗೇಶ ಮಾತನಾಡಿ, ಶಾಲೆಯ ವಾರ್ಷಿಕೋತ್ಸವ ಅದ್ದೂರಿ ಹಾಗೂ ಅರ್ಥಪೂರ್ಣವಾಗಿ ಆಚರಣೆ ಮಾಡಲಾಗಿದೆ. ಪುಟಾಣಿ ಮಕ್ಕಳ ಸಾಂಸ್ಕೃತಿಕ ಕಾರ್ಯಕ್ರಮವನ್ನು ವಿಕ್ಷಣೆ ಮಾಡಿ ಪಾಲಕರು ಮುಖಂಡರು ಪ್ರೋತ್ಸಾಹಿಸಲು ಮುಂದಾಗಬೇಕೆಂದರು.



ಹುಣಸಗಿ ಸಿಪಿಐ ರವಿಕುಮಾರ ಅಧಿಕಾರ ಸ್ವೀಕಾರ ವಹಿಸಿಕೊಂಡಿದ್ದಾರೆ. ಈ ಹಿಂದೆ ಬೀದರ ಜಿಲ್ಲೆ, ಮನ್ನಾಎಖ್ಖೇಳಿ, ಹುಮನಾಬಾದ ಹಾಗೂ ಹಲವಾರು ಪೊಲೀಸ್ ಠಾಣೆಗಳಲ್ಲಿ ಪಿಎಸ್‌ಐಯಾಗಿ ಸೇವೆ ಸಲ್ಲಿಸಿದ್ದಾರೆ. ರೈಲ್ವೆ ಪೊಲೀಸ್ ಇಲಾಖೆಯಲ್ಲಿ ಸೇವೆಸಲ್ಲಿಸಿದ್ದಾರೆ. ಇತ್ತಿಚೇಗೆ ಬಡ್ತಿಹೊಂದಿ ಇವರನ್ನು ಹುಣಸಗಿ ವೃತ್ತಕ್ಕೆ ವರ್ಗಾಹಿಸಲಾಗಿದೆ. ಇವರನ್ನು ನಾರಾಯಣಪುರ ಪಿಎಸ್‌ಐ, ಕೊಡೇಕಲ್ ಪಿಎಸ್‌ಐ, ಹುಣಸಗಿ ಪಿಎಸ್‌ಐ ಹಾಗೂ ಹುಣಸಗಿ ಕ್ರೈಂ ಪಿಎಸ್‌ಐ ಸೇರಿ ಸ್ವಾಗತಿಸಿದರು. (ಮಲ್ಲಮ್ಮ ನುಡಿ ಚಿತ್ರ)

## ಜಿಲ್ಲಾ ಉಸ್ತುವಾರಿ ಸಚಿವ ಶ್ರೀ ಶರಣಬಸಪ್ಪ ದರ್ಶನಾಪೂರ ಅವರ ಜಿಲ್ಲಾ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಮಾರ್ಚ್ 29, ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ ಅವರು ಮಾರ್ಚ್ 31 ಹಾಗೂ ಏಪ್ರಿಲ್ 1 ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ ಪ್ರವಾಸವು ಕೆಳಗಿನಂತಿದೆ ಎಂದು ಅಪರ ಜಿಲ್ಲಾಧಿಕಾರಿ ಶ್ರೀ ಶರಣಬಸಪ್ಪ ಕೋಟೆಪ್ಪಗೋಳ ಅವರು ತಿಳಿಸಿದ್ದಾರೆ.

2025ರ ಮಾರ್ಚ್ 31ರ ಸೋಮವಾರ ರಂದು ಬೆಳಿಗ್ಗೆ 9 ಗಂಟೆ ಕಲಬುರಗಿದಿಂದ ನಿರ್ಗಮಿಸಿ ಬೆಳಿಗ್ಗೆ 10 ಗಂಟೆಗೆ ಶಹಾಪೂರ ಆಗಮಿಸಿ, ಶಹಾಪೂರ ನಗರದಲ್ಲಿ ಸಾರ್ವಜನಿಕ ಕುಂದುಕೊರತೆಗಳ ವಿಚಾರಣೆ ಆಲಿಸುವರು ಹಾಗೂ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು. ನಂತರ ಸಂಜೆ 5 ಗಂಟೆಗೆ ಕಲಬುರಗಿ ಪ್ರಯಾಣ ಬೆಳೆಸುವರು. 2025ರ ಏಪ್ರಿಲ್ 1 ಮಂಗಳವಾರ ರಂದು ಬೆಳಿಗ್ಗೆ 9 ಗಂಟೆ ಕಲಬುರಗಿ ದಿಂದ ನಿರ್ಗಮಿಸಿ ಬೆಳಿಗ್ಗೆ 10 ಗಂಟೆ ಶಹಾಪೂರ ಆಗಮಿಸಿ, ಸಾರ್ವಜನಿಕ ಕುಂದುಕೊರತೆ ವಿಚಾರಣೆ ಹಾಗೂ ಸ್ಥಳೀಯ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು. ನಂತರ ಸಂಜೆ 5 ಗಂಟೆಗೆ ಕಲಬುರಗಿ ಪ್ರಯಾಣ ಬೆಳೆಸುವರು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 52,500 ರೂ.ಮೌಲ್ಯದ ತೋಟದ ಸಾಮಗ್ರಿ ಕಳವು

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.29–ಹಾಗರಗಾ ಸೀಮಾಂತರದಲ್ಲಿರುವ ತೋಟದಲ್ಲಿ ತೋಟದನೀರಾವರಿಗೆ ಉಪಯೋಗಿಸುವ 52, 500 ರೂ.ಮೌಲ್ಯದ ತೆ–ೂಟದ ಸಾಮಗ್ರಿಗಳನ್ನು ಕಳವು ಮಾಡಲಾಗಿದೆ. ಬಸವರಾಜ ಬಪ್ಪನ ಅವರ ತೋಟದಲ್ಲಿ ತೋಟದ ನೀರಾವರಿಗೆ ಉಪಯೋಗಿಸುವ 5 ಸಾವಿರ ರೂ.ಮೌಲ್ಯದ 60 ಫೀಟ್ ಬೋರವೆಲ್ ಕೇಬಲ್, 8 ಸಾವಿರ ರೂ.ಮೌಲ್ಯದ ಟ್ರ್ಯಾಕ್ಟರ್ ಬ್ಯಾಟರಿ, 8 ಸಾವಿರ ರೂ.ಮೌಲ್ಯದ ಸೋಲಾರ್ ಬ್ಯಾಟರಿ, 3 ಸಾವಿರ ರೂ. ಮೌಲ್ಯದ ಸ್ಪಾನರ್ ಸೆಟ್, 18 ಸಾವಿರ ರೂ.ಮೌಲ್ಯದ ಸಲಾಕೆ, ಟಿಕಾವು, ಇತರೆ ಕೃಷಿಗೆ ಉಪಯೋಗಿಸುವ ಸಾಮಗ್ರಿ ಮತ್ತು 15 ಸ್ಪಿಂಕಲರ್ ಟ್ಯಾಪ್, 4 ಸಾವಿರ ರೂ.ಮೌಲ್ಯದ 600 ಫೀಟ್ ಸರ್ವಿಸ್ ವಾಯರ್ ಬಂಡಲ್, 6,500 ರೂ.ಮೌಲ್ಯದ ಕ್ರಿಮಿನಾಶಕ ಔಷಧ ಹೊಡೆಯಲು ಉಪಯೋಗಿಸುವ ಯಂತ್ರದ ಬ್ಯಾಟರಿ ಸೇರಿ 52,500 ರೂ.ಮೌಲ್ಯದ ಸಾಮಗ್ರಿ ಕಳವು ಮಾಡಲಾಗಿದೆ. ಈ ಸಂಬಂಧ ವಿಶ್ವವಿದ್ಯಾಲಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

## ಏಪ್ರೀಲ್ 1ರಿಂದ ಬೇಸಿಗೆ ತರಬೇತಿ ಶಿಬಿರ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.29 : ಇಲ್ಲಿನ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ರಾಯಚೂರು ಇವರ ಸಂಯುಕ್ತಾಶ್ರಯದಲ್ಲಿ ಏಪ್ರೀಲ್ 1 ರಿಂದ ಮಕ್ಕಳಿಗೆ ಬೇಸಿಗೆ ತರಬೇತಿ ಶಿಬಿರವನ್ನು ಹಮ್ಮಿಕೊಳ್ಳಲಾಗಿದ್ದು, ಆಸಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಯಶಸ್ವಿಗೊಳ್ಳಬೇಕೆಂದು ಕೋರಲಾಗಿದೆ.

ಶಾಲೆಗಳು 02 ತಿಂಗಳು ರಜೆ, ಮಕ್ಕಳಿಗೆ ಹೊಸ ಹವ್ಯಾಸ ಅಥವಾ ಕ್ರೀಡೆಯಲ್ಲಿ ಅವರು ಭಾಗವಹಿಸುವಂತೆ ಮಾಡಲು ಸೂಕ್ತ ಸಮಯ. 02 ತಿಂಗಳ ರಜೆಯಲ್ಲಿ ಮೊಬೈಲ್, ಮೋಜು–ಮಸ್ತಿ ಎನ್ನುವ ಬದಲು ಜೀವನ ಕೌಶಲ್ಯವಾದಂತಹ ಈಜು ಅಥವಾ ಮಕ್ಕಳಿಗೆ ದುಶ್ಚಟ ಅಥವಾ ಮೊಬೈಲ್‌ಗಳಿಂದ ಮಕ್ಕಳನ್ನು ಶಾರೀರಿಕ ಹಾಗೂ ಮಾನಸಿಕ ಆರೋಗ್ಯ ಹೆಚ್ಚಿಸಲು ಕ್ರೀಡೆಗಳಲ್ಲಿ ಅವರನ್ನು ತೊಡಗುವಂತೆ ಮಾಡುವುದು ಏಕೈಕ ಉಪಾಯವಾಗಿದೆ. ಈ ನಿಟ್ಟಿನಲ್ಲಿ ಕ್ರೀಡಾ ಇಲಾಖೆಯಿಂದ ವಿವಿಧ ರೀತಿಯ ಕ್ರೀಡೆಗಳ ತರಬೇತಿಯನ್ನು ಹಮ್ಮಿಕೊಳ್ಳಲಾಗಿದ್ದು, ಇದರ ಸದ್ಬಳಕೆಗೆ ಪಾಲಕರಲ್ಲಿ ವಿನಂತಿಸಲಾಗಿದೆ.

ಮಹಾತ್ಮಗಾಂಧಿ ಒಳಾಂಗಣ ಕ್ರೀಡಾಂಗಣದಲ್ಲಿ ಶೆಟಲ್ ಬ್ಯಾಡ್ಮಿಂಟನ್, ಟೇಬಲ್ ಟೆನ್ನಿಸ್, ಯೋಗ ಹಾಗು ನೃತ್ಯ ಮತ್ತು ಜಿಮ್ನಾಸ್ಟಿಕ್ ಕ್ರೀಡೆಗಳು ನಡೆಯಲಿವೆ. ಹೆಚ್ಚಿನ ಮಾಹಿತಿಗಾಗಿ ಮತ್ತು ತರಬೇತುದಾರರನ್ನು ಸಂಪರ್ಕಿಸಲು ಶೆಟಲ್ ಬ್ಯಾಡ್ಮಿಂಟನ್ ಕ್ರೀಡೆಯ ಬಗ್ಗೆ ರಾಮಲಿಂಗಪ್ಪ ಮೊ:8971737656, ಟೇಬಲ್ ಟೆನ್ನಿಸ್ ಕ್ರೀಡೆಗೆ ಎಮ್.ಎನ್ ಈರಣ್ಣ ಮೊ:9448837766, ಯೋಗದ ಬಗ್ಗೆ ವಡ್ಡೆಪಲ್ಲಿ ತಿಮ್ಮಪ್ಪ ಮೊ: 9900778049 ಮತ್ತು ಜಿಮ್ನಾಸ್ಟಿಕ್ ಹಾಗೂ ನೃತ್ಯ (ಡಾನ್ಸ್)ಗೆ ಆನಂದ ಅವರ ಮೊ:8618226838ಗೆ ಸಂಪರ್ಕಿಸಬಹುದಾಗಿದೆ.

ಮಹಾತ್ಮಗಾಂಧಿ ಒಳಾಂಗಣ ಕ್ರೀಡಾಂಗಣದ ಲಾನ್‌ಟೆನ್ನಿಸ್ ಅಂಕಣದಲ್ಲಿ ರೋಪ್ ಸ್ಕಿಪ್ಪಿಂಗ್ ಹಾಗೂ ಸ್ಕೇಟಿಂಗ್ ಮತ್ತು ಮಹಾತ್ಮಗಾಂಧಿ ಕ್ರೀಡಾಂಗಣದ ಈಜುಕೊಳದಲ್ಲಿ ಈಜು ಕ್ರೀಡೆಗಳು ನಡೆಯಲಿದ್ದು, ರೋಪ್ ಸ್ಕಿಪ್ಪಿಂಗ್ ಕ್ರೀಡೆಗೆ ಇಬ್ರಾಹಿಮ್ ಮೊ:9739875798, ಸ್ಕೇಟಿಂಗ್ ಹಾಗೂ ಈಜು ಕ್ರೀಡೆಗೆ ಅಕ್ಬರ್ ಭಾಷಾ ಮೊ: 9886933237, ಮಹಾತ್ಮಗಾಂಧಿ ಕ್ರೀಡಾಂಗಣದಲ್ಲಿ ಯೋಗ ನಡೆಯಲಿದ್ದು, ಯೋಗ ತರಬೇತಿಗೆ ಮಲ್ಲಿಕಾರ್ಜುನ ಸ್ವಾಮಿ ಮೊ:9342659737, ಕರಾಟೆ ಕ್ರೀಡೆಗೆ ಅನಿರುಧ್ ಮೊ: 8971117995ಗೆ ಸಂಪರ್ಕ ಮಾಡಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ನಿರ್ದೇಶಕರ ದೂರವಾಣಿ ಸಂ–ಖ್ಯೆ: 9663224447ಗೆ ಕಚೇ–ರಿಯ ಸಮಯದಲ್ಲಿ ಸಂಪರ್ಕ ಮಾಡಬಹುದಾಗಿದೆ ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ದತ್ತು ಪ್ರಕ್ರಿಯೆ,ಅವಧಿ ಮೀರಿದ ಔಷಧಿ ಬಳಕೆ ಹಾಗೂ ಗುರುಮಠಕಲ್ ಶಿಶುಗಳ ಮರಣ : ಮಕ್ಕಳ ಹಕ್ಕುಗಳ ರಕ್ಷಣಾ ಶಶಿಧರ್ ಕೋಸಂಬೆ

ಮಲ್ಲಮ್ಮ ನುಡಿ ವಾರ್ತೆ



ಯಾದಗಿರಿ:ಮಾ: 29; ಅಕ್ರಮ ಮಕ್ಕಳ ದತ್ತು ಪ್ರಕ್ರಿಯೆ, ಅವಧಿ ಮೀರಿದ ವ್ಯಾಕ್ಸಿನ್ ವಿತರಣೆ ಹಾಗೂ ಗುರುಮಠಕಲ್ ಆಸ್ಪತ್ರೆಯಲ್ಲಿ ಶಿಶುಗಳು ಮರಣಕ್ಕೆ ಸಂಬಂಧಿಸಿದ ಈ ಮೂರು ಪ್ರಕರಣಗಳಲ್ಲಿ ಕ್ರಮ ಜರುಗಿಸುವಲ್ಲಿ ಆಡಳಿತ ವರ್ಗದಿಂದ ಆಗಿರುವ ಲೋಪ, ನಿಯಮ ಉಲ್ಲಂಘನೆ ಹಾಗೂ ವಿಳಂಬ ನೀತಿ ಅನುಸರಣೆ ಹಿನ್ನೆಲೆಯಲ್ಲಿ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗವು ಗಂಭೀರವಾಗಿ ಪರಿಗಣಿಸಿದ್ದು, ಆಯೋಗದಲ್ಲಿ ಸ್ವಯಂ ಪ್ರೇರಿತ ಪಕರಣ ದಾಖಲಿಸಲಾಗುವುದು ಎಂದು ಆಯೋಗದ ಸದಸ್ಯರಾದ ಶ್ರೀ ಶಶಿಧರ್ ಕೋಸಂಬೆ ಅವರು ಹೇಳಿದರು.

ನಗರದ ತಾಯಿ ಮಕ್ಕಳ ಆಸ್ಪತ್ರೆ (ಹಳೆಯ ಜಿಲ್ಲಾ ಆಸ್ಪತ್ರೆಯಲ್ಲಿಂದು ವಿವಿಧ ಇಲಾಖಾ ಅಧಿಕಾರಿಗಳೊಂದಿಗೆ ನಡೆಸಿದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮಕ್ಕಳ ದತ್ತು ಪ್ರಕ್ರಿಯೆಯಲ್ಲಿ ನಿಯಮಬಾಹಿರ, ಅಕ್ರಮ ದತ್ತು ಪ್ರಕ್ರಿಯೆ ಪ್ರಕರಣದಲ್ಲಿ ಕಾನೂನಾತ್ಮವಾಗಿ ಕ್ರಮ ಜರುಗಿಸುವಲ್ಲಿ ಅಧಿಕಾರಿಗಳ ನಿರ್ಲಕ್ಷ್ಯ ಕಂಡುಬಂದಿದೆ. ಅದರಂತೆ ಅವಧಿ ಮೀರಿದ ಔಷಧಿ ಹಾಗೂ ಲಸಿಕೆ ವಿತರಣೆ ವಿಷಯದಲ್ಲಿಯೂ ನಿರ್ಲಕ್ಷ್ಯ ಹಾಗೂ ವಿಳಂಬ ಧೋರಣೆ ಅನುಸರಿಸಿರುವದು ಮತ್ತು ನಿಯಮಬಾಹಿರವಾಗಿ ವರ್ತಿಸಿರುವುದು ಕಂಡು ಬಂದಿದೆ.

ಗುರುಮಠಕಲ್ ಆಸ್ಪತ್ರೆಯಲ್ಲಿ ಮೂರಕ್ಕು ಹೆಚ್ಚು ಶಿಶುಗಳಿಗೆ ಸಕಾಲಕ್ಕೆ ಚಿಕಿತ್ಸೆಗೆ ಒಳಪಡಿಸದೆ ಇರುವುದರಿಂದ ಸಾವನಪ್ಪಿರುವ ಘಟನೆ ಸಹ ನಡೆದಿದ್ದು, ಆಶಾ ಕಾರ್ಯಕರ್ತೆಯ ನಿರ್ಲಕ್ಷ ಹಾಗೂ ವೈದ್ಯಾಧಿಕಾರಿಗಳ ನಡುವೆ ಸಮನ್ವಯತೆ ಕೊರತೆ ಹಾಗೂ ಪ್ರಕರಣ ದಾಖಲಾಗಿದ್ದರೂ ಯಾರ ವಿರುದ್ಧವೂ ಕ್ರಮ ಆಗಿಲ್ಲ. ಇದರಲ್ಲೂ ವಿಳಂಬ ಧೋರಣೆ ಅನುಸರಿಸಿರುವಂತಹ ಲೋಪ ಕಂಡು ಬಂದಿದೆ. ಈ ಎಲ್ಲ ಅಂಶಗಳನ್ನು ಗಂಭೀರವಾಗಿ ಪರಿಗಣಿಸಿದ್ದು, ಸ್ವ–ಯಂ ಪ್ರೇರಿತವಾಗಿ ಈ ಮೂರು ವಿಷಯಗಳಲ್ಲಿ ಆಯೋಗವು ಪ್ರಕರಣ ದಾಖಲಿಸಿಕೊಂಡು, ತಪ್ಪಿತಸ್ಥರ ವಿರುದ್ಧ ತೀವ್ರ ವಿಚಾರಣೆ ನಡೆಸಿ ಸೂಕ್ತ ಕ್ರಮ ಕೈಗೊಳ್ಳಲಿದೆ ಎಂದು ಹೇಳಿದರು.

ಮಕ್ಕಳ ಜೀವಹಾನಿ ವಿಷಯದಲ್ಲಿ ನಿರ್ಲಕ್ಷತೆಯನ್ನು ಗಂಭೀರವಾಗಿ ಪರಿಗಣಿಸಲಾಗಿದೆ. ಔಷಧಿ ಅವಧಿ ಮೀರಿದ ವಿಷಯದಲ್ಲಿ ಕೆಪಿಮ್‌ಇ ಕಾಯ್ದೆ ಹಾಗೂ ಕಾಸ್ಮೆಟಿಕ್ಸ್ ಕಾನೂನು ಪ್ರಕಾರ ಸೂಕ್ತ ಕ್ರಮ ಆಗಬೇಕು. ನಿರ್ಲಕ್ಷ, ತೋರಿದ ಏಜೆನ್ಸಿ ಮತ್ತು ತಪ್ಪಿತಸ್ಥ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಆಗಬೇಕು. ಡಿವೈಎಸ್ಪಿ, ಹೆಚ್‌ಓ ಅವರು ಮಾನ್ಯ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳೊಂದಿಗೆ ಚರ್ಚಿಸಿ ಅವಶ್ಯಕ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಅದರಂತೆ ಗುರುಮಠಕಲ್ ಸಾವು ಪ್ರಕರಣದಲ್ಲಿ ತ್ವರಿತವಾಗಿ ವರದಿ ಪಡೆದುಕೊಂಡು ಸೂಕ್ತ ಕ್ರಮ ಕೈಗೊಂಡು ವರದಿ ಸಲ್ಲಿಸಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲೆಯಲ್ಲಿ ಈವರೆಗೆ 84 ಅಪ್ರಾಪ್ತ ಬಾಲಕಿಯರು ಗರ್ಭಿಣಿಯಾದ ಬಗ್ಗೆ ವರದಿಯಾಗಿದೆ. ಆಯಾ ಪೊಲೀಸ್ ಠಾಣೆಗಳಿಗೆ ನೀಡಿದ ದೂರುಗಳ ಮೇಲಿನ ಕ್ರಮಗಳ ಬಗ್ಗೆ ತಕ್ಷಣ ವರದಿ ಸಲ್ಲಿಸಬೇಕು.

ಆರೋಗ್ಯ ಇಲಾಖೆ, ಮಕ್ಕಳ ರಕ್ಷಣಾ ಘಟಕ, ಆಸ್ಪತ್ರೆಗಳ ವೈದ್ಯಾಧಿಕಾರಿಗಳು, ಸರ್ಜನ್ ,ಪೊಲೀಸ್ ಇಲಾಖೆ ಅಧಿಕಾರಿಗಳು, ಔಷಧೀಂಯು ನಿಯಂತ್ರಣಾಧಿಕಾರಿಗಳು ಸೇರಿದಂತೆ ಸಂಬಂಧಪಟ್ಟ ಅಧಿಕಾರಿಗಳು ಜವಾಬ್ದಾರಿಂಯುತವಾಗಿ ಕಾರ್ಯನಿರ್ವಹಿಸುವಂತೆ ಅವರು ಸೂಚನೆ ನೀಡಿದರು.

ಸಭೆಯಲ್ಲಿ ಡಿವೈಎಸ್ಪಿ ಅರುಣಕುಮಾರ್, ಜಿಲ್ಲಾ ಆಸ್ಪತ್ರೆ ಸರ್ಜನ್ ರಿಜ್ವಾನಾ ಆಫ್ರೀನ್, ಹೆಚ್‌ಓ ಮಹೇಶ್ ಬಿರಾದಾರ್, ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ಹನುಮಂತರಾಯ ಕರಡಿ ಹಾಗೂ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು. ಇದಕ್ಕೂ ಮುನ್ನ ಆಯೋಗದ ಸದಸ್ಯರು ವಿಶೇಷ ದತ್ತು ಕೇಂದ್ರ, ಆನಂದ ನರ್ಸಿಂಗ್ ಹೋಮ್, ಹಳೆಯ ಜಿಲ್ಲಾ ಆಸ್ಪತ್ರೆಯಲ್ಲಿ ವಿವಿಧ ವ್ಯವಸ್ಥೆಗಳ ಬಗ್ಗೆ ಪರಿಶೀಲನೆ ನಡೆಸಿದರು.

## ಸೈಯದ್ ಚಿಂಚೋಳಿ ಕೆರೆಯಲ್ಲಿ ಹೂಳೆತ್ತುವ ಸ್ಥಳದಲ್ಲಿ ನರೇಗಾ ಕೂಲಿಕಾರರಿಗೆ ಆರೋಗ್ಯ ತಪಾಸಣಾ ಶಿಬಿರ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.29–ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ ಕಲಬುರಗಿ ತಾಲೂಕಿನ ತಾಜ್‌ಸುಲ್ತಾನ್‌ಪುರ ಗ್ರಾಮ ಪಂಚಾಯತಿಯ ವ್ಯಾಪ್ತಿಯಲ್ಲಿ ಬರುವ ಸೈಯದ್ ಚಿಂಚೋಳಿ ಕೆರೆಯಲ್ಲಿ ಹೂಳೆತ್ತುವ ಸ್ಥಳದಲ್ಲಿ ಗುರುವಾರ ನರೇಗಾ ಕೂಲಿಕಾರರಿಗೆ ಆರೋಗ್ಯ ತಪಾಸಣಾ ಶಿಬಿರ ಹಮ್ಮಿಕೊಳ್ಳಲಾಯಿತು. ತಾಜ್‌ಸುಲ್ತಾನಪುರ ಪಂಚಾಯತ್ ಅಭಿವೃದ್ಧಿ ಅಧಿಕಾರಿ ಅನುಪಮಾ ಇವರ ನೇತೃತ್ವದಲ್ಲಿ ಈ ಶಿಬಿರ ಹಮ್ಮಿಕೊಂಡಿದ್ದು, ಗ್ರಾಮ ಪಂಚಾಯಿತಿಯಲ್ಲಿ ಪ್ರಸ್ತುತ ಚಾಲ್ತಿಯಲ್ಲಿನ ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಕಾಮಗಾರಿ ಸ್ಥಳದಲ್ಲಿನ 350 ಮಹಿಳೆಯರು ಹಾಗೂ 161 ಜನ ಪುರುಷರು ಸೇರಿದಂತೆ ಒಟ್ಟು 511 ಜನ ಕೂಲಿ ಕಾರ್ಮಿಕರಿಗೆ ಸ್ಥಳದಲ್ಲಿಯೇ ಕೂಲಿ ಕಾರ್ಮಿಕರರಿಗೆ ಅವರ ಆರೋಗ್ಯವನ್ನು ಕಾಪಾಡುವ ನಿಟ್ಟಿನಲ್ಲಿ, ಕಾಮಗಾರಿ ಸ್ಥಳಗಳಲ್ಲಿ ಗ್ರಾಮ ಆರೋಗ್ಯ ಶಿಬಿರಗಳನ್ನು ಅಯೋಜಿಸಿ, ಅವರಿಗೆ ರಕ್ತದ ಒತ್ತಡ, ಶುಗರ್, ರಕ್ತ ಪರೀಕ್ಷೆ, ಕಣ್ಣಿನ ಪರೀಕ್ಷೆ ಹಲ್ಲು ಪರೀಕ್ಷೆ ಇನ್ನು ಮುಂತಾದ ಪರೀಕ್ಷೆಗಳನ್ನು ಸ್ಥಳದಲ್ಲಿ ಮಾಡಲಾಯಿತು. ರಾಜೀವಗಾಂಧಿ ಪಂಚಾಯತ್‌ರಾಜ್ ಫೆಲೋ ರೀಟಾ, ಕಲಬುರಗಿ ತಾಲೂಕು ಪಂಚಾಯತ ಐಈಸಿ ಸಂಯೋಜಕ ಮೋಸಿನ ಖಾನ್, ಪಂಚಾಯತ ಅಭಿವೃದ್ಧಿ ಅಧಿಕಾರಿಗಳು ಹಾಗೂ ಗ್ರಾಮ ಪಂಚಾಯತಿ ಸಿಬ್ಬಂದಿಗಳಾದ ಪ್ರೇಮ್ ಕುಮಾರ್ ಹಾಗೂ ವಿಜಯಲಕ್ಷ್ಮಿ ಸೇರಿದಂತೆ ಗ್ರಾಮಸ್ಥರು ಉಪಸ್ಥಿತರಿದ್ದರು.


ಜಾಹೀರಾತಿಗಾಗಿ ಇಂದೆ
ಸಂಪರ್ಕಿಸಿ:9449732000


## ನಮ್ಮ ಸಂಸ್ಕೃತಿಯ ಹೊಸ ವರ್ಷ ಯುಗಾದಿ ಹಬ್ಬ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ:ಮಾ.29:ನಗರದ ಹೊರವಲಯದ ಭೀಮಾನದಿ ತಟದಲ್ಲಿ ಶ್ರೀ ಕಂಗಳೇಶ್ವರ ಹಾಗೂ ನದಿ ತಟ ಸ್ವಚ್ಛತೆ

ನಮ್ಮ ಸಂಸ್ಕೃತಿಯ ಹೊಸ ವರ್ಷ ಯುಗಾದಿ ಹಬ್ಬವು ನಮ್ಮ ಸಂಸ್ಕೃತಿಯ ಹೊಸ ವರ್ಷವಾಗಿರುವುದರಿಂದ ಪ್ರತಿಯೊಬ್ಬರೂ ಹಬ್ಬ ಆಚರಣೆ ಮಾಡಿ, ಸಂಸ್ಕೃತಿ, ಸಂಸ್ಕಾರವನ್ನು ಅಳವಡಿಸಿಕೊಳ್ಳುವಲ್ಲಿ ಯುಗಾದಿ ಹಬ್ಬ ಸಹಕಾರಿಯಾಗಲಿದೆ ಎಂದು ನಗರಸಭೆ ಅಧ್ಯಕ್ಷರು ಕು. ಲಲಿತಾ ಮೌಲಾಲಿ ಅನಪೂರ ಹೇಳಿದರು.

ಯುಗಾದಿ ಹಬ್ಬದ ನಿಮಿತ್ತ ನಗರದ ಹೊರವಲಯದ ಭೀಮಾನದಿ ತಟದಲ್ಲಿ ಶ್ರೀ ಕಂಗಳೇಶ್ವರ ದರ್ಶನ ಹಾಗೂ ನಗರದ ದೇವರ ಪಲ್ಲಕ್ಕಿಗಳು ಭೀಮಾನದಿಗೆ ಗಂಗಾಸ್ನಾನಕ್ಕಾಗಿ ಆಗಮಿಸುವುದರಿಂದ ನಗರಸಭೆವತಿಯಿಂದ ಸ್ವಚ್ಛತೆ ಕೈಗೊಂಡು ಅವರು ಮಾತನಾಡಿದರು. ಪ್ರತಿವರ್ಷದಂತೆ ಯುಗಾದಿ ಹಬ್ಬದ ಅಂಗವಾಗಿ ಭೀಮ ನದಿಯಲ್ಲಿ ಗಂಗೆ ಸ್ನಾನಕ್ಕೋಸ್ಕರ ವಿವಿಧ ಗ್ರಾಮಗಳಿಂದ ಆಗಮಿಸುವ ಹಿನ್ನೆಲೆಯಲ್ಲಿ ಸಾಕಷ್ಟು ಜನರು ಆಗಮಿಸುತ್ತಾರೆ, ಅಲ್ಲಿ ನದಿಯ ದಡದಲ್ಲಿ ಬಟ್ಟೆ, ತ್ಯಾಜ್ಯ ಸೇರಿ–ಕೊಂಡಿದೆ ಎನ್ನುವುದನ್ನು ಗಮನಿಸಿ, ಆ ತ್ಯಾಜವನ್ನು ಸ್ವಚ್ಚಗೊಳಿಸಿ ಭಕ್ತರಿಗೆ ಅನುಕೂಲ ಮಾಡಿಕೊಡಲಾಗಿದೆ ಎಂದರು.

ಈ ಸಂದರ್ಭದಲ್ಲಿ ನಗರಸಭೆ ಸಿಬ್ಬಂದಿಗಳು ಇದ್ದರು.

## ತಾಯಿ ಮತ್ತು ಮಗುವಿನ ಆರೋಗ್ಯ ರಕ್ಷಣೆಗೆ ಕಿಲ್ಕಾರಿ ಸೇವೆ ಆರಂಭ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.29–ತಾಯಿ ಮತ್ತು ಶಿಶು ಮರಣದ ದರ ಕಡಿಮೆ ಮಾಡಲು ಹಾಗೂ ಗರ್ಭಿಣಿ ತಾಯಂದಿರಿಗೆ ಗುಣಮಟ್ಟದ ಆರೈಕೆ ಮಾಹಿತಿ ಒದಗಿಸಲು ಕೇಂದ್ರ ಸರ್ಕಾರವು ಕಿಲ್ಕಾರಿ ಸೇವೆ ಆರಂಭಿಸಿದ್ದು, ಜಿಲ್ಲೆಯ ಸಾರ್ವಜನಿಕರು ಇದರ ಸದುಪಯೋಗ ಪಡೆಯಬೇಕೆಂದು ಎಂದು ಕಲಬುರಗಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಶರಣಬಸಪ್ಪ ಕ್ಯಾತನಾಳ ಅವರು ತಿಳಿಸಿದ್ದಾರೆ.

ತಾಯಿ ಮತ್ತು ಶಿಶು ಮರಣದ ದರ ಕಡಿಮೆ ಮಾಡುವುದು ಹಾಗೂ ಗರ್ಭಿಣಿ ತಾಯಂದಿರಿಗೆ ಗುಣಮಟ್ಟದ ಆರೋಗ್ಯ ಸೇವೆ ಹಾಗೂ ಒಂದು ವರ್ಷದೊಳಗಿನ ಮಕ್ಕಳಿಗೆ ಲಸಿಕಾ–ಕರಣದ ಕುರಿತು ಮಾಹಿತಿಯನ್ನು ದೂರವಾಣಿ ಮೂಲಕ ನೇರವಾಗಿ ಕುಟುಂಬಗಳಿಗೆ ತಲುಪಿಸುವ ಕೇಂದ್ರ ಸರ್ಕಾರದ ಮಹತ್ವದ ಯೋಜನೆಯೇ ಕಿಲ್ಕಾರಿ ಸೇವೆ ಆಗಿದೆ.

ಕಿಲ್ಕಾರಿಯು ಭಾರತ ಸರ್ಕಾರವು ಗರ್ಭಿಣಿ, ಬಾಣಂತಿಯರಿಗೆ ತಂದಿರುವ ಉಚಿತ ಆರೋಗ್ಯ ಮಾಹಿತಿ ನೀಡುವ ಮೊಬೈಲ್ ಸೇವೆಯಾಗಿದ್ದು, ಈ ಉಚಿತ ಸೇವೆಯು ಗರ್ಭಧಾರಣೆಯ 4 ನೇ ತಿಂಗಳಿನಿಂದ, ಮಗುವಿನ ಮೊದಲ ಜನ್ಮದಿನದವರೆಗಿನ ಅವಧಿಯಲ್ಲಿ ತಾಯಿಯ ಆರೋಗ್ಯದ ಬಗ್ಗೆ ಹಾಗೂ ಮಕ್ಕಳಿಗೆ ನೀಡುವ ಲಸಿಕೆಗಳ ಬಗ್ಗೆ ಮಾಹಿತಿಯನ್ನು ಮುಂಚಿತವಾಗಿ ಕರೆಗಳ ಮೂಲಕ ತಿಳಿಸಲಾಗುತ್ತದೆ.

ಕಿಲ್ಕಾರಿ ನೋಂದಣಿ ಹೇಗೆ ಮಾಡಬೇಕು: ಗರ್ಭಧಾರಣೆಯ ಅಥವಾ ಮಗುವಿನ ಜನನದ ವಿವರಗಳನ್ನು ಆಶಾ ಕಾರ್ಯಕರ್ತೆ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ, ಸಮುದಾಯ ಆರೋಗ್ಯ ಅಧಿಕಾರಿ ಅಥವಾ ಹತ್ತಿರದ ಸರ್ಕಾರಿ ಆರೋಗ್ಯ ಕೇಂದ್ರಗಳಲ್ಲಿ ಮೊಬೈಲ್ ಸಂಖ್ಯೆ ನೀಡಿ ನೋಂದಾಯಿಸಿಕೊಳ್ಳಬೇಕು. ನಂತರ ಈ ಮಾಹಿತಿಯನ್ನು ಆರ್.ಸಿ.ಹೆಚ್ (ಸಂತಾನೋತ್ಪತ್ತಿ ಮತ್ತು ಮಕ್ಕಳ ಆರೋಗ್ಯ) ಪೋರ್ಟಲ್‌ನಲ್ಲಿ ನಮೂದಿಸಲಾಗುತ್ತದೆ.

ಗರ್ಭಿಣಿಯರು ಪಾಲಿಸಬೇಕಾದ ಅಂಶಗಳು ಇಂತಿವೆ: ಆರೋಗ್ಯ ಇಲಾಖೆಗೆ ತಾವು ಚಾಲ್ತಿಯಲ್ಲಿರುವ ಸೂಕ್ತ ಮೊಬೈಲ್ ಸಂಖ್ಯೆಯನ್ನು ನೀಡಬೇಕು. ತಮ್ಮ ಮೊಬೈಲ್‌ನಲ್ಲಿ ಕಿಲ್ಕಾರಿ ಸಂಖ್ಯೆಯನ್ನು (0124–4451660) ಸೇವ್ ಮಾಡಬೇಕು. ಈ ಸಂಖ್ಯೆಯಿಂದ ಕರೆಗಳು ಬಂದಾಗ ಸ್ವೀಕರಿಸಬೇಕು.

ಅದೇ ರೀತಿ ಗರ್ಭಿಣಿಯರಿಗೆ ಹಾಗೂ ಮಗುವಿಗೆ 1 ವರ್ಷವಾಗುವರೆಗೆ ಪ್ರತಿವಾರಕ್ಕೊಮ್ಮೆ ಕಿಲ್ಕಾರಿ ಸಂಖ್ಯೆಯಿಂದ ಪ್ರಿ–ರಿಕಾರ್ಡೆಡ್ ಕರೆಗಳು ಬರುವುದು ಮುಂದುವರೆಯಲಿದ್ದು, ಒಂದು ವೇಳೆ ಕರೆ ಬಾರದಿದ್ದಲ್ಲಿ ಅಥವಾ ಮಾಹಿತಿಯನ್ನು ಮತ್ತೊಮ್ಮೆ ಕೇಳಲು ಬಯಸಿದ್ದಲ್ಲಿ ತಮ್ಮ ನೋಂದಾಯಿತ ಮೊಬೈಲ್ ಸಂಖ್ಯೆಯಿಂದ 14423 ಗೆ ಕರೆ ಮಾಡಬೇಕೆಂದು ಅವರು ತಿಳಿಸಿದ್ದಾರೆ.

## ಏಪ್ರಿಲ್ 4 ರಂದು ಲೋಕಾಯುಕ್ತ ಅಧಿಕಾರಿಗಳಿಂದ ಅಹವಾಲು ಸ್ವೀಕಾರ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಮಾ.29–ಕಲಬುರಗಿ ಕರ್ನಾಟಕ ಲೋಕಾಯುಕ್ತ ಅಧಿಕಾರಿಗಳು ಚಿತ್ತಾಪುರ ತಾಲೂಕಿಗೆ ಸಂಬಂಧಿಸಿದಂತೆ 2025ರ ಏಪ್ರಿಲ್ 4 ರಂದು ಬೆಳಿಗ್ಗೆ 11 ರಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಚಿತ್ತಾಪುರ ತಾಲೂಕು ಪಂಚಾಯತ್ ಸಭಾಂಗಣದಲ್ಲಿ ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಲಿದ್ದಾರೆ ಎಂದು ಕಲಬುರಗಿಯ ಕರ್ನಾಟಕ ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಬಿ.ಕೆ. ಉಮೇಶ ಅವರು ತಿಳಿಸಿದ್ದಾರೆ.

ಕಲಬುರಗಿ ಕರ್ನಾಟಕ ಲೋಕಾಯುಕ್ತ ಡಿ.ಎಸ್.ಪಿ. ಯವರಾದ ಶೀಲವಂತ ಹೊಸಮನಿ (ಮೊಬೈಲ್ ಸಂ–ಖ್ಯೆ 9364062570) ಹಾಗೂ ಕರ್ನಾಟಕ ಲೋಕಾಯುಕ್ತ ಪೊಲೀಸ್ ನಿರೀಕ್ಷಕರಾದ ರಾಜಶೇಖರ ವಿ. ಹಳಿಗೋದಿ (ಮೊಬೈಲ್ ಸಂ–ಖ್ಯೆ 9364062671) ಅವರು ಸಾರ್ವಜನಿಕರಿಂದ ಅಹವಾಲು ಸ್ವೀಕರಿಸಲಿದ್ದಾರೆ.

ಸರ್ಕಾರಿ ಕಚೇರಿಗಳಲ್ಲಿ ಸಾರ್ವಜನಿಕರ ಕೆಲಸಗಳನ್ನು ವಿಳಂಬ ಮಾಡುತ್ತಿದ್ದರೆ ಕಾರಣ ಇಲ್ಲದೆ ಅರ್ಜಿ ತಿರಸ್ಕರಿಸುತ್ತಿದ್ದರೆ ಅಥವಾ ಕಚೇರಿಗೆ ಅಲೆದಾಡಿಸುತ್ತಿದ್ದಲ್ಲಿ ಹಾಗೂ ಸರ್ಕಾರಿ ಕಚೇರಿಗಳಲ್ಲಿ ಕೆಲಸ ಮಾಡಿಕೊಡಲು ಯಾರಾದರೂ ಲಂಚ ಕೇಳಿದ್ದಲ್ಲಿ ಕಲಬುರಗಿ ಕರ್ನಾಟಕ ಲೋಕಾಯುಕ್ತರ ಗಮನಕ್ಕೆ ತರಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಪೊಲೀಸ್ ಅಧೀಕ್ಷಕರು, ಕರ್ನಾಟಕ ಲೋಕಾಯುಕ್ತ ಕಚೇರಿ, ಐವಾನ್ ಶಾಹಿ, ಕಂಪೌಂಡ್, ಕಲಬುರಗಿ–585102 ಕಚೇರಿಯನ್ನು ಹಾಗೂ ದೂರವಾಣಿ ಸಂಖ್ಯೆ 08472–295364ಗೆ ಸಂಪರ್ಕಿಸಲು ಕೋರಲಾಗಿದೆ.

## ವಿದ್ಯಾರ್ಥಿಗಳು ಸಮುದಾಯದ ಮಾದರಿ ಪ್ರಜೆಗಳಾಗಬೇಕು :ಡಾ. ರಾಜೇಂದ್ರ ಮುದ್ನಾಳ್

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ: ಶಾಲೆಯಲ್ಲಿ ಬಹಳಷ್ಟು ವಿಷಯಗಳನ್ನು ಪಠ್ಯ ದೊಂದಿಗೆ ಮೌಲ್ಯ ಗಳನ್ನು ಶಿಕ್ಷಕರು ಹೇಳುತ್ತಾರೆ . ಆ ಮೌಲ್ಯಗಳನ್ನು ವಿದ್ಯಾರ್ಥಿಗಳು ಜೀವನದಲ್ಲಿ ಅಳವಡಿಸಿಕೊಂಡು ಮಾದರಿ ಪ್ರಜೆಯಾಗಿ ಸಮಾಜಕ್ಕೆ ಸೇವೆ ಸಲ್ಲಿಸಬೇಕು ಎಂದು ಶಿಕ್ಷಕ ಡಾ.ರಾಜೇಂದ್ರಕುಮಾರ್ ಮುದ್ನಾಳ್ ಹೇಳಿದರು. ಅವರು ಗುರುಮಠಕಲ್ ತಾಲೂಕಿನ ಚಿಂತನಹಳ್ಳಿ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ಎಂಟನೇ ತರಗತಿಯ ಮಕ್ಕಳಿಗೆ ಏರ್ಪಡಿಸಿದ ಬೀಳ್ಕೊಡುಗೆ ಸಮಾರಂಭದಲ್ಲಿ ಮಾತನಾಡಿದ ಅವರು.ವಿದ್ಯಾರ್ಥಿ ಜೀವನದಲ್ಲಿ ಓದು ಬಹಳ ಮುಖ್ಯ. ಈ ಸಮಯದ ಓದು ಉನ್ನತ ಸ್ಥಾನವನ್ನು ಅಲಂಕರಿಸಲು ಸಹಾಯವಾಗುವುದು. ನಿರಂತರ ಓದಿನಿಂದ ಯಶಸ್ಸು ನಿಮ್ಮದಾಗುವುದೆಂದು ತಿಳಿಸಿದರು. ಮಕ್ಕಳನ್ನು ದಿನಾಲು ಶಾಲೆಗೆ ಕಳಿಸುವಂತೆ ಪೊಷಕರಿಗೆ ಕಿವಿ ಮಾತು ಹೇಳಿದರು. ಹಿರಿಯ ಶಿಕ್ಷಕರಾದ ಭೀಮಣ್ಣ ಅಲೆಮನೆ ಮಾತನಾಡಿ ನಾನು ಚಿಂತನಹಳ್ಳಿ ಶಾಲೆಯಲ್ಲಿ ಓದುವಾಗ ಮೂರು ಕೋಣೆಗಳು ಮಾತ್ರ ಇದ್ದವು. ಆಗ ಹೆಣ್ಣು ಮಕ್ಕಳ ಸಂಖ್ಯೆ ಕಡಿಮೆ ಇತ್ತು. ಈಗ ಹೆಚ್ಚಾಗಿದೆ, ಕೋಣೆಗಳ ಸಂ–ಖ್ಯೆಯು ಹೆಚ್ಚಳವಾಗಿವೆ ಎಂದು ಖುಷಿ ಪಟ್ಟರು. ಪ್ರತಿಯೊಂದು ಕ್ಷೇತ್ರದಲ್ಲಿ ಮಹಿಳೆ ಸಾಧನೆ ಮಾಡುತ್ತಿದ್ದಾಳೆ ನೀವು ಕೂಡ ಸಾಧನೆ ಮಾಡಿ ಚಿಂತನಳ್ಳಿ ಗ್ರಾಮಕ್ಕೆ ಹೆಸರನ್ನು ಹಿರಿಯರಿಗೆ ಗೌರವವನ್ನು ತಂದು ಶಿಕ್ಷಕರಿಗೆ ಗುರು ಕಾಣಿಕೆಯನ್ನು ಕೊಡಿ ಎಂದು ಆಶಿಸಿದರು. 40 ಮಕ್ಕಳಿಗೆ ಪರೀ–ಕ್ಷೆ ಬರೆಯುವ ಪ್ಯಾಡ್ ನ್ನು ಮಕ್ಕಳಿಗೆ ಬಹುಮಾನವಾಗಿ ಕೊಟ್ಟರು ಪ್ರತಿವರ್ಷ ಕೊಡುವುದಾಗಿಯು ಘೋಷಿಸಿದರು.

ಈ ಸಂದರ್ಭದಲ್ಲಿ ಊರಿನ ಮುಖಂಡರಾದ ಪಂಪನಗೌಡ, ಸಿದ್ದಯ್ಯ ಸ್ವಾಮಿ ಮಠಪತಿ, ಮಲ್ಲೇಶ,ನಾಗಪ್ಪ, ನಿವೃತ್ತ ಶಿಕ್ಷಕರಾದ ಚಂದ್ರಶೇಖರ್, ಶಾಲೆಯ ಶಿಕ್ಷಕರಾದ ನರ್ಮದ , ಪುಷ್ಪಾವತಿ, ಅಂಬಿಕಾ, ಬನ್ನಪ್ಪ,ಜಲ್ಲಪ್ಪ, ಶಿಕ್ಷಣ ಪ್ರೇಮಿ ಮಹಾದೇವಪ್ಪ, ಹಳೆಯ ವಿದ್ಯಾರ್ಥಿಗಳಾದ ಖತಲಪ್ಪ, ಮೌನೇಶ , ಶೇಖರ್, ಭಾಗ್ಯ ಕಾವೇರಿ ಪಾಲ್ಗೊಂಡಿದ್ದರು. ಪ್ರಭಾರಿ ಮುಖ್ಯ ಗುರುಗಳಾದ ಪ್ರಕಾಶ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು.

# ಕೊಪ್ಪಳ ಜಿಲ್ಲಾಮಟ್ಟದ ಸಾವಯವ ಮೇಳ ಹಾಗೂ ಚರ್ಚಾಗೋಷ್ಠಿ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆಯ ರೈತರು ಸಾವಯವ ಕೃಷಿ ಪದ್ಧತಿಯನ್ನು ಅಳವಡಿಸಿಕೊಳ್ಳಲು ಮುಂದೆ ಬರಬೇಕು, ಸಾವಯವ ಕೃಷಿಗೆ ಉತ್ತಮ ಮಾರುಕಟ್ಟೆ ವ್ಯವಸ್ಥೆಯನ್ನು ಕಲ್ಪಿಸಲು ಕೃಷಿ ಇಲಾಖೆಯಿಂದ ಅಗತ್ಯ ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ನಲಿನ್ ಅತುಲ್ ಹೇಳಿದರು.

ಅವರು ಶುಕ್ರವಾರ ಕೊಪ್ಪಳ ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್‌ನಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಮತ್ತು ಕೃಷಿ ಇಲಾಖೆಯ ಸಹಯೋಗದಲ್ಲಿ ಆಯೋಜಿಸಲಾದ ಜಿಲ್ಲಾ ಮಟ್ಟದ ಸಾವಯವ ಮೇಳ ಹಾಗೂ ಚರ್ಚಾಗೋಷ್ಠಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಕೃಷಿಯಲ್ಲಿ ಅತೀ ಹೆಚ್ಚು ರಾಸಾಯನಿಕಗಳ ಬಳಕೆಯಿಂದಾಗಿ ಭೂಮಿಯು ತನ್ನ ಫಲವತ್ತತೆಯನ್ನು ಕಳೆದುಕೊಳ್ಳುತ್ತದೆ. ರಾಸಾಯನಿಕವಾಗಿ ಬೆಳೆದ ಕೃಷಿ ಪದಾರ್ಥಗಳ ಸೇವನೆಯಿಂದಾಗಿ ಜನರ ಆರೋಗ್ಯಕ್ಕೂ ತುಂಬಾ ಹಾನಿಕಾರವಾಗಿದ್ದು, ಭೂಮಿಯ ಸಂರಕ್ಷಣೆ, ಜನರ ಆರೋಗ್ಯಕ್ಕಾಗಿ ಸಾವಯವ ಕೃಷಿಯು ಇಂದಿನ ದಿನಮಾನಗಳಲ್ಲಿ ಬಹಳ ಮಹತ್ವವಾಗಿದೆ. ಗಂಗಾವತಿ, ಕಾರಟಗಿ, ಕನಕಗಿರಿ, ಕೊಪ್ಪಳ ತಾಲ್ಲೂಕಿನ ಕೆಲ ಭಾಗ ಸೇರಿ ನಮ್ಮ ಜಿಲ್ಲೆಯಲ್ಲಿ ಸುಮಾರು 3 ಲಕ್ಷ ಎಕರೆಗೂ ಅಧಿಕ ಪ್ರದೇಶದಲ್ಲಿ ಭತ್ತ ಬೆಳೆಯಲಾಗುತ್ತದೆ. ಸಾವಯವ ಕೃಷಿಗೆ ತುಂಬಾ ಬೇಡಿಕೆಯಿದ್ದು, ಹಾಗಾಗಿ ರೈತರಿಗೆ ಅರಿವು ಮೂಡಿಸಲು ಕೃಷಿ ಇಲಾಖೆಯಿಂದ ಈ ಸಾವಯವ ಕೃಷಿ ಮೇಳವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಕೊಪ್ಪಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ ಅವರು ಮಾತನಾಡಿ, ಜಿಲ್ಲೆಯಲ್ಲಿ 2 ಲಕ್ಷ 80 ಸಾವಿರ ರೈತರು ಹಾಗೂ 4 ಲಕ್ಷ 30 ಸಾವಿರ ಹೆಕ್ಟರ್ ಕೃಷಿ ಭೂಮಿಯಿದ್ದು, ಇದರಲ್ಲಿ 4 ಸಾವಿರ ಹೆಕ್ಟರ್ ಜಮೀನಿನಲ್ಲಿ 3 ಸಾವಿರ ರೈತರು ಮಾತ್ರ ಸಾವಯವ ಕೃಷಿ ಪದ್ಧತಿಯನ್ನು ಅಳವಡಿಸಿಕೊಂಡಿದ್ದಾರೆ. ಸಾವಯವ ಕೃಷಿಯನ್ನು ಹೆಚ್ಚಿಸಲು ಈ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ. ಅಳವಂಡಿ ಭಾಗದಲ್ಲಿನ ಒಬ್ಬ ರೈತನು ತನ್ನ 5 ರಿಂದ 10 ಎಕರೆ ಜಮೀನಿನಲ್ಲಿ ಕಳೆದ ಮೂರು ವರ್ಷದಿಂದ ಸಾವಯವ ಕೃಷಿ ಪದ್ಧತಿಯನ್ನು ಕೈಗೊಂಡು ದಾಳಿಂಬೆ ಬೆಳೆದು ರೂ. 30 ರಿಂದ 40 ಲಕ್ಷದವರೆಗೆ ಲಾಭ ಪಡೆದಿದ್ದಾರೆ. ಭವಿಷ್ಯದಲ್ಲಿ ಸಾವಯವ ಕೃಷಿಗೆ ಅತ್ಯಂತ ಮಹತ್ವದ ಬೇಡಿಕೆಯಿದ್ದು, ರೈತರು ಸಾವಯವ ಕೃಷಿ ಮಾಡಲು ಮುಂದೆ ಬರಬೇಕು. ಸಾವಯವ ಕೃಷಿಯು ಕೇವಲ ಒಂದೇ ಬೆಳೆಗೆ ಮಾತ್ರ ಸಿಮಿತವಾಗದೇ, ವಿವಿಧ ಬೆಳೆಗಳನ್ನು ಬೆಳೆಯುವುದರ ಜೊತೆಗೆ ಹೈನುಗಾರಿಕೆ, ಪಶುಪಾಲನೆ, ಕೋಳಿ ಸಾಕಾಣಿಕೆಯಂತಹ ಚಟುವಟಿಕೆಗಳಿಗೂ ಸಹಾಯಕವಾಗುತ್ತದೆ ಎಂದರು.

ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷರಾದ ಶೇಖರಗೌಡ ಮಾಲಿ ಪಾಟೀಲ್ ಅವರು ಮಾತನಾಡಿ, ಇತ್ತೀಚಿನ ದಿನಗಳಲ್ಲಿ ಕೃಷಿಯಲ್ಲಿ ರಸಾಯನಿಕ ಗೊಬ್ಬರಗಳ ಬಳಕೆ ಹೆಚ್ಚಾಗಿದೆ. ಇದರಿಂದ ಕೃಷಿ ಭೂಮಿ ತನ್ನ ಫಲವತ್ತತೆ ಕಳೆದುಕೊಳ್ಳುತ್ತಿದೆ. ಸಾವಯವ ಕೃಷಿಗೆ ಸರ್ಕಾರವು ಹೆಚ್ಚಿನ ಉತ್ತೇಜನ ನೀಡುತ್ತಿದೆ. ಕೊಪ್ಪಳ ಜಿಲ್ಲೆಯಲ್ಲಿ ಸಾವಯವ ಕೃಷಿ ಪ್ರಮಾಣವು ಹೆಚ್ಚಾಗಬೇಕು. ಈ ಹಿನ್ನೆಲೆಯಲ್ಲಿ ಇಂತಹ ಕಾರ್ಯಕ್ರಮಗಳು ಜಿಲ್ಲೆಯಾದ್ಯಂತ ಹಮ್ಮಿಕೊಂಡು, ರೈತರಿಗೆ ಅರಿವು ಮೂಡಿಸಬೇಕು. ಇದಕ್ಕೆ ಜಿಲ್ಲಾ ಕೃಷಿಕ ಸಮಾಜವು ಕೃಷಿ ಇಲಾಖೆಯೊಂದಿಗೆ ಕೈಜೋಡಿಸಲಿದೆ ಎಂದು ಹೇಳಿದರು.

ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ಟಿ.ಎಸ್.ರುದ್ರೇಶಪ್ಪ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, ಸಾವಯವ ಕೃಷಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಒತ್ತು ನೀಡುತ್ತಿವೆ. ಕೃಷಿಯಲ್ಲಿ ಅತಿ ಹೆಚ್ಚು ರಾಸಾಯನಿಕ ಉಪಯೋಗದಿಂದ ನೀರು. ಭೂಮಿ ಮಣ್ಣಿನ ಫಲವತ್ತತೆ ಕಲುಷಿತವಾಗುವುದರ ಜೊತೆಗೆ ಪ್ರಾಣಿಗಳು ಹಾಗೂ ಮನುಷ್ಯನ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತದೆ. ಹಾಗಾಗಿ ರೈತರು ಸಾವಯವ ಕೃಷಿಗೆ ಹೆಚ್ಚಿನ ಒತ್ತು ನೀಡಬೇಕೆಂದು ಹೇಳಿದರು.

ಐಎಟಿ ರಾಜ್ಯ ಕಾರ್ಯದರ್ಶಿ ವಿ.ಕೆ.ಕಮತರ ಅವರು ಮಾತನಾಡಿ, ಸಾವಯವ ಕೃಷಿಯ ಕಡೆಗೆ ನಾವು ಗಮನ ಹರಿಸಬೇಕಿದೆ. ನಮ್ಮ ದೇಶದಲ್ಲಿ ಅತಿ ಹೆಚ್ಚು ಉತ್ಪಾದನೆ ಮಾಡುವ ಪಂಜಾಬ ರಾಜ್ಯದಲ್ಲಿ ಹೆಚ್ಚಿನ ಕ್ಯಾನ್ಸರ್ ರೋಗಿಗಳು ಸಿಗುತ್ತಾರೆ. ಅವರು ಹತ್ತು ಇಪ್ಪತ್ತು ವರ್ಷಗಳ ಹಿಂದೆ ಕೃಷಿಯಲ್ಲಿ ಹೆಚ್ಚು ರಸಾಯನಿಕ ಬಳಸಿದ ಪರೀಣಾಮ ಅದು ಆಗಿರುವುದು. ನಮ್ಮ ಆರೋಗ್ಯ ಚೆನ್ನಾಗಿ ಇರಬೇಕಾದರೆ ನಾವು ಸಾವಯವ ಕೃಷಿಯ ಕಡೆಗೆ ನಡೆಯಬೇಕಿದೆ ಎಂದು ಹೇಳಿದರು.

ಕೃಷಿ ವಿಶ್ವವಿದ್ಯಾಲಯ ರಾಯಚೂರಿನ ಸಾವಯವ ವಿಭಾಗದ ಮುಖ್ಯಸ್ಥರಾದ ಡಾ.ಬಸವಣ್ಣೆಪ್ಪ ಅವರು ವಿಶೇಷ ಉಪನ್ಯಾಸ ನೀಡಿ ಮಾತನಾಡಿ, ಕೃಷಿಯಲ್ಲಿ ಮಹಿಳೆಯರ ಪಾತ್ರವು ಬಹಳ ಪ್ರಮುಖವಾಗಿದೆ. ರೈತರಿಗೆ ಕೃಷಿಯಲ್ಲಿ ನಮಗಿಂತ ಅವರಿಗೆ ಹೆಚ್ಚಿನ ಅನುಭವ ಇರುತ್ತದೆ. ಅವರೇ ಪ್ರಥಮ ವಿಜ್ಞಾನಿಗಳು. ಬೆವರು ಸುರಿಸಿ ಕೆಲಸ ಮಾಡುವ ರೈತರಿಗೆ ಯಾವುದೇ ಕಾಯಿಲೆ ಬರುವದಿಲ್ಲ. ಸಾವಯವ ಕೃಷಿ ಮಾಡುವವರಿಗೆ ಸಾವಿಲ್ಲ. ಅವರು 80 ರಿಂದ 90 ವರ್ಷಗಳ ಕಾಲ ಬದುಕುತ್ತಾರೆ. ರಾಗಿ ತಿಂದವನು ನಿರೋಗಿ. ಸಿರಿಧಾನ್ಯಗಳ ಸೇವನೆಯಿಂದ ಹಲವಾರು ಕಾಯಿಲೆಗಳು ದೂರವಾಗುತ್ತವೆ ಎಂದು ಹೇಳಿದರು.

*ಸನ್ಮಾನ:* ರಾಜ್ಯ ಮಟ್ಟದಲ್ಲಿ ಉದಯೋನ್ಮುಖ ಕೃಷಿ ಪ್ರಶಸ್ತಿ ಪಡೆದ ಕೊಪ್ಪಳ ಜಿಲ್ಲೆಯ ರೈತರಾದ ಬಸಯ್ಯ ಹಿರೇಮಠ, ವೆಂಕಟೇಶರಾವ್, ಶ್ರೀನಿವಾಸರಾವ್ ದೇಸಾಯಿ, ಅಜಯಕುಮಾರ್ ಪಾಟೀಲ್ ಅವರಿಗೆ ಇದೇ ಸಂದರ್ಭದಲ್ಲಿ ಗಣ್ಯರಿಂದ ಸನ್ಮಾನಿಸಲಾಯಿತು.

ಈ ಕಾರ್ಯಕ್ರಮದಲ್ಲಿ ಕೃಷಿಕ ಸಮಾಜದ ರಾಜ್ಯ ಪ್ರತಿನಿಧಿ ಶಿವಣ್ಣ ಮೂಲಿಮನಿ, ರಾಯಚೂರಿನ ಕೃಷಿ ವಿಶ್ವವಿದ್ಯಾಲಯದ ಬೋರ್ಡ್ ಸದಸ್ಯರಾದ ತಿಮ್ಮಣ್ಣ ಚೌಡಿ, ಕೊಪ್ಪಳ ಕೃಷಿ ಇಲಾಖೆ ಉಪನಿರ್ದೇಶಕ ಎಲ್.ಸಿದ್ದೇಶ, ಕೃಷಿಕ ಸಮಾಜದ ಸದಸ್ಯರು ಹಾಗೂ ಪ್ರಗತಿಪರ ರೈತರಾದ ವೀರುಪಾಕ್ಷಪ್ಪ ನವೋದಯ, ಗಂಗಾವತಿ ಕೃಷಿ ವಿಜ್ಞಾನ ಕೇಂದ್ರದ ವಿಜ್ಞಾನಿ ಡಾ.ನಾರಪ್ಪ, ಸಹಾಯಕ ಕೃಷಿ ನಿರ್ದೇಶಕರಾದ ಶಶಿಕಲಾ ಹಾಗೂ ಶೇತ್ವಾ ಮತ್ತು ವಿವಿಧ ಇಲಾಖೆಗಳ ಮತ್ತು ಕೃಷಿ ಇಲಾಖೆಯ ಇತರೆ ಅಧಿಕಾರಿ, ಸಿಬ್ಬಂದಿಗಳು, ಜಿಲ್ಲೆಯ ರೈತ ಮುಖಂಡರು, ರೈತರು, ಕೃಷಿ ಸಖಿಯರು, ಪಶುಸಖಿಯರು ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಬ್ರೈಟ್ ಫ್ಯೂಚರ್ ಆಂಗ್ಲ ಮಾಧ್ಯಮ ಶಾಲೆಯ 16 ಮಕ್ಕಳಲ್ಲಿ 13 ಮಕ್ಕಳು ಮುರಾರ್ಜಿಗೆ ಆಯ್ಕೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ: ಕುಕನೂರು ತಾಲೂಕಿನ ಕುದ್ರಿಮೋತಿ ಗ್ರಾಮದಲ್ಲಿ ಬ್ರೈಟ್ ಫ್ಯೂಚರ್ ಆಂಗ್ಲ ಮಾಧ್ಯಮ ಶಾಲೆಯಲ್ಲಿ 7ನೇ ವರ್ಷದ ವಾರ್ಷಿಕೋತ್ಸವದ ನೆಡೆಯಿತು. ಗ್ರಾಮ ಪಂಚಾಯತ್ ಉಪಾಧ್ಯಕ್ಷರು ಲಕ್ಷ್ಮಿ ವಿಜಯ್ ದಾಸರ ಮತ್ತು ಸತ್ಯನಾರಾಯಣ ರಡ್ಡಿ ಅವರು ಕಾರ್ಯಕ್ರಮವನ್ನು ಉದ್ಘಾಟನೆ ಮಾಡಿದರು.

ನಂತರ ಮಾತನಾಡಿದ ಗ್ರಾಮ ಪಂಚಾಯತಿ ಉಪಾಧ್ಯಕ್ಷರಾದ ಶ್ರೀಮತಿ ಲಕ್ಷ್ಮಿ ವಿಜಯ ದಾಸರ ಗ್ರಾಮೀಣ ಭಾಗದಲ್ಲಿ ಇಂತಹ ಒಂದು ಶಿಕ್ಷಣ ಸಂಸ್ಥೆ ಹುಟ್ಟಿಕೊಂಡಿರುವುದು ನಮಗೆಲ್ಲ ಹೆಮ್ಮೆಯ ವಿಷಯ ಏಕೆಂದರೆ ಈ ಸಂಸ್ಥೆಯಲ್ಲಿ ಓದುತ್ತಿರುವ 16 ಮಕ್ಕಳ ಪೈಕಿ 13 ಮಕ್ಕಳು ಮೊರಾರ್ಜಿ ಶಾಲೆಗೆ ಆಯ್ಕೆಯಾಗಿದ್ದು, ಅವರು ರಾಜ್ಯದ ಮೂರನೇ ಸ್ಥಾನದಲ್ಲಿ ಆಯ್ಕೆಯಾಗಿದ್ದಾರೆ ಇದು ತುಂಬಾ ಖುಷಿಪಡುವ ವಿಚಾರ. ಇನ್ನು ಎರಡು ಮಕ್ಕಳು ನವೋದಯ ಶಾಲಿಗೆ ಆಯ್ಕೆಯಾಗಿದ್ದು ಇದು ಇಡೀ ಕೊಪ್ಪಳ ಜಿಲ್ಲೆಯಲ್ಲಿ ಇದುವರೆಗೂ ಯಾರು ಇಂತಹ ಸಾಧನೆಯನ್ನು ಕುದುರೆಮೋತಿಯಲ್ಲಿ ಮಾಡಿರಲಿಲ್ಲ. ಈ ಶಾಲೆಯ ಸಂಸ್ಥೆ ಹುಟ್ಟಿಕೊಂಡು ಏಳು ವರ್ಷಗಳ ಇತಿಹಾಸದಲ್ಲಿ ಪ್ರಪ್ರಥಮ ಬಾರಿಗೆ ಇಂತಹ ಒಂದು ಅಮೋಘ ಸಾಧನೆಯನ್ನು ಮಾಡಿದೆ ಇಂತಹ ಸಾಧನೆ ಇನ್ನೂ ಹೆಚ್ಚು ಹೆಚ್ಚು ಮುಂದುವರೆಯಲಿ ಗ್ರಾಮೀಣ ಮಕ್ಕಳ ಭವಿಷ್ಯಕ್ಕೆ ಈ ಸಂಸ್ಥೆ ದಾರಿದೀಪವಾಗಲಿ ಎಂದು ಆಶಿಸಿದರು.

ಈ ಕಾರ್ಯಕ್ರಮದಲ್ಲಿ ಶಿವನಗೌಡ ನವಲಹಳ್ಳಿ, ಹನುಮನ ಗೌಡ ಪಾಟೀಲ್ ದಳಪತಿ, ದುರಗಪ್ಪ ಡೂಪಮ್, ಬೀರಪ್ಪ ಅಲ್ಪಸಂಖ್ಯಾತ ಇಲಾಖೆ, ಸಾಂಸ್ಕೃತಿಕ ಕಾರ್ಯಕ್ರಮ ಚಾಲನೆ ಬೆಟ್ಟದಪ್ಪ ಶಿಶು ಅಭಿವೃದ್ಧಿ ಅಧಿಕಾರಿಗಳು ಯಲಬುರ್ಗಾ ಮತ್ತು ಬೀರಪ್ಪ ಅಂಗಡಿ ರಾಜ್ಯ ನೌಕರರ ಸಂಘ, ಅಧ್ಯಕ್ಷತೆ ಅಶೋಕ್ ಗಟ್ಟೆಪ್ಪನವರ ವಹಿಸಿದ್ದರು.

ಮುಖ್ಯ ಅತಿಥಿಗಳಾಗಿ ಮಾಂತಪ್ಪ ಸಿಡ್ನಲ್ಲಿ, ರಾಮರಾವ್ ಕುಲಕರ್ಣಿ, ಅಶೋಕ್ ಸಜ್ಜನ, ಜಯಣ್ಣ, ಮಾಹಾಂತ, ಪ್ರಶಾಂತ ಅಬಕಾರಿ ಇಲಾಖೆ, ತಿಮ್ಮನಗೌಡ ಪಾಟೀಲ್, ಮಂಜುನಾಥ್ ಹಿರೇಮಠ್, ಹನಮಂತಪ್ಪ ಚಿತ್ರಗಾರ, ಸಂಸ್ಥೆಯ ಗೌರವ ಅಧ್ಯಕ್ಷ ಮಂಜುನಾಥ ಗಟ್ಟೆಪ್ಪನವರ್, ಮುಖ್ಯೋಪಾಧ್ಯಾಯ ಶಭೀರ್ ಲೇಕ್ಷೀ, ಸಂಸ್ಥೆಯ ಅಧ್ಯಕ್ಷ ಅಶೋಕ ಗಟ್ಟೆಪ್ಪನವರ್, ಪತ್ರಕರ್ತ ಶರಣಯ್ಯ ಕರಡಿಮಠ, ಸೇರಿದಂತೆ ಮುಂತಾದವರು ಇದ್ದರು.

## ಶಿಕ್ಷಣದಿಂದ ಏನೆಲ್ಲಾ ಸಾಧಿಸಬಹುದು ವೀರನಗೌಡ ಪೊಲೀಸ್ ಪಾಟೀಲ್




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಯಲಬುರ್ಗಾ ಪಾಲಕರು ತಮ್ಮ ಮಕ್ಕಳ ಏಳ್ಗೆಯ ಬಗ್ಗೆ ಕಾಳಜಿ ವಹಿಸಬೇಕು ಇಂದಿನ ದಿನಮಾನದಲ್ಲಿ ಶಿಕ್ಷಣದಿಂದ ಏನೇಲ್ಲಾ ಸಾಧಿಸಬಹುದಾಗಿದೆ ಎಂದು ತಾಲೂಕಾ ಪಂಚಾಯತ ಮಾಜಿ ಅಧ್ಯಕ್ಷ ವೀರನಗೌಡ ಪೋಲಿಸ ಪಾಟೀಲ ಅಭಿಪ್ರಾಯ ಪಟ್ಟರು.

ಪಟ್ಟಣದ ಎಸ್.ಎ.ನಿಂಗೋಜಿ ಬಿ.ಇಡಿ. ಕಾಲೇಜಿನಲ್ಲಿ ಆಯೋಜಿಸಿದ ಸಂಸ್ಕಾರಭಾರತಿ-ಶ್ರೀಶಾರದಾಸಂಗೀತ ಕಲಾ ಶಿಕ್ಷಣ ಸಂಸ್ಥೆ ಕಿನ್ನಾಳ ಇವರ ಸಹಯೋಗದಲ್ಲಿ ಏರ್ಪಡಿಸಿದ ಮಲ್ಲಪ್ಪ ನಿಂಗೋಜಿ ಹಾಗೂ ನೀಲಮ್ಮ ನಿಂಗೋಜಿ ರವರ ಸ್ಮರಣಾರ್ಥ "ಅವ್ವ-ಅಪ್ಪ ಸಮಾಜ ರತ್ನ ಪ್ರಶಸ್ತಿ" ಸ್ವೀಕರಿಸಿ ಮಾತನಾಡಿದ ಅವರು ರಾಜಕೀಯದಲ್ಲಿ ನಿಸ್ವಾರ್ಥ ಸೇವೆಯನ್ನು ಸಲ್ಲಿಸಿ ಸಮಾಜಸೇವೆಗೈದ ಮಲ್ಲಪ್ಪ ನಿಂಗೋಜಿ ಯವರು ನಮ್ಮ ಭಾಗದಲ್ಲಿ ಜನಪರ ಸೇವೆ ಮಾಡಿದವರು ಅವರ ತತ್ವ ಆದರ್ಶಗಳು ಸಹಕಾರ ಇಂದಿಗೂ ಅನುಕರಣೀಯವಾಗಿವೆ. ನಮ್ಮ ತಾಲೂಕಿನಲ್ಲಿ ರಾಜಕೀಯವಾಗಿ ಅನೇಕರು ಮುಂಚುಣಿಗೆ ಬರುವಲ್ಲಿ ಮಲ್ಲಪ್ಪನವರ ಮಾರ್ಗದರ್ಶನವನ್ನು ಪಡೆದುಕೊಂಡು ಬಂದವರಾಗಿದ್ದಾರೆ ಎಂದರು ಅವರ ಹೆಸರಿನಲ್ಲಿ ನನಗೆ ಪ್ರಶಸ್ತಿಯನ್ನು ನೀಡಿರುವುದು ಸಮಾಜದಲ್ಲಿ ನೈತಿಕ ಮೌಲ್ಯಗಳನ್ನು ಬೆಳೆಸಿಕೊಳ್ಳಲು ಪ್ರೇರಿಪಿಸಿದೆ ಎಂದರು ನಿಂಗೋಜಿ ಶಿಕ್ಷಣ ಸಂಸ್ಥೆ ನಮ್ಮ ಭಾಗದಲ್ಲಿ ಒಳ್ಳೆ ಹೆಸರನ್ನು ಪಡೆದುಕೊಂಡು ಶಿಕ್ಷಣ ಕ್ರಾಂತಿ ಮಾಡಿರುವುದು ಶ್ಲಾಘನೀಯ ಎಂದರು.

ಲಲಿತಾ ನಿಂಗೋಜಿ ರವರ ಸ್ಮರಣಾರಾರ್ಥ ರೇಖಾ ಸವಣೂರ ರವರಿಗೆ ಕಾಯಕ ರತ್ನ ಪ್ರಶಸ್ತಿ ಹಾಗೂ ರಾಜೇಶ್ವರ ಪ್ರಭಾಕರ ನಾಯ್ಕರ ರವರಿಗೆ ಅತ್ಯೂತ್ತಮ ಶಿಕ್ಷಕ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಯಿತು.

ಸಂಸ್ಕಾರ ಭಾರತಿ ಸಂಸ್ಥೆಯ ಅಧ್ಯಕ್ಷ ಪ್ರಹ್ಲಾದ ಅಗಳಿ ಅಧ್ಯಕ್ಷತೆ ವಹಿಸಿ ಮಾತನಾಡಿ ಯುಗಾದಿ ಉತ್ಸವ ನಿಮಿತ್ಯ ಸಂಗೀತ ಕಾರ್ಯಕ್ರಮಗಳನ್ನು ಆಯೋಜಿಸಿದ್ದಲ್ಲದೆ ಅನೇಕ ಸಾಧಕರಿಗೆ ಸನ್ಮಾನಿಸಿದ್ದು ಖುಷಿ ತಂದಿದೆ ಎಂದರು.

ರಾಜೇಶ್ವರಿ ನಾಯ್ಕರ ರೇಖಾ ಸವಣೂರ ಶಾಮಮೂರ್ತಿ ಐಲಿ ವಾದಿರಾಜ ಪಾಟೀಲ ಎನ್. ಆರ್. ಕುಕನೂರ ಮಾತನಾಡಿದರು.

ಲಚ್ಚಣ್ಣ ಕಿನ್ನಾಳ, ಅನಂತ ಪಾವಣಸ್ಕರ್, ಶಕುಂತಲಾ ಬೇನಾಳ, ಕ್ರಷ್ಣ ಸೊರಟೂರ, ಪ.ಪಂ.ಸದಸ್ಯ ರೇವಣಪ್ಪ ಹಿರೇಕುರುಬರ ರಾಜ್ಯ ಕುರುಬರ ಸಮಾಜದ ನಿರ್ದೇಶಕ ಶಿವಣ್ಣ ರಾಜೂರ ಪ್ರಾ.ಪ್ರಕಾಶ, ಎಸ್. ಎ.ನಿಂಗೋಜಿ, ರವಿ ನಿಂಗೋಜಿ ಗಿರೀಶ ಕಣವಿ ಇತರರೂ ಇದ್ದರು. ಭರತ ನಾಟ್ಯ, ಶಾಸ್ತ್ರೀಯ ಸಂಗೀತ, ಜನಪದ ಹಾಡುಗಳು ರಂಜಿಸಿದವು

ಜಿಲ್ಲಾ ಕಸಾಪ ಮಾಜಿ ಅಧ್ಯಕ್ಷ ವೀರಣ್ಣ ನಿಂಗೋಜಿ ಉದ್ಘಾಟಿಸಿದರು.

## ಯತ್ನಾಳ್ ಉಚ್ಚಾಟನೆ ಮರು ಪರಿಶೀಲಿಸಲು ಮುಖಂಡ ಮಾನಸಿಂಗ್ ಮನವಿ

ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ವಿಜಯಪುರ ನಗರ ಶಾಸಕ, ಹಿರಿಯ ರಾಜಕಾರಣಿ ಬಸನಗೌಡ ಪಾಟೀಲ ಯತ್ನಾಳ್ ಅವರನ್ನು ಪಕ್ಷದಿಂದ ಉಚ್ಚಾಟಿಸಿರುವುದರಿಂದ ಕರ್ನಾಟಕದ ಬಿಜೆಪಿ ಕಾರ್ಯಕರ್ತರಿಗೆ ತೀವ್ರ ಮಜುಗರವಾಗಿದ್ದು ಪಕ್ಷದ ವರಿಷ್ಠರು ಈ ತೀರ್ಮಾನವನ್ನು ಮರು ಪರಿಶೀಲಿಸಬೇಕು ಎಂದು ಬಿಜೆಪಿ ಯುವ ಮುಖಂಡ ಮಾನಸಿಂಗ್ ಕೊಕಟನೂರ ವರಿಷ್ಠರಲ್ಲಿ ಮನವಿ ಮಾಡಿಕೊಂಡಿದ್ದಾರೆ. ಪತ್ರಿಕೆಯೊಂದಿಗೆ ಮಾತನಾಡಿದ ಅವರು ಶಾಸಕ ಬಸನಗೌಡ ಪಾಟೀಲ ಯತ್ನಾಳ್‌ರು ರಾಜ್ಯದಲ್ಲಿ ಅದರಲ್ಲೂ ಉತ್ತರ ಕರ್ನಾಟಕ ಭಾಗದಲ್ಲಿ ಪಕ್ಷದ ಸಂಘಟನೆ ಹಾಗೂ ಅಭಿವೃದ್ಧಿ ವಿಷಯದಲ್ಲಿ ಹೋರಾಟದ ಧ್ವನಿಯಾಗಿ ಕೆಲಸ ಮಾಡಿದ್ದಾರೆ. ಅವರೊಬ್ಬ ಮಾಸ್ ನಾಯಕರಾಗಿದ್ದು ಪ್ರಬಲ ಸಮಾಜವನ್ನು ಪ್ರತಿನಿಧಿಸುತ್ತಾರೆ, ರಾಜ್ಯದಲ್ಲಿ ಅವರಿಗೆ ದೊಡ್ಡ ಸಂಖ್ಯೆಯಲ್ಲಿ ಅಭಿಮಾನಿಗಳಿದ್ದಾರೆ. ಅವರ ಉಚ್ಚಾಟನೆಯ ನಿರ್ಧಾರದಿಂದ ಪಕ್ಷದ ವರ್ಚಸ್ಸಿಗೆ ಸಾಕಷ್ಟು ಧಕ್ಕೆಯಾಗಿದೆ ಇದು ಭವಿಷ್ಯದಲ್ಲಿ ಪಕ್ಷದ ಮೇಲೆ ವ್ಯತಿರಿಕ್ತ ಪರಿಣಾಮ ಬೀರಬಹುದಾಗಿದೆ, ಅವರು ಪಕ್ಷದ ನಿಷ್ಠಾವಂತ ಕಾರ್ಯಕರ್ತರಾಗಿದ್ದು ಪಕ್ಷದ ವಿರುದ್ಧವಾಗಿ ಎಂದೂ ಮಾತನಾಡಿಲ್ಲ ಕೆಲವು ನಾಯಕರ ಕುರಿತು ಮಾತನಾಡಿದ್ದಾರೆ ಪಕ್ಷದ ವರಿಷ್ಠರು ತೆಗೆದುಕೊಂಡ ತೀರ್ಮಾನಕ್ಕೆ ಕಾರ್ಯಕರ್ತರಾದ ನಾವು ಭದ್ಧರಾಗಿದ್ದೇವೆ ಆದರೂ ಪಕ್ಷದ ಹಿತದೃಷ್ಟಿಯಿಂದ ನನ್ನಂತಹ ಸಾವಿರಾರು ಕಾರ್ಯಕರ್ತರ ಒತ್ತಾಸೆಯಂತೆ ಉಚ್ಚಾಟನೆ ಕುರಿತು ಪಕ್ಷದ ವರಿಷ್ಠರು ಮತ್ತೊಮ್ಮೆ ಪರಿಶೀಲಿಸಬೇಕೆಂಬುದು ನಮ್ಮ ಮನವಿಯಾಗಿದೆ ಎಂದು ತಿಳಿಸಿದರು.

## ನೀರಾವರಿ ಸಲಹಾ ಸಮಿತಿ ವೇಳಾಪಟ್ಟಿಯಂತೆ ಕಾಲುವೆಗಳಿಗೆ ನೀರು ಬಿಡುಗಡೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಮಾ.29-ತುಂಗಭದ್ರಾ ಯೋಜನೆ ಮತ್ತು ವಿಜಯನಗರ ಕಾಲುವೆಗಳ ಅಚ್ಚುಕಟ್ಟು ಪ್ರದೇಶದಲ್ಲಿ ರೈತರು ಬಿತ್ತನೆ ವಿಳಂಬವಾಗಿ ಮಾಡಿರುವುದರಿಂದ ಹಿಂಗಾರು ಹಂಗಾಮಿಗೆ ನಿಂತಿರುವ ಬೆಳಗಳನ್ನು ಸಂರಕ್ಷಿಸಲು ಜಲಾಶಯದಲ್ಲಿ ಲಭ್ಯವಾಗುವ ನೀರಿನ ಪ್ರಮಾಣವನ್ನು ಅಂದಾಜಿಸಿ ವಿವಿಧ ಕಾಲುವೆಗಳಿಗೆ ಕುಡಿಯುವ ನೀರು ಒಳಗೊಂಡಂತೆ ನೀರು ಹರಿಸಲು ನಿರ್ಧರಿಸಲಾಗಿದೆ ಎಂದು ಮುನಿರಾಬಾದ್ ನ ತುಂಗಭದ್ರಾ ಯೋಜನಾ ವೃತ್ತದ ಕನೀನಿನಿ ಅಧೀಕ್ಷಕ ಅಭಿಯಂತರರು ಹಾಗೂ ತುಂಗಭದ್ರಾ ಯೋಜನೆ ಮತ್ತು ವಿಜಯನಗರ ಕಾಲುವೆಗಳ ನೀರಾವರಿ ಸಲಹಾ ಸಮಿತಿಯ ಸದಸ್ಯ ಕಾರ್ಯದರ್ಶಿಗಳಾದ ಎಲ್.ಬಸವರಾಜ ಅವರು ತಿಳಿಸಿದ್ದಾರೆ.

ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಸಚಿವರು ಹಾಗೂ ನೀರಾವರಿ ಸಲಹಾ ಸಮಿತಿ ಅಧ್ಯಕ್ಷರಾದ ಶಿವರಾಜ ಎಸ್.ತಂಗಡಗಿ ಅವರ ಅಧ್ಯಕ್ಷತೆಯಲ್ಲಿ ಇತ್ತೀಚೆಗೆ ನಡೆದ 2024-25ನೇ ಸಾಲಿನ 123ನೇ ತುರ್ತು ನೀರಾವರಿ ಸಲಹಾ ಸಮಿತಿ ಸಭೆಯಲ್ಲಿ ನಿರ್ಧರಿಸಲಾಗಿದೆ.

**ನೀರು ಹರಿಸುವ ಕಾಲಾವಧಿ:**

ತುಂಗಭದ್ರಾ ಎಡದಂಡೆ ಮುಖ್ಯ ಕಾಲುವೆ:

ಎಡದಂಡೆ ಕಾಲುವೆಯಡಿ ಲಭ್ಯವಾಗುವ ನೀರಿನಲ್ಲಿ ಏ.01 ರಿಂದ 10 ರವರೆಗೆ ಕುಡಿಯುವ ನೀರು ಒಳಗೊಂಡಂತೆ ಹಾಗೂ ನಿಂತ ಬೆಳೆಗಳ ಸಂರಕ್ಷಣೆಗಾಗಿ 3000 ಕ್ಯೂಸೆಕ್ ನಂತೆ ಹರಿಸಲಾಗುವುದು.

ಎಡದಂಡೆ ವಿಜಯನಗರ ಕಾಲುವೆ:

ಏ.11 ರಿಂದ ರಿಂದ ಮೇ 10 ರವರೆಗೆ 150 ಕ್ಯೂಸೆಕ್ ನಂತೆ ವಿತರಣಾ ಕಾಲುವೆ 1 ರಿಂದ 11ಎ ವರೆಗೆ ಅಥವಾ ಈ ಕಾಲುವೆಯಡಿ ನೀರಿನ ಲಭ್ಯತೆಯು ಇರುವವರೆಗೆ ಮಾತ್ರ, ಇದರಲ್ಲಿ ಯಾವುದು ಮೊದಲು ಅದು ಅನ್ವಯಿಸುತ್ತದೆ.

ತುಂಗಭದ್ರಾ ಬಲದಂಡೆ ಕೆಳಮಟ್ಟದ ಕಾಲುವೆ:

ಬಲದಂಡೆ ಕೆಳಮಟ್ಟದ ಕಾಲುವೆಯಡಿ ಲಭ್ಯವಾಗುವ ನೀರಿನಲ್ಲಿ ಏ.01 ರಿಂದ 10 ರ ವರೆಗೆ ಕುಡಿಯುವ ನೀರು ಒಳಗೊಂಡಂತೆ ಹಾಗೂ ನಿಂತ ಬೆಳೆಗಳ ಸಂರಕ್ಷಣೆಗಾಗಿ 450 ಕ್ಯೂಸೆಕ್ ನಂತೆ ಹರಿಸಲಾಗುವುದು.

ರಾಯ ಬಸವಣ್ಣ ಕಾಲುವೆ:

ಏ.01 ರಿಂದ ಮೇ 31 ರವರೆಗೆ ಲಭ್ಯವಾಗುವ ನೀರನಲ್ಲಿ 200 ಕ್ಯೂಸೆಕ್ ನಂತೆ ಹರಿಸಲಾಗುವುದು.


ನದಿ ಪೂರಕ: ಸುಮಾರು 90 ಕ್ಯೂಸೆಕ್ ನಂತೆ ನದಿ ಪೂರಕ ಕಾರ್ಖಾನೆ ಒಳಗೊಂಡಂತೆ ನೀರು ಹರಿಸಲಾಗುವುದು.

*ರೈತ ಭಾಂದವರಲ್ಲಿ ಮನವಿ:* ತುಂಗಭದ್ರಾ ಜಲಾಶಯದಲ್ಲಿ ಲಭ್ಯವಿರುವ ನೀರನ್ನು ಹಿಂಗಾರು ಹಂಗಾಮಿನ ಬೆಳೆದು ನಿಂತ ಬೆಳಗಳನ್ನು ಸಂರಕ್ಷಿಸಲು ಹಾಗೂ ಕುಡಿಯುವ ನೀರು ಒಳಗೊಂಡಂತೆ ಹರಿಸಲಾಗುವುದು.

ಹಾಗಾಗಿ ರೈತರು ನೀರನ್ನು ಮಿತವ್ಯಯವಾಗಿ ಬಳಸಿ ಅಧಿಕೃತ ಅಚ್ಚುಕಟ್ಟು ಪ್ರದೇಶದಲ್ಲಿ ನಿಗಧಿತ ಬೆಳೆಗಳನ್ನು ಮಾತ್ರ ಬೆಳೆಯಲು ಹಾಗೂ ಸಮರ್ಪಕ ನೀರು ನಿರ್ವಹಣೆಗೆ ಇಲಾಖೆಯೊಡನೆ ಸಹಕರಿಸಬೇಕು ಎಂದು ರೈತ ಭಾಂದವರಲ್ಲಿ ಕೋರಲಾಗಿದೆ.

ರೈತರು ಅನಧಿಕೃತವಾಗಿ ನೀರು ಪಡೆದು ಭತ್ತ, ಇತರೆ ಬೆಳೆಗಳನ್ನು ಬೆಳೆದಲ್ಲಿ ನೀರಾವರಿ ಕಾಯ್ದೆಯನ್ವಯ ಕಾನೂನು ಕ್ರಮ ಜರುಗಿಸಲಾಗುವುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶ್ರೀ ಅಗ್ನಿ ಬನ್ನಿರಾಯಸ್ವಾಮಿ ಜಯಂತಿ : ಜಿಲ್ಲಾಡಳಿತದಿಂದ ಪುಷ್ಪ ನಮನ ಸಲ್ಲಿಕೆ




ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ:ಶ್ರೀ ಅಗ್ನಿ ಬನ್ನಿರಾಯಸ್ವಾಮಿ ಜಯಂತಿ ಅಂಗವಾಗಿ ಕೊಪ್ಪಳ ಜಿಲ್ಲಾಡಳಿತದ ವತಿಯಿಂದ ಶ್ರೀ ಅಗ್ನಿ ಬನ್ನಿರಾಯಸ್ವಾಮಿ ಅವರ ಭಾವಚಿತ್ರಕ್ಕೆ ಮಾರ್ಚ್ 28 ರಂದು ಶುಕ್ರವಾರ ಪುಷ್ಪ ನಮನ ಸಲ್ಲಿಸಲಾಯಿತು.

ಜಿಲ್ಲಾಡಳಿತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಶ್ರೀ ಅಗ್ನಿ ಬನ್ನಿರಾಯಸ್ವಾಮಿ ಜಯಂತಿ ಜಿಲ್ಲಾಡಳಿತ ಕಛೇರಿ ಸಭಾಂಗಣದಲ್ಲಿ ಸರಳವಾಗಿ ಆಚರಿಸಲಾಯಿತು. ಅಪರ ಜಿಲ್ಲಾಧಿಕಾರಿಗಳಾದ ಸಿದ್ರಾಮೇಶ್ವರ ಅವರು ಶ್ರೀ ಅಗ್ನಿ ಬನ್ನಿರಾಯಸ್ವಾಮಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಮಾಡಿ ಗೌರವ ನಮನ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮುನ್ಸಿಪಾಲ್ ತಹಶೀಲ್ದಾರಾದ ವಿನಾಯಕ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಶಂಕರ್ ಮಾಮನಿ, ಮುತ್ತು ಚಲವಾದಿ, ಮತ್ತಿತರರು ಸೇರಿದಂತೆ ವಿವಿಧ ಇಲಾಖೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

## ಉನ್ನತ ಸಾಧನೆಗೆ ಅಗಲಿಕೆ ಅನಿವಾರ್ಯ

ಸೈದಾಪುರ:ಮಾ.29: ಜೀವನದಲ್ಲಿ ಉನ್ನತ ಮಟ್ಟದ ಸಾಧನೆಗಾಗಿ ಅಗಲವುದು ಅನಿವಾರ್ಯ ಎಂದು ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಮಾಳಪ್ಪ ಅರಿಕೇರಿ ಅಭಿಪ್ರಾಯಪಟ್ಟರು.

ಪಟ್ಟಣದ ಗುರುಕುಲ ವಿದ್ಯಾಪೀಠ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಗುರುವಾರ 8ನೇ ತರಗತಿ ವಿದ್ಯಾರ್ಥಿಗಳಿಗೆ ಹಮ್ಮಿಕೊಂಡಿದ್ದ ಬೀಳ್ಕೊಡುಗೆ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದರು. ಬದುಕಿನಲ್ಲಿ ಯಶಸ್ಸಿನ ಮೆಟ್ಟಿಲೇರಲು ಒಬ್ಬರ ಜೊತೆಗೊಬ್ಬರು ಆಕಸ್ಮಿಕವಾಗಿ ಕೂಡಿದರೂ ಕೂಡ ಸಾಧನೆಯ ಹಾದಿಯಲ್ಲಿ ಅವರನ್ನು ಬಿಡುವಂತಹ ಅನಿವಾರ್ಯತೆ ಎದುರಾಗುತ್ತದೆ. ಆದರೆ ಚಿಕ್ಕಂದಿನಲ್ಲಿ ಎದೆಗೆ ಬಿತ್ತಿದ ಅಕ್ಷರ, ಗುಣ ಧರ್ಮವನ್ನು ಕಲಿಸಿಕೊಟ್ಟ ಗುರು ಕುಲವನ್ನು ಎಂದು ಮರೆಯಬಾರದು ಎಂದರು.

## ಡಾ.ನಡುವಿನಕೇರಿಗೆ 'ಅಂಬೇಡ್ಕರ್ ರತ್ನ' ಪ್ರಶಸ್ತಿ ಪ್ರಧಾನ



ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಪಟ್ಟಣದ ಪ್ರತಿಷ್ಠಿತ ಶ್ರೀ ಎಚ್ ಎಸ್ ಪಾಟೀಲ ಮಹಿಳಾ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯ, ಸಾಹಿತಿ ಡಾ.ಹಣಮಂತಪ್ಪ ಬಿ. ನಡುವಿನಕೇರಿ ಇವರಿಗೆ ಬಿ.ಬಿ. ಇಂಗಳಗಿಯ ಎಸ್.ಎಸ್.ವಿ.ವಿ. ಶಿಕ್ಷಣ ಸಂಸ್ಥೆ ಕೊಡ ಮಾಡುವ 2024-25 ನೇ ಸಾಲಿನ "ಅಂಬೇಡ್ಕರ್ ರತ್ನ" ಪ್ರಶಸ್ತಿ ಪ್ರಧಾನ ಮಾಡಿ ಗೌರವಿಸಲಾಗಿದೆ. ಮೂಲತಃ ವಿಜಯಪುರ ಜಿಲ್ಲೆ ದೇವರ ಹಿಪ್ಪರಗಿ ತಾಲೂಕಿನ ಆಲಗೂರ ಗ್ರಾಮದವರಾದ ಇವರು ಕರ್ನಾಟಕ ವಿಶ್ವವಿದ್ಯಾಲಯದಿಂದ ಎಂಎ. ಎಂಫೀಲ್ ಹಾಗೂ ಗೌರವ ಡಾಕ್ಟರೇಟ್ ಪದವಿ ಪಡೆದುಕೊಂಡಿದ್ದು ಪ್ರಸಕ್ತ ಪಟ್ಟಣದ ಶ್ರೀ ಎಚ್ ಎಸ್ ಪಾಟೀಲ ಮಹಿಳಾ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಇವರು ಶಿಕ್ಷಣ, ಸಾಹಿತ್ಯ ಹಾಗೂ ಸಮಾಜಿಕ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದ್ದು ಬಡ ದುರ್ಬಲ ಹಾಗೂ ತುಳಿತಕ್ಕೆ ಒಳಗಾದ ಜನಾಂಗದ ಮಕ್ಕಳ ವಿದ್ಯಾಭ್ಯಾಸಕ್ಕಾಗಿ ವಿಶೇಷ ಆಸಕ್ತಿಯಿಂದ ಕೆಲಸ ಮಾಡುತ್ತಿದ್ದಾರೆ ಅವರ ಈ ಸೇವಾ ಮನೋಭಾವವನ್ನು ಗುರುತಿಸಿ ಇದೀಗ ಅವರಿಗೆ ಬಿ.ಬಿ.ಇಂಗಳಗಿಯ ಎಸ್.ಎಸ್.ವಿ.ವಿ. ಸಂಸ್ಥೆಯ ಶಿಕ್ಷಣ ಸಂಸ್ಥೆಯಾದ ಯಶಸ್ವಿ ಸೈನಿಕ ಪ್ರಾಥಮಿಕ ಶಾಲೆಯ ವಾರ್ಷಿಕೋತ್ಸವ ಸಮಾರಂಭದಲ್ಲಿ ಅವರಿಗೆ ಈ ಪ್ರಶಸ್ತಿಯನ್ನು ನೀಡಿ ಗೌರವಿಸಲಾಗಿದೆ. ಪ್ರಶಸ್ತಿ ಪ್ರದಾನ ಸಮಾರಂಭದ ಸಾನಿಧ್ಯವನ್ನು ಜ್ಯೋತಿಷ್ಯ ರತ್ನ ಪರಮಪೂಜ್ಯ ಶ್ರೀ ರಾಮಲಿಂಗಯ್ಯ ಮಹಾಸ್ವಾಮಿಗಳು ವಹಿಸಿದ್ದರು. ವೇದಿಕೆಯಲ್ಲಿ ಶಾಸಕ ರಾಜುಗೌಡ ಪಾಟೀಲ, ಡಾ.ಪ್ರಭುಗೌಡ ಲಿಂಗದಳ್ಳಿ, ಪ್ರಭುಗೌಡ ಬಿರಾದಾರ ಅಸ್ಕಿ, ಸಿದ್ದು ಬುಳ್ಳಾ, ಸಂಸ್ಥೆಯ ಅಧ್ಯಕ್ಷ ಮಹಾಂತೇಶ ಕಾಂಬಳೆ ಹಾಗೂ ಹಲವಾರು ಗಣ್ಯಮಾನ್ಯರು ಇದ್ದರು.

## ನಾಲ್ಕನೇ ದಿನವೂ ಎಸ್ಸೆಸ್ಸೆಲ್ಸಿ ಪರೀಕ್ಷೆ ಸುಗಮ; 1,170 ವಿದ್ಯಾರ್ಥಿಗಳು ಗೈರು

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.29: ರಾಯಚೂರು ಜಿಲ್ಲೆಯಲ್ಲಿ ಮಾರ್ಚ 29ರ ಶನಿವಾರ ದಂದು ಜಿಲ್ಲೆಯ 97 ಕೇಂದ್ರಗಳಲ್ಲಿ ಸಮಾಜ ವಿಜ್ಞಾನ ವಿಷಯದ ಪರೀಕ್ಷೆ ಸುಗಮವಾಗಿ ನಡೆಯಿತು.

ದೇವದುರ್ಗ, ಲಿಂಗಸುಗೂರ, ಮಾನ್ವಿ, ರಾಯಚೂರು ಹಾಗೂ ಸಿಂಧನೂರು ಸೇರಿ ಜಿಲ್ಲೆಯಲ್ಲಿ ಪರೀಕ್ಷೆಗೆ ನೊಂದಾಯಿಸಿಕೊಂಡಿದ್ದ ಒಟ್ಟು 31,493 ವಿದ್ಯಾರ್ಥಿಗಳ ಪೈಕಿ 30,323 ವಿದ್ಯಾರ್ಥಿಗಳು ಹಾಜರಾಗಿದ್ದು, 1,170 ವಿದ್ಯಾರ್ಥಿಗಳು ಗೈರಾದರು. ಪರೀಕ್ಷಾ ಕೇಂದ್ರಗಳ ಸುತ್ತಮುತ್ತ 200 ಮೀಟರ್ ವ್ಯಾಪ್ತಿಯ ಪ್ರದೇಶವನ್ನು ನಿಷೇಧಿತವೆಂದು ಘೋಷಿಸಲಾಗಿತ್ತು.

ಜಿಲ್ಲೆಯ ದೇವದುರ್ಗ ತಾಲೂಕಿನಲ್ಲಿ ಪರೀಕ್ಷೆಗೆ ನೋಂದಾಯಿಸಿಕೊಂಡಿದ್ದ 4,367 ವಿದ್ಯಾರ್ಥಿಗಳ ಪೈಕಿ 4,258 ವಿದ್ಯಾರ್ಥಿಗಳು ಹಾಜರಾಗಿದ್ದು, 109 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಲಿಂಗಸೂಗೂರು ತಾಲೂಕಿನಲ್ಲಿ ಪರೀಕ್ಷೆಗೆ ನೊಂದಾಯಿಸಿಕೊಂಡಿದ್ದ 6,513 ವಿದ್ಯಾರ್ಥಿಗಳ ಪೈಕಿ 6,315 ವಿದ್ಯಾರ್ಥಿಗಳು ಹಾಜರಾಗಿದ್ದು, 198 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಮಾನ್ವಿ ತಾಲೂಕಿನಲ್ಲಿ ಪರೀಕ್ಷೆಗೆ ನೋಂದಾಯಿಸಿಕೊಂಡಿದ್ದ 5,856 ವಿದ್ಯಾರ್ಥಿಗಳ ಪೈಕಿ 5,563 ವಿದ್ಯಾರ್ಥಿಗಳು ಹಾಜರಾಗಿದ್ದು, 293 ವಿದ್ಯಾರ್ಥಿಗಳು ಗೈರಾಗಿದ್ದಾರೆ. ರಾಯಚೂರು ತಾಲೂಕಿನಲ್ಲಿ ಪರೀಕ್ಷೆಗೆ ನೋಂದಾಯಿಸಿಕೊಂಡಿದ್ದ 9,063 ವಿದ್ಯಾರ್ಥಿಗಳ ಪೈಕಿ 8,696 ವಿದ್ಯಾರ್ಥಿಗಳು ಹಾಜರಾಗಿದ್ದು, 367 ವಿದ್ಯಾರ್ಥಿಗಳು ಗೈರಾಗಿದ್ಧಾರೆ. ಸಿಂಧನೂರು ತಾಲೂಕಿನಲ್ಲಿ ಪರೀಕ್ಷೆಗೆ ನೋಂದಾಯಿಸಿಕೊಂಡಿದ್ದ 5,694 ವಿದ್ಯಾರ್ಥಿಗಳ ಪೈಕಿ 5,491 ವಿದ್ಯಾರ್ಥಿಗಳು ಹಾಜರಾಗಿದ್ದು, 203 ವಿದ್ಯಾರ್ಥಿಗಳು ಗೈರಾಗಿದ್ದಾರೆ ಎಂದು ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕರಾದ ಕೆ.ಬಿ.ಬಡಿಗೇರ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಒಳಮೀಸಲಾತಿ ಜಾರಿಗೆ ಮುತ್ತುರಾಜ್ ಗಡುವು

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು, ಮಾ. 28- ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿವಿಧ ದಲಿತ ಸಂಘಟನೆಗಳ ಮನವಿಗೆ ಸ್ಪಂದಿಸಿ ಒಳ ಮೀಸಲಾತಿಯನ್ನು ಅತೀ ಶೀಘ್ರದಲ್ಲೇ ಜಾರಿ ತರಬೇಕು. ನ್ಯಾಯಮೂರ್ತಿ ನ್ಯಾಗಮೋಹನ್ ದಾಸ್ ಒಳ ಮೀಸಲಾತಿ ಜಾರಿ ಕುರಿತ ವರದಿ ಸಲ್ಲಿಸಿದ್ದು. ಯಾರಿಗೂ ಅನ್ಯಾಯವಾಗದಂತೆ ವರದಿಯನ್ನು ಡಾ.ಅಂಬೇಡ್ಕರ್ ಜಯಂತಿ ಕಾರ್ಯಕ್ರಮದೊಳಗೆ ಜಾರಿಗೊಳಿಸಬೇಕು ಅಹಿಂದ ಹೋರಾಟ ಸಮಿತಿ ಅಧ್ಯಕ್ಷ ಮುತ್ತುರಾಜ್ ಆಗ್ರಹಿಸಿದ್ದಾರೆ.

# ನಂಬಿದ ಭಕ್ತರ ಕರುಣಾಸಾಗರ ಕಣವಿ ಶ್ರೀ ವೀರಭದ್ರೇಶ್ವರ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.29- ಬಾಗಲಕೋಟೆಯಲ್ಲಿ ಅಸಂಖ್ಯಾತ ಭಕ್ತರು ಶ್ರದ್ಧಾ ಭಕ್ತಿಯಿಂದ ಆಚರಣೆ ಮಾಡುವ ಮಹೋತ್ಸವ ನಗರದ ಕಣವಿ ವೀರಭದ್ರೇಶ್ವರ ರಥೋತ್ಸವ ಹಾಗೂ ಅಗ್ನಿ ಉತ್ಸವ. ಚಾಂದ್ರಮಾನ ಯುಗಾದಿ ಮಾರ್ಚ 30 ರವಿವಾರ ನಗರದ ಹೃದಯ ಭಾಗದಲ್ಲಿರುವ ಕಣವಿ ಶ್ರೀ ವೀರಭದ್ರೇಶ್ವರ ಜಾತ್ರಾ ಮಹೋತ್ಸವ ವಿಜೃಂಭಣೆಯಿಂದ ಜರುಗಲಿದ್ದು, ದಿ.31 ಸೋಮವಾರ ಅಗ್ನಿ ಉತ್ಸವದಲ್ಲಿ ಭಕ್ತರು ಸಡಗರ ಸಂಭ್ರಮದಿಂದ ಪಾಲ್ಗೊಳ್ಳಲಿದ್ದಾರೆ.

ಸುಮಾರು ವರ್ಷಗಳ ಹಿಂದೆ ಈಗಿರುವ ದೇವಾಸ್ಥಾನದ ಸ್ಥಳದಲ್ಲಿ ದೊಡ್ಡದಾದ ಕಣಿವೆಯೊಂದಿತ್ತು. ನಿರ್ಜನ ವಾತಾವರಣದಲ್ಲಿನ ಕಣಿವೆಯಲ್ಲಿ ನೀರು ನಿಲ್ಲುತ್ತಿತ್ತು. ದನಗಾಹಿಗಳು ದಿನಾಲು ಈ ಪ್ರದೇಶದಲ್ಲಿ ದನ ಮೇಯಿಸುತ್ತಿದ್ದರು. ಕಣವಿ ಮಠದ ನೀಲಮ್ಮ ಎಂಬವಳು ದನ ಮೇಯಿಸುವ ವೇಳೆ ಭೂಮಿಯಿಂದ ಮೇಲೆ ಬಂದ ವೀರಭದ್ರೇಶ್ವರ ದೇವರ ಮೂರ್ತಿ ಕಂಡಳಂತೆ.

ಅದನ್ನು ಊರವರಿಗೆ ತಿಳಿಸಿದಾಗ ಮೂರ್ತಿ ಹೊರಕ್ಕೆ ತೆಗೆಸಿದರಂತೆ. ನಂತರ ಕಣವಿ ಪ್ರದೇಶದಲ್ಲಿ ಅದನ್ನು



ಪ್ರತಿಷ್ಠಾಪಿಸಿದ್ದರಿಂದ ಅಂದಿನಿಂದ ಕಣವಿ ಶ್ರೀ ವೀರಭದ್ರೇಶ್ವರ ಸ್ವಾಮಿ ಎಂಬ ಹೆಸರು ಚಾಲ್ತಿಗೆ ಬಂದಿತಂತೆ. ಕಣವಿ ಮಠದ ಬಸಯ್ಯನವರು ಪೂಜಾ ಕೈಂಕರ್ಯಗಳನ್ನು ಮಾಡಹತ್ತಿದರಂತೆ. ವೀರಭದ್ರೇಶ್ವರ ದೇವರ ಪರಮ ಭಕ್ತ ಉಪ್ಪಿನ (ಕೋಟಿ) ಮನೆತನದವರು ದೇವಸ್ಥಾನದ ಗರ್ಭ ಗುಡಿಯನ್ನು, ಶಾಬಾದಿ ಸೋಮಲಿಂಗಪ್ಪನವರ ತಾಯಿಯವರು ದೇವಸ್ಥಾನದ ಸುತ್ತಲಿನ ಪಾವಳಿಯನ್ನು, ಅರ-ಕೇರಿ ಮನೆತನದವರು, ಕಲಾದಗಿ ಗದಿಗೆಪ್ಪನವರು, ದೇವಸ್ಥಾನದ ಜೀರ್ಣೋದ್ಧಾರ ಕಾರ್ಯಗಳನ್ನು ಕೈಗೊಂಡರು. ನಂತರ ಭಕ್ತರ ಸಹಕಾರದೊಂದಿಗೆ ಜಾತ್ರಾಮಹೋತ್ಸವ ಆರಂಭಿಸಿದರಂತೆ. ಸರಕಾರಕ್ಕೆ ಸೇರಿದ್ದ ಕಣವಿ ಪ್ರದೇಶವನ್ನು ಲೀಜ ಮೇಲೆ ಪಡೆದ ಕಣವಿ ಮಠದ ಮನೆತನದವರು ಜಾಗೆಯನ್ನು ಹಾಗೂ ದೇವಸ್ಥಾನವನ್ನು ಬಸವೇಶ್ವರ ವಿದ್ಯಾವರ್ಧಕ ಸಂಘಕ್ಕೆ ಒಪ್ಪಿಸಿದರು.

ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘದವರು ಕಣವಿ ವೀರಭದ್ರೇಶ್ವರ ಹೆಸರಿನಿಂದ ಟ್ರಸ್ಟ ಸ್ಥಾಪಿಸಿ ದೇವಸ್ಥಾನಕ್ಕೆ ಕಾಯಕಲ್ಪ ನೀಡಿದ್ದಾರೆ. ಮೂರು ಬೃಹತ್ತ ಮಂಗಲ ಭವನ, ಸಂಕೀರ್ಣ ನಿರ್ಮಿಸಿ ಅಭಿವೃದ್ಧಿ ಪಡಿಸಿದ್ದಾರೆ. 1990ರಲ್ಲಿ ಮುಧುರೈ ಗೋಪುರ ಶಿಲ್ಪಿಗಾರರಿಂದ, ಸುಂದರ ನೂತನ ಗೋಪುರ ನಿರ್ಮಿಸಲಾಯಿತು. ಗೋಪುರದ ಮುಂಭಾಗ ಸುತ್ತಲೂ ವಿವಿಧ ಭಂಗಿಗಳಲ್ಲಿರುವ ವಿವಿಧ ದೇವತೆಗಳ ಸುಂದರವಾದ ಮೂರ್ತಿಗಳು ನೋಡುಗರ ಕಣ್ಮನವನ್ನು ಸೆಳೆಯುತ್ತಿವೆ. ಮಹಾದ್ವಾರದ ಎಡಗಡೆ ಕೂಡಾ ವಿವಿಧ ಮೂರ್ತಿಗಳನ್ನು ನಿರ್ಮಿಸಲಾಗಿದೆ.

ಶ್ರಾವಣ ಮಾಸದಲ್ಲಿ ಶ್ರೀ ವೀರಭದ್ರಸ್ವಾಮಿಗೆ ದಿನಾಲು ರುದ್ರಾಭಿಷೇಕ ಮಾಡಿ ದೇವರಿಗೆ ವಿಶೇಷ ಅಲಂಕಾರ ಮಾಡುವರು. ಎಲಿ ಪೂಜೆ, ವಿವಿಧ ಹೂ ಗಳಿಂದ ಅಲಂಕಾರ ಹಾಗೂ ವಿವಿಧ ಬಗೆಯ ಹಣ್ಣು, ನಾಣ್ಯಗಳಿಂದ ಅಲಂಕಾರ ಮಾಡಿ ಪೂಜೆ ಸಲ್ಲಿಸುವರು.

ನಂದಿಯ ಮೇಲೆ ಕುಳಿತ ವೀರಭದ್ರದೇವರು, ದಕ್ಷ ಬೃಹ್ಮನ ಸಂಹಾರಿ ವೀರಭದ್ರ ದೇವರು ಹೀಗೆ ವಿವಿಧ ಬಗೆಯಿಂದ ಅಲಂಕಾರ ಮಾಡಿ ಪೂಜೆ ಮಾಡುವರು. ಬೇಸಿಗೆಯಲ್ಲಿ ಮೂರ್ತಿಗೆ ಅನ್ನದ ಬುತ್ತಿಯ ಪೂಜೆ ನೆರವೇರಿಸುವರು.

ಚಾಂದ್ರಮಾನ ಯುಗಾದಿ ಶುಭದಿನ ದಿ.30 ರವಿವಾರ ಮಹಾರಥೋತ್ಸವ ಜರುಗಲಿದೆ. ರಥವು ಕಣವಿ ವೀರಭದ್ರೇಶ್ವರ ದೇವಸ್ಥಾನದಿಂದ ಪಾದಗಟ್ಟೆಯವರೆಗೆ ಸಾಗಿ ಮರಳಿ ದೇವಸ್ಥಾನ ತಲಪುವದು. ಅಪಾರ ಸಂಖ್ಯೆಯ ಭಕ್ತ ಸಮೂಹದ ಮಧ್ಯೆ ಸಡಗರ ಸಂಭ್ರಮದಿಂದ ರಥವನ್ನು ಎಳೆಯಲಾಗುತ್ತಿದೆ. ಸುಮಾರು 25 ಸಾವಿರಕ್ಕೂ ಹೆಚ್ಚು ಭಕ್ತರು ಸೇರಲಿದ್ದು, ವಿವಿಧ ಅಂಗಡಿಗಳು ಮಕ್ಕಳನ್ನು ವಿಶೇಷವಾಗಿ ಆಕರ್ಷಿಸುತ್ತವೆ.

ಅಗ್ನಿ ಉತ್ಸವ: ರಥೋತ್ಸವದ ಮರುದಿನ ದಿ.31 ಸೋಮವಾರ ವೀರಭದ್ರೇಶ್ವರ ಅಗ್ನಿ ಉತ್ಸವ ಜರುಗುವದು. ಸಾವಿರಾರು ಭಕ್ತರು, ಪುರುವಂತರು ವಡಪುಗಳನ್ನು ಹೇಳುವದು, ಶಸ್ತ್ರಗಳನ್ನು ಹಾಕಿಕೊಳ್ಳುವದು ವಿಶೇಷವಾಗಿ ಕಂಡು ಬರುತ್ತದೆ. ದೇವಸ್ಥಾನದ ಪಲ್ಲಕ್ಕಿ, ಪುರವಂತರು, ನಂದಿಕೋಲದವರು ಹಾಗೂ ಅಸಂಖ್ಯಾತ ಭಕ್ತರು, ಧಗಧಗಿಸುವ ಬೆಂಕಿಯಲ್ಲಿ ಭಕ್ತಿಯಿಂದ ವೀರಭದ್ರದೇವರ ಹೆಸರು ಹೇಳುತ್ತಾ ಖಡೇ ಖಡೇ ಶ್ರೀ ವೀರಭದ್ರ ಎಂದು ಅಗ್ನಿಯಲ್ಲಿ ಹಾಯುವ ದೃಶ್ಯ ರೋಮಾಂಚಕಾರಿಯಾಗಿರುತ್ತದೆ. ನಂಬಿದ ಭಕ್ತರಿಗೆ ಬೇಡಿದ್ದನ್ನು ಕರುಣಿಸುವ ಶ್ರೀ ವೀರಭದ್ರೇಶ್ವರ ದೇವರ ಜಾತ್ರಾ ಮಹೋತ್ಸವದಲ್ಲಿ ಸಮಸ್ತ ಭಕ್ತರು ಪಾಲ್ಗೊಂಡು ದೇವರ ಕೃಪಾಶೀರ್ವಾದಕ್ಕೆ ಪಾತ್ರರಾಗೋಣ ಬನ್ನಿ.




ಮಹಾಬಳೇಶ್ವರ ಎಸ್. ಗುಡಗುಂಟಿ. ಬಾಗಲಕೋಟೆ.

# ಶೌಚಾಲಯ ಧ್ವಂಸ- ಮಹಿಳೆಯರ ಪ್ರತಿಭಟನೆ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.28-ಜಿಲ್ಲೆಯ ಇಳಕಲ್ಲ ತಾಲೂಕಿನ ಕರಡಿ ಗ್ರಾಮದಲ್ಲಿ ಗ್ರಾಪಂ ವತಿಯಿಂದ ನಿರ್ಮಿಸಲಾಗಿದ್ದ ಮಹಿಳೆಯರ ಸಾರ್ವಜನಿಕ ಶೌಚಾಲಯ ಕಟ್ಟಡವನ್ನು ಗ್ರಾಮ ಪಂಚಾಯತಿಯ ಸದಸ್ಯೆಯ ಪತಿಯೊಬ್ಬರು ಜೆಸಿಬಿ ಬಳಸಿ ಕೆಡವಿ ಹಾಕಿದ್ದಾರೆ.



ಈ ಘಟನೆಯನ್ನು ತೀವ್ರವಾಗಿ ಖಂಡಿಸಿರುವ ಗ್ರಾಮದ ಮಹಿಳೆಯರು ಪ್ರತಿಭಟನೆ ವ್ಯಕ್ತಪಡಿಸಿದ್ದು, ಗ್ರಾಪಂಗೆ ಮುತ್ತಿಗೆ ಹಾಕಿದ್ದಾರೆ.

ಗ್ರಾಮ ಪಂಚಾಯತಿ ಸದಸ್ಯೆ ಶಶಿಕಲಾ ಅವರ ಗಂಡ ಮಲ್ಲನಗೌಡ ಗೌಡರ, ಶೌಚಾಲಯವನ್ನು ಜೆಸಿಬಿ ಹಚ್ಚಿ ಕೆಡವಿ ಹಾಕಿದ್ದಾರೆ. ಸಿಟ್ಟಿಗೆದ್ದ ಮಹಿಳೆಯರು ಗ್ರಾಪಂಗೆ ತೆರಳಿ ಆಕ್ರೋಶ ವ್ಯಕ್ತಪಡಿಸಿ ಕೂಡಲೇ ಶೌಚಾಲಯ ವ್ಯವಸ್ಥೆ ಮಾಡಿಕೊಡುವಂತೆ ಪಿಡಿಓಗೆ ಒತ್ತಾಯಿಸಿದ್ದಾರೆ. ಗ್ರಾಪಂ ಅಧ್ಯಕ್ಷ ಮಹಾಂತೇಶ ಬೋಪುರದ ಹಾಗೂ ಪಿಡಿಓ ಮುದಗಲ್ಲ ಆಕ್ರೋಶಿತ ಮಹಿಳೆಯರನ್ನು ಸಮಾಧಾನಗೊಳಿಸಿ, ಶೀಘ್ರದಲ್ಲೇ ಶೌಚಾಲಯ ನಿರ್ಮಿಸಿ ಕೊಡುವುದಾಗಿ ಭರವಸೆ ನೀಡಿದರು.

ಕೇವಲ ಶೌಚಾಲಯ ನಿರ್ಮಿಸುವುದಷ್ಟೇ ಅಲ್ಲ. ಇರುವ ಮಹಿಳಾ ಶೌಚಾಲಯ ಕೆಡವಿ ಹಾಕಿರುವ ವ್ಯಕ್ತಿಯ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಮಹಿಳೆಯರು ಒತ್ತಾಯಿಸಿದರು.

# ಎ.2 ದೇವರ ದಾಸಿಮಯ್ಯ ಜಯಂತಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.29-ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಎಪ್ರೀಲ್ 2 ರಂದು ಬೆಳಿಗ್ಗೆ 10.30ಕ್ಕೆ ಜಿಲ್ಲಾಡಳಿತ ಭವನದಲ್ಲಿರುವ ಆಡಿಟೋ-ರಿಯಂ ಹಾಲ್‌ನಲ್ಲಿ ಆದ್ಯ ವಚನಕಾರ ದೇವರ ದಾಸಿಮಯ್ಯನವರ ಜಯಂತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ಅಬಕಾರಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಕಾರ್ಯಕ್ರಮ ಉದ್ಘಾಟಿಸಲಿದ್ದು, ಅಧ್ಯಕ್ಷತೆಯನ್ನು ಶಾಸಕ ಎಚ್.ವಾಯ್. ಮೇಟಿ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ವಿಧಾನ ಪರಿಷತ್ ಶಾಸಕ ಪ್ರಕಾಶ ಹುಕ್ಕೇರಿ, ಬೀಳಗಿ ಶಾಸಕ ಜೆ.ಟಿ.ಪಾಟೀಲ, ಹುನಗುಂದ ಶಾಸಕ ವಿಜಯಾನಂದ ಕಾಶಪ್ಪನವರ, ಸಂಸದ ಪಿ.ಸಿ.ಗದ್ದಿಗೌಡರ, ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಸೇರಿದಂತೆ ಜಿಲ್ಲೆಯ ಎಲ್ಲ ಶಾಸಕರು, ವಿಧಾನ ಪರಿಷತ್ ಶಾಸಕರು ಹಾಗೂ ಇತರೆ ಗಣ್ಯಮಾನ್ಯರು ಆಗಮಿಸಲಿದ್ದಾರೆ.

ಕರ್ನಾಟಕ ಸಾಹಿತ್ಯ ಅಕಾಡೆಮಿ ಸದಸ್ಯ ಮಹಾದೇವ ಬಸರಕೋಡ, ಬಾಲಕಿಯರ ಸರಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕ ಶಿವಶಂಕರ ಮುತ್ತಗಿ ಉಪನ್ಯಾಸ ನೀಡಲಿದ್ದಾರೆ.

# ಎಪ್ರೀಲ್ 6 ರಥೋತ್ಸವ, 7ಕ್ಕೆ ಓಕುಳಿ ಕಾರ್ಯಕ್ರಮ ಅಚನೂರಿನಲ್ಲಿ ಇಂದಿನಿಂದ ಜಾತ್ರಾ ಮಹೋತ್ಸವ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.29-ತಾಲೂಕಿನ ಅಚನೂರ ಗ್ರಾಮದಲ್ಲಿ ಮಾ.30 ರಿಂದ ಎಪ್ರೀಲ್ 7 ರವರೆಗೆ ಶ್ರೀ ಲಕ್ಷ್ಮೀನರಸಿಂಹೇಶ್ವರ ಹಾಗೂ ಶ್ರೀ ವಾರಿ ಮಾರುತೇಶ್ವರ ದೇವರ ಜಾತ್ರಾ ಮಹೋತ್ಸವ ಜರುಗಲಿದೆ.

ಮಾ.30 ಭಾನುವಾರದಿಂದ ಪ್ರತಿದಿನ ಸಂಜೆ 7 ರಿಂದ 9-30 ಗಂಟೆಯವರೆಗೆ ಗದಗನ ಪಂಡಿತ ಎಂ.ಕಲ್ಲಿನಾಥ ಶಾಸ್ತ್ರೀಗಳು ಅಡ್ನೂರ ಅವರಿಂದ ಪ್ರವಚನ, ನಂತರ ಅನ್ನ ಸಂತರ್ಪಣೆ, ರಾತ್ರಿ 10-30 ರಿಂದ ಪಲ್ಲಕ್ಕಿ ಉತ್ಸವ ಜರುಗಲಿದೆ.

ಬಿಲ್ ಕೆರೂರಿನ ಬಿಲ್ವಾಶ್ರಮ ಹಿರೇಮಠದ ಸಿದ್ಧಲಿಂಗ ಶಿವಾಚಾರ್ಯರ ದಿವ್ಯಸಾನಿಧ್ಯದಲ್ಲಿ ಜಾತ್ರಾಮಹೋತ್ಸವ ಕಾರ್ಯಕ್ರಮಗಳು ನಡೆಯಲಿದ್ದು, ಕೊಪ್ಪಳ ಗವಿಮಠದ ಅಭಿನವ ಗವಿಸಿದ್ದೇಶ್ವರ ಮಹಾಸ್ವಾಮೀಜಿ ಮತ್ತು ಕಕಮರಿಯ ರಾಯಲಿಂಗೇಶ್ವರ ಸಂಸ್ಥಾನ ಮಠದ ಅಭಿನವ ಗುರುಲಿಂಗಜಂಗಮ ಮಹಾಸ್ವಾಮೀಜಿ ಜಾತ್ರಾ ಮಹೋತ್ಸವದಲ್ಲಿ ಪಾಲ್ಗೊಳ್ಳುವರು.

ಎಪ್ರೀಲ್ 6 ಭಾನುವಾರ ಬೆಳಿಗ್ಗೆ 8 ಗಂಟೆಗೆ ಕುಂಭಮೇಳ ಜರುಗಲಿದ್ದು, ಸಾಯಂಕಾಲ 5-30 ಕ್ಕೆ ಮಹಾ ರಥೋತ್ಸವ ನಡೆಯುವುದು. ಅಂದೇ ರಾತ್ರಿ 10-30 ಗಂಟೆಗೆ 'ರೈತನ ರಾಜ್ಯದಲ್ಲಿ ರೌಡಿಗಳ ದರ್ಬಾರ' ಸಾಮಾಜಿಕ ನಾಟಕ ಪ್ರದರ್ಶನಗೊಳ್ಳಲಿದೆ.

ಎ.7 ಸೋಮವಾರ ಸಾಯಂಕಾಲ ಪಲ್ಲಕ್ಕಿ ಉತ್ಸವ ಹಾಗೂ ಓಕುಳಿ ಜರುಗಲಿದ್ದು, ರಾತ್ರಿ 1-30 ಗಂಟೆಗೆ ತಾಳಿಕೋಟಿಯ ಗುರು ಕಾಸ್ಗತೇಶ್ವರ ನಾಟ್ಯ ಸಂಘದವರಿಂದ 'ರೊಕ್ಕ ಇದ್ದವಂಗ ಸೊಕ್ಕ ಬಾಳ' ಹಾಸ್ಯ ನಾಟಕ ಪ್ರದರ್ಶನಗೊಳ್ಳಲಿದೆ ಎಂದು ಅಚನೂರ ಜಾತ್ರಾ ಮಹೋತ್ಸವ ಸಮಿತಿಯ ಪ್ರಕಟಣೆ ತಿಳಿಸಿದೆ.

# ಸಹಾಯವಾಣಿ ಸ್ಥಾಪನೆ-ನೋಡಲ್ ಅಧಿಕಾರಿಗಳ ನೇಮಕ ಕುಡಿಯುವ ನೀರಿನ ಕೊರತೆಯಾಗದಂತೆ ನಿಗಾವಹಿಸಿ: ಜಾನಕಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.29-ಜಿಲ್ಲೆಯಲ್ಲಿ ದಿನದಿಂದ ದಿನಕ್ಕೆ ತಾಪಮಾನ ಹೆಚ್ಚುತ್ತಿದ್ದು, ಕುಡಿಯುವ ನೀರಿನ ಪೂರೈಕೆಯಲ್ಲಿ ಕೊರತೆಯಾಗದಂತೆ ನಿಗಾವಹಿಸಲು ಜಿಲ್ಲಾಧಿಕಾರಿ ಜಾನಕಿ ಕೆ.ಎಂ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶನಿವಾರ ಕುಡಿಯುವ ನೀರಿನ ಲಭ್ಯತೆ ಮತ್ತು ಪೂರೈಕೆ ಕುರಿತು ಜರುಗಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಯಾವುದೇ ಕಾರಣಕ್ಕೂ ಜನ, ಜಾನುವಾರುಗಳಿಗೆ ಕುಡಿಯುವ ನೀರಿನ ಕೊರತೆ ಆಗದಂತೆ ಮುಂಜಾಗ್ರತಾ ಕ್ರಮವಹಿಸಬೇಕು. ಕುಡಿಯುವ ನೀರಿನ ಸಮಸ್ಯೆಗಳ ಬಗ್ಗೆ ಪ್ರತಿದಿನ ದಿನಪತ್ರಿಕೆಗಳಲ್ಲಿ ಪ್ರಕಟಣವಾಗುತ್ತಿದ್ದು, ಆಯಾ ತಾಲೂಕಿನ ಸಮಿತಿ ಅಧಿಕಾರಿಗಳು ಹಾಗೂ ನೋಡಲ್ ಅಧಿಕಾರಿಗಳು ಕೂಡಲೇ ಸಮಸ್ಯಾತ್ಮಕ ಗ್ರಾಮಗಳಿಗೆ ಖುದ್ದಾಗಿ ಭೇಟಿ ನೀಡಿ ಗ್ರಾಮದ ಕುಡಿಯುವ ನೀರಿನ ಸಮಸ್ಯೆ ಕುರಿತು ನೈಜತೆ, ಪ್ರಸ್ತುತ ಸ್ಥಿತಿ ಬಗ್ಗೆ ತುರ್ತು ಕ್ರಮವಹಿಸಲು ಸೂಚನೆ ನೀಡಿದರು.

ತಹಶೀಲ್ದಾರ, ತಾಲೂಕಾ ಪಂಚಾಯತ ಕಾರ್ಯನಿರ್ವಾಹಕ



ಅಧಿಕಾರಿ, ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿ ಹಾಗೂ ಗ್ರಾಮ ಆಡಳಿತ ಅಧಿಕಾರಿ ಹಂತದಲ್ಲಿ ಸಭೆ ನಡೆಸಿ ಸಮಸ್ಯಾತ್ಮಕ ಗ್ರಾಮಗಳಲ್ಲಿರುವ ಜನಸಂಖ್ಯೆ, ಖಾಸಗಿ ಕೊಳವೆ ಭಾವಿಗಳ ಸಂಖ್ಯೆಗಳ ಬಗ್ಗೆ ವರದಿ ಪಡೆದು ಖಾಸಗಿ ಕೊಳವೆ ಬಾವಿಗಳ ಮಾಲಿಕರ ಜೊತೆಗೆ ಒಪ್ಪಂದ ಮಾಡಿಕೊಳ್ಳಬೇಕು. ಭೂವಿಜ್ಞಾನ ಮತ್ತು ಅಂತರ್ಜಲ ಅಧಿಕಾರಿಗಳಿಗೆ ಕಳೆದ ವರ್ಷ ಅಂತರ್ಜಲದ ನೀರಿನ ಮಟ್ಟದ ಬಗ್ಗೆ ಸಮೀಕ್ಷೆ ಮಾಡಿರುವ ವರದಿ ಪಡೆದು ಅಗತ್ಯವಿದ್ದಲ್ಲಿ ಕೊಳವೆ ಬಾವಿಗಳನ್ನು ಕೊರೆಯಿಸಲು ಕ್ರಮವಹಿಸಬೇಕು. ನಗರ, ಗ್ರಾಮಗಳಲ್ಲಿರುವ ಶಾಲೆ, ವಸತಿ ನಿಲಯ ಹಾಗೂ ಆಸ್ಪತ್ರೆಗಳಲ್ಲಿ ಯಾವುದೇ ರೀತಿಯ ನೀರಿನ ತೆ-ಊಂದರೆ ಆಗದಂತೆ ನಿಗಾವಹಿಸಲು ಜಿಲ್ಲಾಧಿಕಾರಿಗಳು ತಿಳಿಸಿದರು.

ಕುಡಿಯುವ ನೀರಿನ ಬಗ್ಗೆ ಈಗಾಗಲೇ ಉಪವಿಭಾಗ ಹಾಗೂ ತಾಲೂಕಾ ಮಟ್ಟದಲ್ಲಿ ಸಭೆ ನಡೆಸಿದ ಬಗ್ಗೆ ಸಭೆಯಲ್ಲಿ ಮಾಹಿತಿ ಕೇಳಿದಾಗ ಜಮಖಂಡಿ ಉಪವಿಭಾಗಾಧಿಕಾರಿ ಶ್ವೇತಾ ಬೀಡಿಕರ ಮಾತನಾಡಿ, ಈಗಾಗಲೇ ರಬಕವಿ-ಬನಹಟ್ಟಿ, ಮುಧೋಳ, ಜಮಖಂಡಿ ಹಾಗೂ ಬೀಳಗಿ ತಾಲೂಕಾ ಕಚೇರಿಗಳಿಗೆ ಭೇಟಿ ನೀಡಿ ಅಧಿಕಾರಿಗಳೊಂದಿಗೆ ಸಭೆ ನಡೆಸಲಾಗಿದೆ. ಕುಡಿಯುವ ನೀರಿನ ಕೊರತೆಯಾಗದಂತೆ ಸೂಕ್ತ ಕ್ರಮವಹಿಸಲು ನಿರ್ದೇಶನ ನೀಡಲಾಗಿದೆ. ಹಿಡಕಲ್ ಜಲಾಶಯದಿಂದ ಘಟಪ್ರಭಾ ನದಿಗೆ 2 ಟಿಎಂಸಿ ನೀರನ್ನು ಬಿಡಲು ಬೆಳಗಾವಿ ಪ್ರಾದೇಶಿಕ ಆಯುಕ್ತರು ಆದೇಶಿಸಿದ್ದು, ನೀರು ಉದ್ದೇಶಿತ ಸ್ಥಳಕ್ಕೆ ತಲುಪುವಂತೆ ನೋಡಿಕೊಳ್ಳಲು ಈಗಾಗಲೇ ಕಂದಾಯ, ಪೊಲೀಸ್, ನೀರಾವರಿ ಹಾಗೂ ಹೆಸ್ಕಾಂ ಅಧಿಕಾರಿಗಳನ್ನೊಳಗೊಂಡ ತಂಡ ರಚಿಸಿ ಕ್ರಮವಹಿಸಲಾಗುತ್ತಿದೆ ಎಂದು ಸಭೆಗೆ ತಿಳಿಸಿದರು. ಬಾಗಲಕೋಟೆ ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ ಮಾತನಾಡಿ, ಬಾದಾಮಿ, ಬಾಗಲಕೋಟೆ ಹಾಗೂ ಗುಳೇದಗುಡ್ಡ ತಾಲೂಕಾ ಕಚೇರಿಗಳಿಗೆ ಭೇಟಿ ನೀಡಿದ್ದು, ಸಮಸ್ಯಾತ್ಮಕ ಗ್ರಾಮಗಳಲ್ಲಿ ಕುಡಿಯುವ ನೀರಿನ ತೊಂದರೆಯಾಗದಂತೆ ಖುದ್ದಾಗಿ ಸ್ಥಳ ವೀಕ್ಷಣೆ ಮಾಡಿ ವರದಿ ಸಲ್ಲಿಸಲು ಸೂಚಿಸಲಾಗಿದೆ. ವಿವಿಧ ಅಧಿಕಾರಿಗಳ ಜೊತೆ ಸಭೆ ಕೂಡಾ ನಡೆಸಲಾಗಿದೆ ಎಂದು ತಿಳಿಸಿದರು. ಸಮಸ್ಯಾತ್ಮಕ ಗ್ರಾಮಗಳಲ್ಲಿ ಖಾಸಗಿ ಕೊಳವೆ ಬಾವಿಗಳನ್ನು ಗುರುತಿಸಿ ಮಾಲಿಕರ ಜೊತೆ ಒಡಂಬಡಿಕೆ ಮಾಡಿಕೊಳ್ಳಬೇಕು. ಬಿಸಿಗಾಳಿಗೆ ಸಂಬಂಧಿಸಿದಂತೆ ಆರೋಗ್ಯ ಇಲಾಖೆಯಿಂದ ಹಾಗೂ ವಿಪತ್ತು ನಿರ್ವಹಣೆ ಇಲಾಖೆಯಿಂದ ಬಂದಿರುವ ಸಲಹೆ ಸೂಚನೆಗಳ ಬಗ್ಗೆ ಸಾರ್ವಜನಿಕರಿಗೆ ತಿಳಿಸುವ ಕೆಲಸವಾಗಬೇಕು ಎಂದು ಜಿಲ್ಲಾಧಿಕಾರಿ ಜಾನಕಿ ತಿಳಿಸಿದರು.

ಸಭೆಯಲ್ಲಿ ಜಂಟಿ ಕೃಷಿ ನಿರ್ದೇಶಕ ಲಕ್ಷ್ಮಣ ಕಳ್ಳೆನ್ನವರ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಸುರುಕೋಡ ಸೇರಿದಂತೆ ಜಿಲ್ಲಾ ಮಟ್ಟದ ನೋಡಲ್ ಅಧಿಕಾರಿಗಳು, ಆಯಾ ತಾಲೂಕಿನ ತಹಶೀಲ್ದಾರರು, ಕಾರ್ಯನಿರ್ವಾಹಕ ಅಧಿಕಾರಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಉಪಸ್ಥಿತರಿದ್ದರು.

**ಸಹಾಯವಾಣಿ ಕೇಂದ್ರ ಸ್ಥಾಪನೆ**

ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ಕ್ರಮಕೈಗೊಳ್ಳಲು ಜಿಲ್ಲಾಧಿಕಾರಿಗಳ ಕಚೇರಿ ಹಾಗೂ ತಹಶೀಲ್ದಾರ ಕಾರ್ಯಾಲಯದಲ್ಲಿ ದಿನದ 24 ಗಂಟೆಗಳ ಕಾಲ ಸಹಾಯವಾಣಿ ಕೇಂದ್ರ ಸ್ಥಾಪಿಸಲಾಗಿದೆ. ಸಾರ್ವಜನಿಕರು ತಮ್ಮ ಗ್ರಾಮ, ನಗರ, ಪಟ್ಟಣ ಪ್ರದೇಶಗಳಲ್ಲಿ ಕುಡಿಯುವ ನೀರು ಹಾಗೂ ಜಾನುವಾರುಗಳಿಗೆ ಮೇವಿನ ಅಭಾವ ಕಂಡುಬಂದಲ್ಲಿ ಜಿಲ್ಲಾಧಿಕಾರಿಗಳ ಕಾರ್ಯಾಲಯ (08354-236240), ತಹಶೀಲ್ದಾರ ಕಚೇರಿ ಬಾಗಲಕೋಟೆ (08354-235374), ಬಾದಾಮಿ (08347-200228), ಗುಳೇದಗುಡ್ಡ (08357-250140), ಹುನಗುಂದ (08351-200212), ಇಲಕಲ್ಲ (08351-271100), ಜಮಖಂಡಿ (08353-220023), ರಬಕವಿ-ಬನಹಟ್ಟಿ (08353-230555), ಮುಧೋಳ (08350-280051) ಹಾಗೂ ಬೀಳಗಿ (08425-275227)ಗೆ ಕರೆ ಮಾಡಬಹುದಾಗಿದೆ.

# ಆರ್ಥಿಕ ಸ್ಥಿತಿ ಸುಧಾರಣೆಗೆ ಸ್ವಸಹಾಯ ಸಂಘ ಸಹಕಾರಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.29-ಕುಟುಂಬಗಳ ಆರ್ಥಿಕ ಸ್ಥಿತಿ ಸುಧಾರಣೆಗೆ ಸ್ವಸಹಾಯ ಸಂಘಗಳು ಸಹಕಾರಿಯಾಗುತ್ತವೆ ಎಂದು ಬಿವಿವಿ ಸಂಘದ ಕಾರ್ಯಾಧ್ಯಕ್ಷ ಡಾ.ವೀರಣ್ಣ ಚರಂತಿಮಠ ಹೇಳಿದ್ದಾರೆ.

ನಗರದ ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘದ ಆವರಣದಲ್ಲಿರುವ ಕಣವಿ ವೀರಭದ್ರೇಶ್ವರ ಜಾತ್ರಾ ಮಹೋತ್ಸವದ ನಿಮಿತ್ಯ ವೀರಭದ್ರೇಶ್ವರ ಸಾಂಸ್ಕೃತಿಕ ಭವನದಲ್ಲಿ ಬಿ.ವಿ.ವಿ.ಸಂಘದ ಗ್ರಾಮೀಣ ಅಭಿವೃದ್ಧಿ ಪ್ರತಿಷ್ಠಾನ, ಬಿವಿವಿಎಸ್ ಕೋಟಕ್ ಮಹಿಂದ್ರಾ ಬ್ಯಾಂಕ, ಆರ್ಸೆಟ್ ಸಂಸ್ಥೆ, ಜನ ಶಿಕ್ಷಣ ಸಂಸ್ಥೆ, ಕರ್ನಾಟಕ ಕೃಷಿಕರ ಸಂಪನ್ಮೂಲ ಕೇಂದ್ರ ಮತ್ತು ಕಣವಿ ವೀರಭದ್ರೇಶ್ವರ ಟ್ರಸ್ಟ್ ಸಹಯೋಗದಲ್ಲಿ 3 ದಿನಗಳ ಕಾಲ ಏರ್ಪಡಿಸಿರುವ ಸ್ವಸಹಾಯ ಸಂಘಗಳ ಕುಶಲಕರ್ಮಿಗಳ ಮತ್ತು ಗ್ರಾಮ ಕೈಗಾರಿಕಾ ಉತ್ಪನ್ನಗಳ ಪ್ರದರ್ಶನ ಮಾರಾಟ ಮೇಳದ ಕುಶಲ ಗ್ರಾಮ ಮಳಿಗೆಗಳನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಸಂಘದ ಗೌರವ ಕಾರ್ಯದರ್ಶಿ ಮಹೇಶ ಅಥಣಿ, ಅಶೋಕ ಸಜ್ಜನ, ಮಹಾಂತೇಶ ಶೆಟ್ಟರ, ಮಲ್ಲಿಕಾರ್ಜುನ ಸಾಸನೂರ, ಕುಮಾರಸ್ವಾಮಿ ಹಿರೇಮಠ, ಡಾ.ಬಿ.ಎಸ್.ಅಂಗಡಿ ಸೇರಿದಂತೆ ಅನೇಕರು ಭಾಗವಹಿಸಿದ್ದರು.

ಕುಶಲ ಗ್ರಾಮದಲ್ಲಿ 30ಕ್ಕೂ ಹೆಚ್ಚು ಕರಕುಶಲ ಹಾಗೂ ಗ್ರಾಮ ಕೈಗಾರಿಕಾ ಉತ್ಪನ್ನ ಮಳಿಗಳು ಭಾಗವಹಿಸಿವೆ.

# ಸರ್ವೋತ್ತಮ ಸೇವಾ ಪ್ರಶಸ್ತಿಗೆ ನಾಮ ನಿರ್ದೇಶನಕ್ಕೆ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಮಾ.29-ರಾಜ್ಯ ಸರ್ಕಾರದ 2024 ಮತ್ತು 2025ನೇ ಸಾಲಿನ ಸರ್ವೋತ್ತಮ ಸೇವಾ ಪ್ರಶಸ್ತಿಗೆ ಆನ್‌ಲೈನ್‌ನಲ್ಲಿ ನಾಮ ನಿರ್ದೇಶನ ಸಲ್ಲಿಸಲು ಎಪ್ರೀಲ್ 14 ಅಂತಿಮ ದಿನಾಂಕ ನಿಗದಿಪಡಿಸಲಾಗಿದೆ.

ಉಲ್ಲೇಖಿತ ಸುತ್ತೋಲೆಯಲ್ಲಿ ನಾಮ ನಿರ್ದೇಶನಗಳನ್ನು ಏಪ್ರಿಲ್ 28 ರೊಳಗಾಗಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿತ್ತು. ನಂತರ ಸುತ್ತೋಲೆಯನ್ನು ಭಾಗಶ: ಪರಿಷ್ಕರಿಸಿ ಈಗ ಆನ್‌ಲೈನ್‌ನಲ್ಲಿ ನಾಮ ನಿರ್ದೇಶನವನ್ನು ಸಲ್ಲಿಸಲು ಏಪ್ರಿಲ್ 14 ಅಂತಿಮ ದಿನಾಂಕವನ್ನಾಗಿ ನಿಗದಿಪಡಿಸಲಾಗಿದೆ.

2024 ಮತ್ತು 2025ನೇ ಸಾಲಿನ ಸರ್ವೋತ್ತಮ ಸೇವಾ ಪ್ರಶಸ್ತಿಗೆ ನಾಮ ನಿರ್ದೇಶನ ಸಲ್ಲಿಸಲು ಹಿಂದಿನ ಕ್ಯಾಲೆಂಡರ್ ವರ್ಷಗಳಲ್ಲಿ ಮಾಡಿರುವ ಉಪಕ್ರಮ, ಸಾಧನೆಯನ್ನು ಪರಿಗಣಿಸಲಾಗುವುದು. 2023ನೇ ಸಾಲಿನಲ್ಲಿ ಯಾವ ಜಿಲ್ಲೆಗಳು ಜಿಲ್ಲಾ ಮಟ್ಟದ ಆಯ್ಕೆ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಿಲ್ಲವೋ ಅವರೂ ಸಹ ಪ್ರಕ್ರಿಯೆಯನ್ನು ಏಪ್ರಿಲ್ 16 ರೊಳಗೆ ಪೂರ್ಣಗೊಳಿಸುವುದು ಮತ್ತು ಆಯ್ಕೆ ಪೂರ್ಣಗೊಂಡ ಪಟ್ಟಿಯನ್ನು ಸರ್ಕಾರಕ್ಕೆ ಸಲ್ಲಿಸಲಾಗುವುದು.

2024 ಹಾಗೂ 2025ನೇ ಸಾಲಿನ ಎರಡು ವರ್ಷಗಳಿಗೆ ಪ್ರತಿ ವರ್ಷಕ್ಕೆ ತಲಾ ಇಬ್ಬರಂತೆ ಒಟ್ಟು 4 ಜನ ಅರ್ಹ ಅಧಿಕಾರಿ, ನೌಕರರನ್ನು ಸರ್ವೋತ್ತಮ ಸೇವಾ ಪ್ರಶಸ್ತಿಗೆ ಪರಿಗಣಿಸಲು ಜಿಲ್ಲೆಯಿಂದ ರಾಜ್ಯಮಟ್ಟಕ್ಕೆ ನಾಮ ನಿರ್ದೇಶನಗಳನ್ನು ಸೂಕ್ತ ಶಿಫಾರಸ್ಸಿನೊಂದಿಗೆ ಏಪ್ರಿಲ್ 16 ರೊಳಗೆ ಸರ್ಕಾರಕ್ಕೆ ವಿಳಂಬವಿಲ್ಲದೇ ನಿಗದಿತ ನಮೂನೆಯಲ್ಲಿ ಕಡ್ಡಾಯವಾಗಿ ಸಲ್ಲಿಸುವುದು.

ಬೆಂಗಳೂರು ನಗರದಲ್ಲಿ ಕಾರ್ಯನಿರ್ವಹಿಸುತ್ತಿರುವ ಇಲಾಖಾ ಹಂತ, ನಿರ್ದೇಶಕರ ಹಂತ ಮತ್ತು ಸಚಿವಾಲಯ ಹಂತದ ಅರ್ಹ ಅಧಿಕಾರಿ, ನೌಕರರು ಸಹ ಆನ್‌ಲೈನ್ ಮೂಲಕ ರಾಜ್ಯ ಮಟ್ಟದ ಪ್ರಶಸ್ತಿಗೆ ಏಪ್ರಿಲ್ 14 ರೊಳಗೆ ನಾಮ ನಿರ್ದೇಶನಗಳನ್ನು ಸಲ್ಲಿಸಬಹುದಾಗಿದೆ.

ಆಯ್ಕೆ ಪ್ರಕ್ರಿಯೆಯನ್ನು ಈ ಹಿಂದಿನ ಸುತ್ತೋಲೆಯಲ್ಲಿ ತಿಳಿಸಿರುವಂತೆ ಜಿಲ್ಲಾವಾರು ಆಯ್ಕೆ ಪ್ರಕ್ರಿಯೆಯನ್ನು ಪೂರ್ಣಗೊಳಿಸಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳ ಅನುಮೋದನೆಯೊಂದಿಗೆ ಸರ್ಕಾರದ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ (ಆಡಳಿತ ಸುಧಾರಣೆ)ಗೆ ಸಲ್ಲಿಸಬೇಕು ಎಂದು ಸರ್ಕಾರದ ಅಧೀನ ಕಾರ್ಯದರ್ಶಿ ಬಿ.ಎಸ್.ಲಕ್ಷ್ಮಣ

# ಉದ್ಯೋಗ ಖಾತ್ರಿ - ಕೂಲಿದರ 370 ರೂ.: ಸಿಇಓ ಶಶಿಧರ ಕುರೇರ್

ಮಲ್ಲಮ್ಮನುಡಿ ವಾರ್ತೆ

ಬಾಗಲಕೋಟೆ,ಮಾ.29 -ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಅಕುಶಲ ಕೂಲಿಕೆಲಸ ಮಾಡುವ ಗ್ರಾಮೀಣ ಕೂಲಿಕಾರರ ದಿನಗೂಲಿ ದರವನ್ನು 370 ರೂ ಗಳಿಗೆ ಹೆಚ್ಚಳ ಮಾಡಿ ಕೇಂದ್ರ ಗ್ರಾಮೀಣಾಭಿವೃದ್ಧಿ ಮತ್ತು ಮಂತ್ರಾಲಯವು ಆದೇಶ ಹೊರಡಿಸಿದೆ ಎಂದು ಬಾಗಲಕೋಟೆ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀ ಶಶಿಧರ ಕುರೇರ್ ತಿಳಿಸಿದ್ದಾರೆ.

2024-25 ನೇ ಸಾಲಿನಲ್ಲಿ ನರೇಗಾ ಯೋಜನೆಯಡಿ ಕೂಲಿ ಕೆಲಸ ಮಾಡುವ ಕೂಲಿ ಕಾರ್ಮಿಕರ ದಿನಗೂಲಿ ದರ 349 ರೂ.ಗಳಿದ್ದು, 2025-26 ನೇ ಸಾಲಿನಲ್ಲಿ ಏಪ್ರಿಲ್ 01 ರಿಂದ 370 ರೂ. ಗಳ ದಿನಗೂಲಿ ದರವನ್ನು ನಿಗದಿಪಡಿಸಿದೆ. ನರೇಗಾ ಯೋಜನೆಯಡಿ ಗ್ರಾಮೀಣ ಪ್ರದೇಶದ ಪ್ರತಿ ಅರ್ಹ ಕುಟುಂಬಕ್ಕೂ ಒಂದು ಆರ್ಥಿಕ ವರ್ಷದಲ್ಲಿ 100 ದಿನಗಳ ಅಕುಶಲ ಕೂಲಿ ಕೆಲಸ ಕೊಡಲಾಗುತ್ತದೆ. ಒಂದು ಕುಟುಂಬ ವರ್ಷದಲ್ಲಿ ನೂರು ದಿನ ಕೆಲಸ ಮಾಡಿದರೆ 37 ಸಾವಿರ ರೂ. ಗಳ ಕೂಲಿ ಹಣ ಪಡೆದುಕೊಳ್ಳಬಹುದು. ನರೇಗಾ ಯೋಜನೆಯಡಿ ಕೂಲಿ ಕೆಲಸ ಮಾಡುವ ಗಂಡು-ಹೆಣ್ಣಿಗೂ 370 ರೂ ಸಮಾನ ಕೂಲಿ ವೇತನ ಪಡೆಯಬಹುದು ಎಂದು ಅವರು ಪ್ರಕಟಣೆ ಮೂಲಕ ತಿಳಿಸಿದ್ದಾರೆ.

# ಅಕೌಂಟೆಂಟ್ ಹುದ್ದೆಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಮಾ.29-ಇಲ್ಲಿನ ನಿರ್ಮಿತಿ ಕೇಂದ್ರದಲ್ಲಿ ಅಕೌಂಟೆ-ಂಟ್ ಹುದ್ದೆಯನ್ನು ಒಂದು ವರ್ಷದ ಅವಧಿಗೆ ಹೊರಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಅಕೌಂಟೆಂಟ್-01 ಹುದ್ದೆಗೆ ಎಂ.ಕಾಂ ಅಥವಾ ಎಂಬಿಎ (ಹಣಕಾಸು) ಜೊತೆಗೆ ಟ್ಯಾಲಿ (ಇಆರ್‌ಪಿ9, ಟ್ಯಾಲಿ ಪ್ರೈಮ್) ಲೆಕ್ಕಪತ್ರ ನಿರ್ವಹಣೆಯಲ್ಲಿ 1 ವರ್ಷದ ಅನುಭವ, ಆದಾಯ ತೆರಿಗೆ ಟಿಡಿಎಸ್ ಚಲನ್‌ಗಳು ಮತ್ತು ಜಿಎಸ್‌ಟಿ, ಟಿಡಿಎಸ್ ಚಲನ್‌ಗಳನ್ನು ಭರ್ತಿ ಮಾಡುವುದು, ಎಂಎಸ್ ಆಫೀಸ್ ಮತ್ತು ಎಕ್ಸೆಲ್‌ನಲ್ಲಿ ಪರಿಣಿತಿ ಹೊಂದಿದ ಅಭ್ಯರ್ಥಿಗಳು ನಿಗದಿತ ಅರ್ಜಿ ನಮೂನೆಯನ್ನು ಜಿಲ್ಲಾಧಿಕಾರಿಗಳ ಕಚೇರಿಯ ಅಧಿಕೃತ ಜಾಲತಾಣ: https://raichur.nic.in ನಲ್ಲಿ ಡೌನ್‌ಲೋಡ್ ಮಾಡಿಕೊಂಡ ಏಪ್ರೀಲ್ 11ರ 5.30ರೊಳಗಾಗಿ ಅಗತ್ಯ ದಾಖಲೆಗಳೊಂದಿಗೆ ಈ ಕಚೇರಿಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ನಿರ್ಮಿತಿ ಕೇಂದ್ರವನ್ನು ಕಚೇರಿಯ ಸಮಯದಲ್ಲಿ ಸಂಪರ್ಕ ಮಾಡಬಹುದಾಗಿದೆ ಎಂದು ನಿರ್ಮಿತಿ ಕೇಂದ್ರದ ಯೋಜನಾ ವ್ಯವಸ್ಥಾಪಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಐ.ಎ.ಎಸ್ ಮತ್ತು ಕೆ.ಎ.ಎಸ್. ಪರೀಕ್ಷೆಗಳಿಗೆ ತರಬೇತಿ: ಹೆಸರು ನೋಂದಣಿಗೆ ಸೂಚನೆ

ಮಲ್ಲಮ್ಮನುಡಿ ವಾರ್ತೆ

ಕಲಬುರಗಿ.ಮಾ.29-ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ವತಿಯಿಂದ ಕೇಂದ್ರ ಲೋಕ ಸೇವಾ ಆಯೋಗದವರು ನಡೆಸಲಿರುವ ಐಎಎಸ್ ಹಾಗೂ ಕರ್ನಾಟಕ ಲೋಕ ಸೇವಾ ಆಯೋಗದವರು ನಡೆಸಲಿರುವ ಕೆಎಎಸ್ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ 50 ದಿನಗಳ ತರಬೇತಿಯನ್ನು ಮೈಸೂರಿನ ಕೇಂದ್ರ ಕಚೇರಿಯಲ್ಲಿ ನಡೆಸಲು ನಿರ್ಧರಿಸಲಾಗಿದೆ. ಆಸಕ್ತರು 2025ರ ಏಪ್ರಿಲ್ 2 ರೊಳಗಾಗಿ ಪ್ರತಿದಿನ ಬೆಳಿಗ್ಗೆ 10 ಗಂಟೆಯಿಂದ ಸಂಜೆ 4.30 ಗಂಟೆಯವರೆಗೆ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬೇಕು. ಹೆಚ್ಚಿನ ಮಾಹಿತಿಗಾಗಿ ಕಚೇರಿ ದೂರವಾಣಿ ಸಂಖ್ಯೆ 0821-2515944 ಗೆ ಸಂಪರ್ಕಿಸಬೇಕೆಂದು ಕರಾಮುವಿ ಕುಲಸಚಿವರು ತಿಳಿಸಿದ್ದಾರೆ.

# ಕಳುವಾದ ದ್ವಿಚಕ್ರ ವಾಹನಗಳ ಮಾಲೀಕರು ಗಮನಕ್ಕೆ

ಮಲ್ಲಮ್ಮನುಡಿ ವಾರ್ತೆ

ಕಲಬುರಗಿ.ಮಾ.29-ಕಲಬುರಗಿ ನಗರ ವಿಶ್ವವಿದ್ಯಾಲಯದ ಪೊಲೀಸ್ ಠಾಣೆಯ ಆವರಣದಲ್ಲಿ ವಾರಸುದಾರರಲ್ಲದ ಒಟ್ಟು ಹಳೆಯ 77 ದ್ವಿಚಕ್ರ ವಾಹನಗಳನ್ನು ನಿಲ್ಲಿಸಲಾಗಿದೆ. ಆದರೆ ಈವರೆಗೆ ವಾಹನಗಳ ಮಾಲೀಕರು ಪತ್ತೆಯಾಗಿರುವುದಿಲ್ಲ ಎಂದು ಕಲಬುರಗಿ ನಗರ ವಿಶ್ವವಿದ್ಯಾಲಯದ ಪೊಲೀಸ್ ಠಾಣೆಯ ಆರಕ್ಷಕ ನಿರೀಕ್ಷಕರು ತಿಳಿಸಿದ್ದಾರೆ. ಆರ್.ಟಿ.ಓ. ಇವರಿಂದ ಈ ವಾಹನ ಮಾಲೀಕರ ಮಾಹಿತಿಯನ್ನು ಪಡೆದುಕೊಂಡಿದ್ದು, ವಾಹನ ಮಾಲೀಕರ ಪತ್ತೆಗಾಗಿ ಈ ಪತ್ರಿಕಾ ಪ್ರಕಟಣೆ ಹೊರಡಿಸಲಾಗಿದ್ದು, ಯಾರಾದರೂ ತಮ್ಮ ವಾಹನಗಳು ಕಳೆದು ಹೋದಲ್ಲಿ ಕಲಬುರಗಿ ನಗರದ ವಿಶ್ವವಿದ್ಯಾಲಯದ ಪೊಲೀಸ್ ಠಾಣೆಗೆ ಭೇಟಿ ನೀಡಿ ತಮ್ಮ ದ್ವಿಚಕ್ರ ವಾಹನ ಗುರುತಿಸಿಕೊಂಡು ತಮ್ಮ ವಾಹನದ ಮೂಲ ದಾಖಲೆಗಳನ್ನು ತೆಗೆದುಕೊಂಡು ಬರಬೇಕು. ಈ ವಾಹನಗಳ ಮಾಲೀಕರು ಬಾರದೇ ಇದ್ದಲ್ಲಿ ಮುಂದಿನ ಕಾನೂನು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಅವರು ತಿಳಿಸಿದ್ದಾರೆ.

# ಸಡಗರ ಸಂಭ್ರಮದಿಂದ ಜರುಗಿದ ಮಲ್ಲಿಕಾರ್ಜುನ ದೇವಸ್ಥಾನ ಮೂರ್ತಿ ಪ್ರಾಣ ಪ್ರತಿಷ್ಟಾಪನೆ ಹಾಗೂ ಕಳಸಾರೋಹಣ

ಮಲ್ಲಮ್ಮ ನುಡಿ ವಾರ್ತೆ



ಹುಮನಾಬಾದ್:ನಾಗರಿಕಜಗತ್ತಿನಲ್ಲಿ ಸದೃಢ ಸಮಾಜದ ನಿರ್ಮಾಣಕ್ಕೆ ಪೂರ್ಕವಾಗಿ ಇಂದಿನ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಬೇಕು ಎಂದು ಕಲಬುರ್ಗಿ ವಿಭಾಗ ತಿಂಥಣಿ ಕನಕಗುರು ಪೀಠದ ಪೀಠಾಧಿಪತಿ ಸಿದ್ದರಾಮನಂದ ಪುರಿ ಸ್ವಾಮಿಜಿ ಹೇಳಿದರು.ತಾಲೂಕಿನ ಕಪ್ಪರಗಾಂವ ಗ್ರಾಮದ ಹೊರ ವಲಯದ ರಾಷ್ಟ್ರೀಯ ಹೆದ್ದಾರಿ 65ರ ಬದಿಯ ಮಲ್ಲಿಕಾರ್ಜುನ ದೇವಸ್ಥಾನದ ನೂತನ ಮೂರ್ತಿಯ ಪ್ರಾಣ ಪ್ರತಿಷ್ಠಾಪನೆ ಹಾಗೂ ಕಳಸಾರೋಹಣ ಕಾರ್ಯಕ್ರಮದಲ್ಲಿ ಆಶೀರ್ವಚನ ನೀಡಿದರು.

ಧಾರ್ಮಿಕ ಕ್ಷೇತ್ರದಲ್ಲಿ ಭಕ್ತಿ ಎಂಬುವುದು ವ್ಯವಹಾರ ಆಗಬಾರದು. ಕೇವಲ ಮನಸ್ಸಿನ ಶಾಂತಿ, ಸಮಾಧಾನಕ್ಕೆ ಭಕ್ತಿ ಮಾಡಬೇಕು. ಮೈಲಾರ ಮಲ್ಲಣ್ಣನ ಸನ್ನಿಧಾನದಲ್ಲಿ ಲಿಂಗ ತಾರತಮ್ಯ, ಜಾತಿ ಭೇದ ಭಾವವಿಲ್ಲದೇ ಎಲ್ಲರನ್ನು ಸಮಾನವಾಗಿ ಪರಿಗಣಿಸಿ ದೇವರ ದರ್ಶನಕ್ಕೆ ಅನುವು ಮಾಡಿಕೊಡಲಾಗುತ್ತದೆ. ಹೀಗಾಗಿ ಕಂಬಳಿ, ಡೊಳ್ಳು ಹಾಗೂ ಭಂಡಾರಕ್ಕೆ ಭಕ್ತಿ ಭಾವದಿಂದ ಗೌರವದಿಂದ ಕಾಣಬೇಕು ಎಂದರು.ಹುಡಗಿ ಹಿರೇಮಠದ ಪೀಠಾಧಿಪತಿ ವಿರುಪಾಕ್ಷ ಶಿವಾಚಾರ್ಯರು ಮಾತನಾಡಿ, ನಿತ್ಯ ಜೀವನದಲ್ಲಿ ನಿಸ್ವಾರ್ಥ ಮನೋಭಾನೆಯಿಂದ ಮಾಡಿದ ಪ್ರತಿಯೊಂದು ಕೆಲಸವು ಕೂಡ ಸಮಾಜದ ಒಳಿತಿಗೆ ದಾರಿ ಮಾಡಿಕೊಡುತ್ತವೆ. ಹೀಗಾಗಿ ಸಮಾಜದ ಒಳಿತಿಗಾಗಿ ಪ್ರತಿಯೊಬ್ಬರು ನಿಸ್ವಾರ್ಥ ಸೇವಾ ಮನೋಭಾನೆಗಳನ್ನು ಮೈಗೂಡಿಸಿಕೊಳ್ಳಬೇಕು ಎಂದರು.

ಹುಲಜಂತಿಯ ಮಾಳಿಂಗರಾಯ ಮಹಾರಾಜರು,ಶಿವಕುಮಾರ ಸ್ವಾಮಿಜಿ ಮಾತನಾಡಿದರು.

ಹಿಪ್ಪರಗಾಂವ ಗ್ರಾಮದ ಮಲ್ಲಿಕಾರ್ಜುನ್ ದೇವಸ್ಥಾನದ ಪ್ರದೀಪ ಮುತ್ಯಾ ಅವರ ತುಲಾಭಾರ ಕಾರ್ಯಕ್ರಮ ವೈಭವದಿಂದ ಜರುಗಿತು. ಇದೇ ಸಂದರ್ಭದಲ್ಲಿ ಮಲ್ಲಿಕಾರ್ಜುನ ದೇವಸ್ಥಾನದ ಪೂಜ್ಯ ಪ್ರದೀಪ ಮಹಾರಾಜರನ್ನು ಭಕ್ತಾದಿಗಳು ತುಲಾಭಾರ ಮೂಲಕ ಭಕ್ತಿಸೇವೆ ಸಲ್ಲಿಸಿದರು.ಎಂಎಲ್ ಸಿ ಡಾ. ಚಂದ್ರಶೇಖರ ಪಾಟೀಲ್, ಎಂಎಲ್ ಸಿ ಭೀಮರಾವ ಪಾಟೀಲ್,ಭಾಂತಿಬಾಯಿ ಶೇರಿಕಾರ, ಬಾಬು ಟೈಗರ್, ಸತೀಶ ರಾಂಪೂರೆ, ಶ್ರೀಮಂತ ಪಾಟೀಲ,ರಾಜಶೇಖರ ಪಾಟೀಲ್ ಮದರಗಾಂವ , ಮಲ್ಲಿಕಾರ್ಜುನ ಮಹೀಂದ್ರಕರ್,ಅಶೋಕ ಸೊಂಡೆ, ಸಂಜೀವಕುಮಾರ ವಡ್ಡನಕೇರಿ, ಸಂಗಪ್ಪ ಹೂಗೊಂಡ, ಶಿವರಾಜ ಚೀನಕೇರಿ, ಅಶೋಕ ಚಳಕಾಪುರೆ, ಸಚ್ಚಿನ ಕಲ್ಲೂರು, ಸೇರಿದಂತೆ ಅನೇಕರು ಇದ್ದರು.

# ಯತ್ನಾಳ್ ಉಚ್ಚಾಟನೆ ದುರದೃಷ್ಟಕರ: ಶರಣಪ್ರಕಾಶ್ ಪಾಟೀಲ್

ಮಲ್ಲಮ್ಮ ನುಡಿ ವಾರ್ತೆ



ಕಲಬುರಗಿ:ಮಾ.29: ಬಿಜೆಪಿ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅವರು ಭ್ರಷ್ಟಾಚಾರ ಮತ್ತು ಕುಟುಂಬ ರಾಜಕಾರಣದ ವಿರುದ್ಧ ಹೋರಾಟ ಮಾಡಿದ್ದಾರೆ. ಅವರನ್ನು ಉಚ್ಚಾಟನೆ ಮಾಡಿರುವುದು ದುರದೃಷ್ಟಕರ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಹೇಳಿದರು.

ಕಲಬುರಗಿಯಲ್ಲಿ ನಡೆಸಿದ ಸುದ್ದಿಗೋಷ್ಠಿಯನ್ನು ಮಾತನಾಡಿದ ಅವರು, ರಾಜಕಾರಣದಲ್ಲಿ ಉಚ್ಚಾಟನೆಯಂತಹ ಘಟನೆಗಳು ನಡೆಯಬಾರದು. ಕಾಂಗ್ರೆಸ್ ಪಕ್ಷಕ್ಕೆ ಯತ್ನಾಳ್ ಅವರನ್ನು ಕರೆತರಲು ತಾವು ಸಾಮರ್ಥ್ಯ ಹೊಂದಿಲ್ಲ. ಅದಕ್ಕಾಗಿ ಬೇರೆ ವ್ಯಕ್ತಿಗಳು ಇದ್ದಾರೆ ಎಂದರು.

ಹಾಲಿನ ದರ ಏರಿಕೆಯ ಬಗ್ಗೆ ಪ್ರತಿಕ್ರಿಯಿಸಿದ ಅವರು, ಹಾಲಿನ ದರ ಏರಿಕೆಯಾದರೂ ಹೆಚ್ಚುವರಿ 4 ರೂ. ನೇರವಾಗಿ ರೈತರಿಗೆ ಹೋಗುತ್ತದೆ. ಈ ಹೆಚ್ಚಳವನ್ನು ಕರ್ನಾಟಕ ಹಾಲು ಮಹಾಮಂಡಳಿ ಪಡೆದುಕೊಳ್ಳದೇ, ರೈತರಿಗೆ ಲಾಭವಾಗುವಂತೆ ಮಾಡಲಾಗಿದೆ. ಇತರ ರಾಜ್ಯಗಳ ಹಾಲಿನ ದರಗಳೊಂದಿಗೆ ಹೋಲಿಸಿದರೆ, ಉದಾಹರಣೆಗೆ ಗುಜರಾತ್‌ನಲ್ಲಿ, ನಮ್ಮ ರಾಜ್ಯದ ದರಗಳು ಸಮಾನವಾಗಿವೆ ಎಂದು ವಿವರಿಸಿದರು

# ತಮ್ಮನ ಹತ್ಯೆಗೈದ ಅಣ್ಣನಿಗೆ ಜೀವಾವಧಿ ಶಿಕ್ಷೆ

ಕಲಬುರಗಿ,ಮಾ.29: ಆಸ್ತಿ ಹಾಗೂ ಹಣಕಾಸಿನ ವಿಚಾರವಾಗಿ ತಮ್ಮನ ಕೊಲೆ ಮಾಡಿದ್ದ ಅಣ್ಣನಿಗೆ ಜೀವಾವಧಿ ಶಿಕ್ಷೆ ವಿಧಿಸಿ ನಾಲ್ಕನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯದ ನ್ಯಾಯಾಧೀಶ ಕರಣ ಗುಜ್ಜಾರ ಅವರು ಆದೇಶಿಸಿದ್ದಾರೆ.

ಕಾಳಗಿ ತಾಲ್ಲೂಕಿನ ವಟವಟಿ ಗ್ರಾಮದ ಅಮೃತ ವಟವಟಿ (45) ಶಿಕ್ಷೆಗೆ ಒಳಗಾದ ವ್ಯಕ್ತಿ.

ಘಟನೆಯ ವಿವರ: ವಟವಟಿ ಗ್ರಾಮದ ಭೀಮರಾಯ–ಪಾರ್ವತಿ ದಂಪತಿಗೆ ಒಟ್ಟು 45 ಎಕರೆ ಜಮೀನು ಇದ್ದು, ಅವಿವಾಹಿತನಾಗಿದ್ದ ಅವರ ಹಿರಿಯ ಮಗ ಅಮೃತನು ತಂದೆ ಭೀಮರಾಯ,ತಮ್ಮ ಶಿವರಾಜನೊಂದಿಗೆ ಜಮೀನು ಹಂಚಿಕೆ ಹಾಗೂ ಹಣಕಾಸಿನ ವಿಚಾರವಾಗಿ ಆಗಾಗ ಗಲಾಟೆ ಮಾಡುತ್ತಿದ್ದ. ಕೊಲೆ ಮಾಡುವ 15 ದಿನಗಳ ಮುಂಚೆ ಹೊಲದಲ್ಲಿ ಬೆಳೆದ ಈರುಳ್ಳಿಯನ್ನು ಹೇಳದೆ ಕೇಳದೆ ಹೈದರಾಬಾದಗೆ ಹೋಗಿ ಮಾರಾಟ ಮಾಡಿ ಬಂದಿದ್ದ ಈರುಳ್ಳಿಯ ಹಣವನ್ನು ನೀಡುವಂತೆ ಭೀಮರಾಯ ಹಾಗೂ ಶಿವರಾಜ ಒತ್ತಾಯಿಸುತ್ತಿದ್ದರು.2017ರ ಫೆಬ್ರುವರಿ 16ರಂದು ಜಮೀನಿನಲ್ಲಿ ಶಿವರಾಜನು ತಾಯಿ ಪಾರ್ವತಿ, ವಿಜಯಲಕ್ಷ್ಮಿ ಹಾಗೂ ಇತರರೊಂದಿಗೆ ಈರುಳ್ಳಿ ಕೀಳಲು ಹೋಗಿದ್ದರು. ಊಟಕ್ಕೆ ಕುಳಿತಿದ್ದ ಶಿವರಾಜನಿಗೆ ಹಿಂದಿನಿಂದ ಬಂದ ಅಮೃತ ಕೊಡಲಿಯಿಂದ ಹೊಡೆದ ಪರಿಣಾಮ ಶಿವರಾಜ ಸ್ಥಳದಲ್ಲೇ ಮೃತಪಟ್ಟಿದ್ದ. ಜಗಳ ಬಿಡಿಸಲು ಬಂದ ಮೃತನ ಪತ್ನಿಗೆ ಹೆದರಿಸಿ ಆರೋಪಿ ಪರಾರಿಯಾಗಿದ್ದ.

ಮೃತನ ಪತ್ನಿ ಕಾಳಗಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಿಸಿದ್ದರು. ಅಂದಿನ ಕಾಳಗಿ ಡಿವೈಎಸ್‌ಪಿ ಡಿ.ಬಿ. ಕಟ್ಟಿಮನಿ ಅವರು ಪ್ರಕರಣ ದಾಖಲಿಸಿಕೊಂಡು ಕೋರ್ಟಗೆ ದೋಷಾರೋಪಣ ಪಟ್ಟಿ ಸಲ್ಲಿಸಿದ್ದರು.

ಪ್ರಕರಣದ ವಿಚಾರಣೆ ನಡೆಸಿದ ನಾಲ್ಕನೇ ಹೆಚ್ಚುವರಿ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯದ ನ್ಯಾಯಾಧೀಶ ಕರಣ ಗುಜ್ಜಾರ ಅವರು ಆರೋಪಿಗೆ ಜೀವಾವಧಿ ಶಿಕ್ಷೆ ವಿಧಿಸಿ, ಮೃತನ ಪತ್ನಿ ವಿಜಯಲಕ್ಷ್ಮಿಗೆ 1 ಲಕ್ಷ ಪರಿಹಾರ ನೀಡುವಂತೆ ಆದೇಶಿಸಿದ್ದಾರೆ.ಸರಕಾರಿ ಅಭಿಯೋಜಕ ನಾಗರಾಜ ಅವರು ಸರ್ಕಾರದ ಪರವಾಗಿ ವಾದ ಮಂಡಿಸಿದ್ದರು.




# ಯತ್ನಾಳ್ ಉಚ್ಚಾಟನೆಗೆ ನಾನು ಹೊಣೆ ಅಲ್ಲ: ವಿಜಯೇಂದ್ರ

ಮಲ್ಲಮ್ಮ ನುಡಿ ವಾರ್ತೆ



ಬೆಂಗಳೂರು:ಮಾ.29: ಯತ್ನಾಳ್ ಉಚ್ಚಾಟನೆಯಲ್ಲಿ ನನ್ನ ಹಾಗೂ ಯಡಿಯೂರಪ್ಪ ಅವರ ಪಾತ್ರ ಇಲ್ಲ. ಅದು ನಮ್ಮ ತೀರ್ಮಾನವೂ ಅಲ್ಲ. ನಾವು ಅವರ ಉಚ್ಚಾಟನೆಗೆ ಜವಾಬ್ದಾರರೂ ಅಲ್ಲ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿವೈ ವಿಜಯೇಂದ್ರ ಸ್ಪಷ್ಟಪಡಿಸಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ಕೇಂದ್ರದ ವರಿಷ್ಠರು ಯತ್ನಾಳ್ ಅವರಿಗೆ ಹಲವು ಬಾರಿ ನೋಟಿಸ್ ಕೊಟ್ಟು ತಿದ್ದುವ ಕೆಲಸ ಮಾಡಿದ್ದಾರೆ. ನಾನೂ ಕೂಡಾ ಎಲ್ಲವನ್ನು ಸರಿಪಡಿಸಿಕೊಳ್ಳೋಣ ಎಂದು ಯತ್ನಾಳ್ ಅವರಿಗೆ ಹೇಳಿದ್ದೆ. ಸದನ ನಡೆಯುವಾಗ ನಾನೂ ಕೂಡಾ ಅವರನ್ನು ವೈಯಕ್ತಿಕ ಭೇಟಿ ಮಾಡಿ ಮಾತಾಡಿದ್ದೆ, ಭೋಜನಕ್ಕೆ ಆಹ್ವಾನಿಸಿದ್ದೆ. ಯತ್ನಾಳ್ ಜೊತೆಗಿನ ಗೊಂದಲಗಳನ್ನು, ಸಮಸ್ಯೆಗಳನ್ನು ನನ್ನ ಕಡೆಯಿಂದ ಸರಿಪಡಿಸಿಕೊಳ್ಳಲು ಪ್ರಾಮಾಣಿಕ ಪ್ರಯತ್ನ ಮಾಡಿದ್ದೇನೆ. ಆದರೆ ವಿಧಿಯಾಟ ಇದು. ಹೈಕಮಾಂಡ್‌ನವರು ಎಲ್ಲವನ್ನೂ ತುಲನೆ ಮಾಡಿ ಕೊನೆಗೆ ಈ ತೀರ್ಮಾನ ತೆಗೆದುಕೊಂಡಿದ್ದಾರೆ ಎಂದು ತಿಳಿಸಿದರು. ಇನ್ನು ಯತ್ನಾಳ್ ಅವರ ಉಚ್ಚಾಟನೆಯನ್ನು ನಾನು ಸಂಭ್ರಮಿಸಲ್ಲ. ಹಾಗೊಂದು ವೇಳೆ ನನಗೆ ಸಂಭ್ರಮಿಸುವ ಮನಸ್ಥಿತಿ ಇದೆ ಅಂತಾದರೆ ನಾನು ರಾಜ್ಯಾಧ್ಯಕ್ಷ ಆಗಲು ನಾಲಾಯಕ್ ಎಂದು ಸ್ಪಷ್ಟಪಡಿಸಿದರು.

ಯತ್ನಾಳ್ ಉಚ್ಚಾಟನೆ ಮರುಪರಿಶೀಲನೆಗೆ ಕೆಲವರ ಆಗ್ರಹ ವಿಚಾರ ಬಗ್ಗೆ ಮಾತನಾಡಿ, ರಾಜ್ಯದ ಅಧ್ಯಕ್ಷ ಆಗಿ ಹೈಕಮಾಂಡ್ ತೀರ್ಮಾನವನ್ನು ಗೌರವಿಸುವುದು ಅಷ್ಟೇ ನನ್ನ ಕೆಲಸ ಅಂತ ಹೇಳುವ ಮೂಲಕ ಮರುಪರಿಶೀಲನೆಗೆ ಒತ್ತಾಯಿಸಲ್ಲ ಅಂತ ಪರೋಕ್ಷವಾಗಿ ಸುಳಿವು ಕೊಟ್ಟರು.

ನಾನು ರಾಜ್ಯದ ಸಿಎಂ ಆಗಲು ಹೊರಟಿಲ್ಲ. ನಾನು ಪಕ್ಷ ಮತ್ತೆ ಅಧಿಕಾರಕ್ಕೆ ತರಬೇಕೆಂಬ ಉದ್ದೇಶದಿಂದ ವರಿಷ್ಠರು ಕೊಟ್ಟಿರುವ ಜವಾಬ್ದಾರಿ ನಿರ್ವಹಿಸುತ್ತಿದ್ದೇನೆ ಎಂದರು. ಇನ್ನು ರಮೇಶ್ ಜಾರಕಿಹೊಳಿ ಸಿಡಿ ಹಗರಣದ ಹಿಂದೆ ವಿಜಯೇಂದ್ರ, ಡಿಕೆಶಿ ಇದ್ದಾರೆಂಬ ಯತ್ನಾಳ್ ಆರೋಪಕ್ಕೆ ವಿಜಯೇಂದ್ರ ಪ್ರತಿಕ್ರಿಯೆ ಕೊಡಲಿಲ್ಲ

# ಸರ್ಕಾರಿ ಹುದ್ದೆಗಳ ನೇಮಕಾತಿ ನಕಲಿ ಆದೇಶ ಪ್ರತಿಗಳ ಜಾಲ: ವಂಚಕರಿಬ್ಬರ ಬಂಧನ

ಮಲ್ಲಮ್ಮ ನುಡಿ ವಾರ್ತೆ



ಕಲಬುರಗಿ:ಮಾ.29: ಜಿಲ್ಲಾಧಿಕಾರಿಗಳ ಕಚೇರಿಯ ಪರಿಚಾರಕ ಹುದ್ದೆಗಳೂ ಸೇರಿದಂತೆ ಸರ್ಕಾರದ ವಿವಿಧ ಇಲಾಖೆಗಳಲ್ಲಿನ ಹುದ್ದೆಗಳ ನಕಲಿ ನೇಮಕಾತಿ ಆದೇಶ ಪ್ರತಿಗಳನ್ನು ಸೃಷ್ಟಿಸಿ ಸಾರ್ವಜನಿಕರನ್ನು ವಂಚಿಸುತ್ತಿದ್ದ ಇಬ್ಬರು ಆರೋಪಿಗಳನ್ನು ಬಂಧಿಸಲಾಗಿದೆ ಎಂದು ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಅಡ್ಡೂರು ಶ್ರೀನಿವಾಸಲು ಅವರು ಹೇಳಿದರು.

ಪೋಲಿಸ್ ಭವನದಲ್ಲಿ ಶನಿವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಜಿಲ್ಲೆಯ ಮೇಳಕುಂದಾ (ಬಿ) ಗ್ರಾಮದ ನಿವಾಸಿ ಹಾಗೂ ಹಾಲಿ ವಸ್ತಿ ಮಹಾರಾಷ್ಟ್ರದ ಪುಣೆ ನಗರದ ನಾಗೇಶ್ ತಂದೆ ಲಕ್ಷ್ಮಣ್ ಸುಂಕನ್ ಮತ್ತು ಬೆಳಗಾವಿ ಜಿಲ್ಲೆಯ ಸವದತ್ತಿ ತಾಲ್ಲೂಕಿನ ಗುರ್ಲ ಹೊಸೂರಿನ ರಾಮಪುರದ ತಾರಿಹಾಳ್ ಓಣಿ ಪ್ರದೇಶದ ನಿವಾಸಿ ಅಭಿಷೇಕ್ ತಂದೆ ಸುಭಾಶ್ ಮಾತಾಡೆ ಅವರನ್ನು ಮಹಾರಾಷ್ಟ್ರದ ಸೊಲ್ಲಾಪುರದಲ್ಲಿ ಬಂಧಿಸಿ, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದರು.ಬಂಧಿತ ನಾಗೇಶನು ಏಳು ವಿವಿಧ ಬ್ಯಾಂಕ್ ಖಾತೆಗಳನ್ನು ಬಳಸಿ 9 ಜನರಿಗೆ ಪರಿಚಾರಕ ಹುದ್ದೆಯಿಂದ ಹಿಡಿದು ತಹಸಿಲ್ದಾರ್ ಗ್ರೇಡ್–2 ಹುದ್ದೆಗಳನ್ನು ಕೊಡಿಸುವುದಾಗಿ ನಂಬಿಸಿ ಅವರಿಂದ ಸುಮಾರು 8.55 ಲಕ್ಷ ರೂ.ಗಳನ್ನು ಪಡೆದುಕೊಂಡು ಪರಾರಿಯಾಗಿದ್ದ. ಆತನಿಂದ ಎರಡು ಮೊಬೈಲ್‌ಗಳು, ಎರಡು ಸಿಮ್ ಕಾರ್ಡ್‌ಗಳು, ಹತ್ತು ಬಯೋಡಾಟಾ ದಾಖಲಾತಿಗಳು, 43 ವಿವಿಧ ಹುದ್ದೆಗಳಾದ ಕಂದಾಯ ಇಲಾಖೆ, ಆದಾಯ ತೆರಿಗೆ ಇಲಾಖೆ, ರೈಲ್ವೆ ಇಲಾಖೆ, ಅಬಕಾರಿ ಇಲಾಖೆ, ಸಮಾಜ ಕಲ್ಯಾಣ ಇಲಾಖೆ, ಪಂಚಾಯಿತಿರಾಜ್, ವಾಣಿಜ್ಯ ತೆರಿಗೆ ಇಲಾಖೆ, ಆರೋಗ್ಯ ಇಲಾಖೆಯ ನಕಲಿ ನೇಮಕಾತಿ ಆದೇಶ ಪ್ರತಿಗಳು ಮತ್ತು 25000ರೂ.ಗಳನ್ನು ಜಪ್ತಿ ಮಾಡಿಕೊಳ್ಳಲಾಗಿದೆ. ಅಲ್ಲದೇ ಸುಮಾರು 90ರಿಂದ 100 ಜನರಿಗೆ ಸಂಪರ್ಕಿಸಿ ವಿವಿಧ ಹುದ್ದೆಗಳ ನಕಲಿ ಆದೇಶ ಪ್ರತಿಗಳನ್ನು ಮೊಬೈಲ್‌ನಲ್ಲಿ ತಯಾರಿಸಿಕೊಂಡು ಇಟ್ಟಿರುವುದು ಪತ್ತೆ ಮಾಡಲಾಗಿದೆ ಎಂದು ಅವರು ವಿವರಿಸಿದರು.ನಾಗೇಶನಿಗೆ ನಕಲಿ ನೇಮಕಾತಿ ಆದೇಶದ ಪ್ರತಿಗಳನ್ನು ಸೃಷ್ಟಿಸಿಕೊಡಲು ಆತನ ಸಹಚರ ಅಭಿಷೇಕ್‌ನು ಡಬ್ಲುಪಿಎಸ್ ಆಫೀಸ್ ಮತ್ತು ಸ್ಟಾಂಪ್ ಮೇಕರ್ ಆಪ್‌ಗಳ ಮೂಲಕ ನಕಲಿ ಆದೇಶ ಪ್ರತಿಗಳನ್ನು ಸೃಷ್ಟಿಸಿಕೊಡುತ್ತಿದ್ದು, ಒಂದು ನಕಲಿ ಆದೇಶ ಪತ್ರ ತಯಾರಿಸಿಕೊಟ್ಟಲ್ಲಿ 5000ರೂ.ಗಳನ್ನು ನಾಗೇಶನಿಂದ ಪಡೆಯುತ್ತಿದ್ದ. ಇಬ್ಬರು ವ್ಯಕ್ತಿಗಳಿಗೆ ಮೋಸ ಮಾಡಿ ಸುಮಾರು 6 ಲಕ್ಷ ರೂ.ಗಳನ್ನು ಪಡೆದಿದ್ದು, ಆ ಪೈಕಿ ಆತನಿಂದ ವಿವಿಧ ಇಲಾಖೆಯ ಹುದ್ದೆಗಳ 11 ನಕಲಿ ಆದೇಶ ಪ್ರತಿಗಳು, ಎರಡು ಮೊಬೈಲ್‌ಗಳು ಮತ್ತು 22000ರೂ.ಗಳನ್ನು ಜಪ್ತಿ ಮಾಡಿಕೊಂಡು ಶನಿವಾರವೇ ನ್ಯಾಯಾಂಗ ವಶಕ್ಕೆ ಒಪ್ಪಿಸಲಾಗಿದೆ ಎಂದು ಅವರು ತಿಳಿಸಿದರು.


**ಕರ್ನಾಟಕ ನೀರಾವರಿ ನಿಗಮ ನಿಯಮಿತ**
(ಕರ್ನಾಟಕ ಸರ್ಕಾರದ ಉದ್ಯಮ)
**ಕಾರ್ಯಪಾಲಕ ಅಭಿಯಂತರರು, ಕ.ನೀ.ನಿ.ನಿ.,ಕಾರಂಜಾ ಯೋಜನೆ ನಿರ್ಮಾಣ ವಿಭಾಗ ನಂ–1 ಬೀದರ**

ಸಂಖ್ಯೆ:ಕಾಅ/ಕ.ನೀ.ನಿ.ನಿ/ಕೆಪಿಸಿ–1/ಬೀದರ/ಪಿಬಿ–3/ಟೆಂಡರ/2024–25/2169 ದಿನಾಂಕ: 25.03.2025

**ಶೇಕಡಾವಾರು ಟೆಂಡರ ಅಧಿಸೂಚನೆ. (ಅಲ್ಪಾವಧಿ)**
**(ಇ–ಪ್ರೋಕ್ಯೂರಮೆಂಟ್ ಮುಖಾಂತರ ಮಾತ್ರ). (ಏಕ ಲಕೋಟೆಯಲ್ಲಿ)**

1) ಸಂಖ್ಯೆ:ಕಾಅ/ಕ.ನೀ.ನಿ.ನಿ/ಕೆಪಿಸಿ–1/ಬೀದರ /ಪಿಬಿ–3/ಟೆಂಡರ/2024–25/2040 ದಿನಾಂಕ: 03.03.2025
2) ಸಂಖ್ಯೆ:ಕಾಅ/ಕ.ನೀ.ನಿ.ನಿ/ಕೆಪಿಸಿ–1/ಬೀದರ/ಪಿಬಿ–3/ಟೆಂಡರ/2024–25/2084 ದಿನಾಂಕ: 11.03.2025

ವ್ಯವಸ್ಥಾಪಕ ನಿರ್ದೇಶಕರು ಕನೀನಿನಿ. ಬೆಂಗಳೂರು ಇವರ ಪರವಾಗಿ ಕೆಳಗೆ ಸಹಿ ಮಾಡಿರುವವರಿಂದ ಕಾರಂಜಾ ಯೋಜನೆಯ 2701 ಲೆಕ್ಕ ಶೀರ್ಷಿಕೆ ಅಡಿಯಲ್ಲಿ ಬರುವ ಕಾಮಗಾರಿಗೆ ಅರ್ಹ ಗುತ್ತಿಗೆದಾರರಿಂದ "ಇ"ಪ್ರೊಕ್ಯೂರಮೇಂಟ್‌ನಲ್ಲಿ ಶೇಕಡವಾರು ಏಕ–ಲಕೋಟೆಯ ಟೆಂಡರ ಕರೆಯಲಾಗಿದ್ದು, ವಿವರ ಈ ಕೆಳಗಿನಂತಿರುತ್ತವೆ

ಸದರಿ ಕಾಮಗಾರಿಗಳಿಗೆ (ಇಂಡೆಂಟ್ ಸಂ:2283/ CALL-2 & 2284/ CALL-2) ಟೆಂಡರಿಗಿಟ್ಟ ಮೊತ್ತವು ರೂ:7,61,615.41 ಹಾಗೂ ರೂ.7,61,624.90 (ಏಳು ಲಕ್ಷದ ಅರವತ್ತೊಂದು ಸಾವಿರದ ಆರು ನೂರಾ ಹದಿನೈದು ರೂಪಾಯಿ ಮತ್ತು ನಾಲ್ಕು ಒಂದು ಪೈಸೆ ಮಾತ್ರ ) ಹಾಗೂ (ಏಳು ಲಕ್ಷದ ಅರವತ್ತೊಂದು ಸಾವಿರದ ಆರು ನೂರಾ ಇಪ್ಪತ್ನಾಲ್ಕು ರೂಪಾಯಿ ಮತ್ತು ಒಂಬತ್ತು ಸೊನ್ನೆ ಪೈಸೆ ಮಾತ್ರ ) ಮತ್ತು ಇ.ಎಮ್.ಡಿ. ಮೊತ್ತವು 22500/– (ಇಪ್ಪತ್ತೆರದು ಸಾವಿರದ ಐದುನೂರು ಮಾತ್ರ) ಇದ್ದು, ಕೆಲಸದ ಅವಧಿ ಮಳೆಗಾಲ ಸೇರಿ 12 ತಿಂಗಳು ಇರುತ್ತದೆ. ಟೆಂಡರ್ ಪ್ರಕ್ರಿಯೆಗಳ ವೇಳಾಪಟ್ಟಿ :i) ಗುತ್ತಿಗೆದಾರರು ಇ–ಪೋರ್ಟಲ್‌ಅಡಿಯಲ್ಲಿ ಟೆಂಡರ್ ಹಾಕುವ ದಿನಾಂಕ 26-03-2025, b) The Last date of Submission of completed tender documents 02-04-2025 @ 16.00 Hrs c) Date of Opening of Technical Bid is 03-04-2025 @ 17.00 Hrs ನಂತರ ಆರ್ಥಿಕ ಬಿಡ್ಡನ್ನು ತೆರೆಯಲಾಗುವುದು. ಹೆಚ್ಚಿನ ವಿವರಗಳಿಗಾಗಿ ಕೆಳಗೆ ಸಹಿ ಮಾಡಿದವರ ಕಛೇರಿಗೆ ಕಛೇರಿ ವೇಳೆಯಲ್ಲಿ ಸಂಪರ್ಕಿಸಬಹುದು.

**ಸಹಿ/– ಕಾರ್ಯಪಾಲಕ ಅಭಿಯಂತರರು**
**ಕನೀನಿನಿ, ಕೆ.ಪಿ.ಸಿ.ವಿಭಾಗ ನಂ.1, ಬೀದರ.**

ವಾ.ಸಾ.ಸಂ.ಇ/ಬೀದರ/455/ಕೆ.ಎಸ್.ಎಂ.ಸಿ.&ಎ/2024–25



ಕರ್ನಾಟಕ ಸರಕಾರ
**ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಾಲಯ, ಕಲಬುರಗಿ**
ಇಮೇಲ್ : dhogulbarga@gmail.com ದೂರವಾಣಿ ಸಂಖ್ಯೆ: 08472–278619

ಕ್ರ.ಸಂ: DHO/KLB/TRP/Tend/01/2025-26 ದಿನಾಂಕ : 27–03–2025

**:: ಅಲ್ಪಾವಧಿ ಟೆಂಡರ ಅಧಿಸೂಚನೆ ::**

**Web site : www.kppp.karnataka.gov.in**

1) ಸರಕು: ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಕಲಬುರಗಿ ರವರ ಅಧೀನದಲ್ಲಿ ಬರುವ ಕಾರ್ಯಕ್ರಮ ಅಧಿಕಾರಿಗಳಿಗೆ ಒಟ್ಟು 07 ನಾಲ್ಕು ಚಕ್ರದ ವಾಹನಗಳನ್ನು ಹೊರಗುತ್ತಿಗೆ ಆಧಾರದ ಮೇಲೆ ವಾಹನ ಚಾಲಕರ ಸಮೇತ (6+1 Seat Capacity & Above ವಾಹನವು 2020ರ ಮೇಲ್ಪಟ್ಟ ಮಾಡೆಲ್‌ದಾಗಿರಬೇಕು) 7 ವಾಹನಗಳಲ್ಲಿ ಒಂದು ವಾಹನದ ವೆಚ್ಚವನ್ನು ಎನ್.ಹೆಚ್.ಎಮ್. ಅಡಿಯಲ್ಲಿ ಭರಿಸಲಾಗುವುದು. 2) ಟೆಂಡರ್ ಅಂದಾಜು ಮೊತ್ತ : 33,60,000/- (per month 40,000/- +GST), 3) ಟೆಂಡರ್ ಇ.ಎಮ್.ಡಿ. ಮೊತ್ತದ ವಿವರ : EMD amount 2.5% for tender amount, 4) ಟೆಂಡರ್ ಪ್ರಾರಂಭದ ದಿನಾಂಕ : 28–03–2025, 5) ಟೆಂಡರ್ ಸಲ್ಲಿಸುವ ಅಂತಿಮ ದಿನಾಂಕ : 15–04–2025 ಸಾಯಂಕಾಲ 04:00 ಗಂಟೆಯವರೆಗೆ, 6) ತಾಂತ್ರಿಕ ಬಿಡ್ ತೆರೆಯುವ ದಿನಾಂಕ : 17–04–2025 ಸಾಯಂಕಾಲ 04:00 ಗಂಟೆಗೆ, ಜಿಲ್ಲಾ ಆರೋಗ್ಯ ಮತ್ತು ಕು.ಕ. ಅಧಿಕಾರಿಗಳ ಕಾರ್ಯಾಲಯ ಕಲಬುರಗಿ, 7) ತಾಂತ್ರಿಕ ಬಿಡ್‌ನಲ್ಲಿ ಅರ್ಹರಾದ ಬಿಡ್‌ದಾರರ ಹಣಕಾಸಿನ ಬಿಡ್ ತೆರೆಯುವ ದಿನಾಂಕ : 21–04–2025 ಬೆಳಿಗ್ಗೆ 11:30 ಗಂಟೆಗೆ, 8) ಹೆಚ್ಚಿನ ವಿವರಗಳಿಗೆ ಸಂಪರ್ಕಿಸಬೇಕಾದ ವಿಳಾಸ, ದೂರವಾಣಿ ಸಂಖ್ಯೆ: ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು, ಕಲಬುರಗಿ ಪೋ. ನಂ. 08472–278619/ಜಗನ್ನಾಥ (STM) 9845125763

**ಸಹಿ/– ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು, ಕಲಬುರಗಿ**

ವಾ.ಸಾ.ಸಂ.ಇ/ಕಲಬುರಗಿ/1169/ಕೆ.ಎಸ್.ಎಂ.ಸಿ.&ಎ/2024–25





Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.